# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಆಗಸ್ಟ್ 3 ಶನಿವಾರ 2024 | ₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 109 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*




ಮೈಸೂರು ಮಿತ್ರ



# ಪಾದಯಾತ್ರೆ ವಿರೋಧಿಸಿ ಇಂದು ಮೈಸೂರಿನ ಬಿಜೆಪಿ ಕಚೇರಿಗೆ ಮುತ್ತಿಗೆ

## ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಶಿವರಾಮ್ ಘೋಷಣೆ


ಶಿವರಾಮ್

ಮೈಸೂರು, ಆ.2(ಜಿಎ)–ಬಿಜೆಪಿ ಮತ್ತು ಜೆಡಿಎಸ್ ಪಾದಯಾತ್ರೆ ಖಂಡಿಸಿ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ನಾಳೆ (ಆ.3) ಬೆಳಗ್ಗೆ 10.30ಕ್ಕೆ ನಗರದ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲಿದೆ ಎಂದು ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10.30ಕ್ಕೆ ನಗರದ ಮಹಾರಾಜ ಕಾಲೇಜು ಮೈದಾನದ ಬಳಿ ಒಟ್ಟುಗೂಡಿ ಬಳಿಕ ನ್ಯಾಯಾಲಯದ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ನಂತರ ಕಾಲ್ನಡಿಗೆಯಲ್ಲಿ ಬಿಜೆಪಿ ಕಚೇರಿಗೆ ತೆರಳಿ ಮುತ್ತಿಗೆ ಹಾಕಲಾಗುವುದು ಎಂದರು.

ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಲು ರಾಜಭವನಕ್ಕೆ ಕೇಂದ್ರ ಬಿಜೆಪಿ ನಾಯಕರು ಸುಪಾರಿ ನೀಡಿದ್ದು, ಬಿಜೆಪಿ–ಜೆಡಿಎಸ್ ಮುಡಾ ಹಾಗೂ ವಾಲ್ಮೀಕಿ ಹಗರಣ ಮುಂದಿಟ್ಟುಕೊಂಡು ಷಡ್ಯಂತ್ರ ನಡೆಸಿವೆ. ಈ ಎರಡೂ ಹಗರಣಗಳಲ್ಲಿ ತಮ್ಮ ಪಾತ್ರ ಇಲ್ಲ ಎಂದು ಸಿದ್ದರಾಮಯ್ಯ ಅವರು ದಾಖಲೆ ಸಮೇತ ತಿಳಿಸಿದ್ದಾರೆ. ಆದರೂ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಲು ಬಿಜೆಪಿ–ಜೆಡಿಎಸ್ ಪಾದಯಾತ್ರೆ ಹಮ್ಮಿಕೊಂಡಿವೆ ಎಂದರು.

ಬಹುಜನರ ರಾಜಕೀಯ ಧ್ವನಿಯಾಗಿರುವ ಸಿಎಂ ಅವರನ್ನು ದಮನ ಮಾಡಿದಲ್ಲಿ ಕೋಮುವಾದ, ಜಾತಿವಾದ ಮತ್ತೆ ಅಸ್ತಿತ್ವಕ್ಕೆ ತರಬಹುದೆಂಬುದು ಈ ಎರಡೂ ಪಕ್ಷಗಳ ಉದ್ದೇಶವಾಗಿದೆ ಎಂದು ಆರೋಪಿಸಿದರು.

ಸಿದ್ದರಾಮಯ್ಯ ಅವರ ಅಹಿಂದ ಧ್ವನಿ ಅಡಗಿಸಲು ಈ ಹುನ್ನಾರ ನಡೆಸಲಾಗುತ್ತಿದೆ. ಅವರ ಸಾಮಾಜಿಕ ಬದ್ಧತೆ, ಕೋಮುವಾದ ಖಂಡಿಸುವ ರೀತಿ ಇವರಿಗೆ ಹಿಡಿಸದಾಗಿದೆ. ಸಿದ್ದರಾಮಯ್ಯ ದಕ್ಷಿಣ ಭಾರತದ ಹೆಬ್ಬಾಗಿಲಾಗಿದ್ದು, ಅವರನ್ನು ಮುಗಿಸಲು ಷಡ್ಯಂತ್ರ ನಡೆಸಿದ್ದಾರೆ. ಅವರ ಪರವಾಗಿ ಅಹಿಂದ ಸಮುದಾಯ ನಿಲ್ಲಲಿದೆ ಎಂದರು. ಶೋಷಿತ ಸಮುದಾಯಗಳಿಗೆ ಐದು ಗ್ಯಾರಂಟಿಗಳನ್ನು ನೀಡಿ ಅವರ ಪ್ರೀತಿಗಳಿಸಿರುವ ಸಿಎಂ ಸಿದ್ದರಾಮಯ್ಯ ಅವರನ್ನು ಹೇಗಾದರೂ ಮಾಡಿ ಮುಖ್ಯಮಂತ್ರಿ ಸ್ಥಾನದಿಂದ ಇಳಿಸದಿದ್ದರೆ ಮುಂದಿನ ದಿನಗಳಲ್ಲಿ ಸಿದ್ದರಾಮಯ್ಯನವರು ನೊಂದ ಸಮಾಜಗಳಿಗೆ ಇನ್ನು ಹತ್ತಾರು ಕಾರ್ಯಕ್ರಮಗಳನ್ನು ಕೊಟ್ಟು ಮುಂದೆ ನಡೆಯುವ ಚುನಾವಣೆಗಳಲ್ಲೂ ಕೂಡ ಇವರೇ ಅಧಿಕಾರ ಹಿಡಿಯುತ್ತಾರೆ. ನಮಗೆ ಅಧಿಕಾರ ಸಿಗುವುದಿಲ್ಲ. ಆದರಿಂದ ಏನಾದರೂ ಮಾಡಿ ಇಲ್ಲಸಲ್ಲದ ಆರೋಪಗಳನ್ನು ಮಾಡಿ ಕೆಳಗಿಳಿಸಬೇಕೆಂದು ಈ ರೀತಿ ಮಾಡುತ್ತಿದ್ದಾರೆ ಎಂದು ಇದೇ ವೇಳೆ ಮಾತನಾಡಿದ ಕಾಂಗ್ರೆಸ್ ಹಿಂದುಳಿದ ವರ್ಗ ಸಮಿತಿ ಅಧ್ಯಕ್ಷ ಎನ್.ಆರ್.ನಾಗೇಶ್ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ರವಿನಂದನ್, ಶಿವಣ್ಣ ಯೋಗೇಶ್ ಉಪ್ಪಾರ್, ರಾಜಶೇಖರ್, ಲೋಕೇಶ್‌ಕುಮಾರ್ ಉಪಸ್ಥಿತರಿದ್ದರು.

## ನಿಧನ



### ಡಾ.ಎನ್.ಆರ್.ರಾಮಚಂದ್ರರಾವ್

ಮೈಸೂರು, ಆ.2–ನಿವೃತ್ತ ಟ್ರಾಫಿಕ್ ವಾರ್ಡನ್ ಡಾ. ಎನ್.ಆರ್.ರಾಮಚಂದ್ರರಾವ್ (92) ಗುರುವಾರ ಜಯನಗರದ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ಮೂವರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು.

# ತೆಲಂಗಾಣ ಚುನಾವಣೆಗೆ ಹಣ ನೀಡುವಂತೆ ಸಿದ್ದರಾಮಯ್ಯರಿಗೆ ಹೈಕಮಾಂಡ್ ಸೂಚಿಸಿತ್ತು

## ಮೈಸೂರಿನಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪ


ಕೇಂದ್ರ ಸಚಿವರಾದ ನಂತರ ಮೊದಲ ಬಾರಿಗೆ ಮೈಸೂರು ಬಿಜೆಪಿ ಕಚೇರಿಗೆ ಆಗಮಿಸಿದ ಶೋಭಾ ಕರಂದ್ಲಾಜೆ ಅವರನ್ನು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಸನ್ಮಾನಿಸಿದರು.

ಮೈಸೂರು, ಆ.2(ಬಿಎಲ್‌ಯು)–ತೆಲಂಗಾಣ ವಿಧಾನಸಭಾ ಚುನಾವಣೆಗೆ ಹಣ ಕೊಡಲು ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಕಾಂಗ್ರೆಸ್ ಹೈಕಮಾಂಡ್ ಜವಾಬ್ದಾರಿ ನೀಡಿತ್ತು. ಈ ಹಿನ್ನೆಲೆಯಲ್ಲಿ ವಾಲ್ಮೀಕಿ ನಿಗಮದ ಹಣ ರವಾನೆ ಮಾಡಿದ್ದಾರೆ ಎಂದು ಕೇಂದ್ರ ಕಾರ್ಮಿಕ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ. ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಈ ಹಿನ್ನೆಲೆ ವಾಲ್ಮೀಕಿ ನಿಗಮದ ಹಗರಣದ ಹೊಣೆಯನ್ನು ಸ್ವತಃ ಸಿದ್ದರಾಮಯ್ಯ ಅವರೆ ಹೊರಬೇಕು ಎಂದು ಆಗ್ರಹಿಸಿದರು.

ಇದು ರಾಜ್ಯದ ಬಡ ಜನರ ತೆರಿಗೆ ಹಣವಾಗಿದ್ದು, ಇದನ್ನು ಅದು ಹೇಗೆ ನೀಡಿದರು ಎಂದು ಪ್ರಶ್ನಿಸಿದ ಶೋಭಾ ಕರಂದ್ಲಾಜೆ, ವಾಲ್ಮೀಕಿ ನಿಗಮದ ಹಗರಣದಲ್ಲಿ ನಾಗೇಂದ್ರ ನೆಪ ಮಾತ್ರ, ಆದರೆ ಇದರ ಹಿಂದಿರುವ ಶಕ್ತಿ ಸಿದ್ದರಾಮಯ್ಯ ಎಂದು ಆಪಾದಿಸಿದರು.

ಮುಡಾ ಹಾಗೂ ವಾಲ್ಮೀಕಿ ಹಗರಣದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ಶನಿವಾರ ಆರಂಭಿಸುವ ಪಾದಯಾತ್ರೆಯಲ್ಲಿ ನಾನು ಕೂಡ ಭಾಗಿಯಾಗಲಿದ್ದೇನೆ. ಸಂಸತ್ ಅಧಿವೇಶನದಲ್ಲಿ ಕೆಲವು ಬಿಲ್‌ಗಳು ಮಂಡನೆಯಾಗುವ ಕಾರಣ ಪಾದಯಾತ್ರೆಯ ಆರಂಭ ಹಾಗೂ ಸಮಾವೇಶದಲ್ಲಿ ಮಾತ್ರ ಭಾಗಿಯಾಗುತ್ತೇನೆ ಎಂದು ತಿಳಿಸಿದರು. ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ನಡೆಸುತ್ತಿರುವ ಜನಾಂದೋಲನಕ್ಕೆ ಕಿಡಿಕಾರಿದ ಶೋಭಾ ಕರಂದ್ಲಾಜೆ, ಬಿಜೆಪಿ ಅಧಿಕಾರದಲ್ಲಿ ಇಲ್ಲದಿರುವ ರಾಜ್ಯಗಳಿಗೂ ಬಜೆಟ್‌ನಲ್ಲಿ ಅನುದಾನ ನೀಡಲಾಗಿದೆ. ಹಾಗೆಯೇ ಕರ್ನಾಟಕದ ರೈಲ್ವೆ, ಹೆದ್ದಾರಿ ಅಭಿವೃದ್ಧಿಗೆ ಕೂಡ ಕೇಂದ್ರ ಸರ್ಕಾರ ಸಾಕಷ್ಟು ಅನುದಾನ ನೀಡಿದೆ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ನವರು ಮೊದಲು ಅಂಕಿ ಅಂಶ ಇಟ್ಟುಕೊಂಡು ಮಾತನಾಡಬೇಕು. ಆಗ ನಾನು ಕೂಡ ಅವರಿಗೆ ಅಂಕಿ ಅಂಶಗಳ ಸಮೇತ ಉತ್ತರ ನೀಡುತ್ತೇನೆ. ಅದು ಬಿಟ್ಟು ಆಧಾರ ರಹಿತ ಆರೋಪ ಮಾಡುವುದು ಸರಿಯಲ್ಲ ಎಂದು ಹೇಳಿದರು.

ಮೇಕೆದಾಟು ಯೋಜನೆ ಬಗ್ಗೆ ನ್ಯಾಯಾಲಯದಲ್ಲಿರುವ ಸಮಸ್ಯೆಯನ್ನು ಮೊದಲು ಇತ್ಯರ್ಥಪಡಿಸಿಕೊಂಡು ನಂತರ ಕೇಂದ್ರ ಸರ್ಕಾರಕ್ಕೆ ಬರಲಿ ಎಂದು ಸಲಹೆ ನೀಡಿದರು.

ರಾಜ್ಯದಲ್ಲಿ ಅತಿವೃಷ್ಟಿ ಉಂಟಾಗಿದೆ. ಆದರೆ ದೇಶದ ಹಲವಡೆ ಈಗಲೂ ಬರಗಾಲವಿದೆ. ಈ ಹಿನ್ನೆಲೆ ಇಂತಹ ಸಂಕಷ್ಟ ಪರಿಸ್ಥಿತಿಯಿಂದ ಪಾರು ಮಾಡುವಂತೆ ನಾಡ ದೇವತೆ ತಾಯಿ ಚಾಮುಂಡೇಶ್ವರಿ ಕೇಳಿಕೊಂಡಿದ್ದೇನೆ ಎಂದು ಶೋಭಾ ಕರಂದ್ಲಾಜೆ ತಿಳಿಸಿದರು.

ಕೇಂದ್ರ ಸಚಿವರಾದ ನಂತರ ಮೊದಲ ಬಾರಿಗೆ ಬಿಜೆಪಿ ಕಚೇರಿಗೆ ಆಗಮಿಸಿದ ಶೋಭಾ ಕರಂದ್ಲಾಜೆ ಅವರನ್ನು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಮೇಯರ್ ಸಂದೇಶ್ ಸ್ವಾಮಿ, ಶಿವಕುಮಾರ್, ಮುಖಂಡ ಮೈ.ವಿ.ರವಿಶಂಕರ್ ಹಾಗೂ ಇತರರು ಉಪಸ್ಥಿತರಿದ್ದರು.

# ಬುದ್ಧಿಮಾಂದ್ಯ ಮಹಿಳೆ ಮೇಲೆ ಅತ್ಯಾಚಾರ: ಆರೋಪಿಗೆ 10 ವರ್ಷ ಕಠಿಣ ಶಿಕ್ಷೆ

ಮೈಸೂರು, ಆ.2(ಆರ್‌ಕೆ)– ಬುದ್ಧಿಮಾಂದ್ಯ ಮಹಿಳೆ ಮೇಲೆ ಅತ್ಯಾಚಾರ ವೆಸಗಿದ್ದ ಆರೋಪಿಗೆ ಮೈಸೂರಿನ ನ್ಯಾಯಾಲಯವು 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿ ಇಂದು ತೀರ್ಪು ನೀಡಿದೆ.

ಪಿರಿಯಾಪಟ್ಟಣ ತಾಲೂಕು, ಆವರ್ತಿ ಗ್ರಾಮದ ಲೇಟ್ ಸಣ್ಣಶೆಟ್ಟಿ ಮಗ ಕುಮಾರ ಅಲಿಯಾಸ್ ಕುಮಟಿ(47) ಶಿಕ್ಷೆಗೊಳಗಾದ ಆರೋಪಿ. 2022ರ ಏಪ್ರಿಲ್ 27ರಂದು ಗ್ರಾಮದ 19 ವರ್ಷದ ಬುದ್ಧಿಮಾಂದ್ಯ ಮಹಿಳೆ ಏಕಾಂಗಿಯಾಗಿ ಇರುವಾಗ ಮಧ್ಯಾಹ್ನ ಮನೆಗೆ ನುಗ್ಗಿ, ಮನೆ ಬಾಗಿಲು ಹಾಕಿ, ಸಂತ್ರಸ್ತೆ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿ ಪರಾರಿಯಾಗಿದ್ದ.

ಆಕೆಯ ತಾಯಿ ನೀಡಿದ ದೂರಿನನ್ವಯ ಬೈಲಕುಪ್ಪೆ ಠಾಣೆಯ ಅಂದಿನ ಸರ್ಕಲ್ ಇನ್ಸ್‌ಪೆಕ್ಟರ್ ಬಿ.ಜಿ. ಪ್ರಕಾಶ್ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡು ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಮೈಸೂರಿನ 7ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಎಂ. ರಮೇಶ, ವಾದ–ಪ್ರತಿವಾದಗಳನ್ನು ಅಲಿಸಿ ಸಾಕ್ಷ್ಯಾಧಾರಗಳಿಂದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಕುಮಾರನಿಗೆ ಐಪಿಸಿ ಕಲಂ 376(2)(ಎಲ್) ಅಡಿ ಅಪರಾಧಕ್ಕೆ 10 ವರ್ಷಗಳ ಕಠಿಣ ಸಜೆ ಮತ್ತು 50,000 ರೂ. ದಂಡ, ಕಲಂ 450 ರಡಿ ಅಪರಾಧಕ್ಕೆ 6 ತಿಂಗಳ ಸೆರೆಮನೆ ವಾಸ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಕೆ. ನಾಗರಾಜ ವಾದ ಮಂಡಿಸಿದ್ದರು.

# ಅಖಿಲ ಭಾರತ ವಾಕ್, ಶ್ರವಣ ಸಂಸ್ಥೆಯಲ್ಲಿ ಔಟ್‌ರೀಚ್ ಘಟಕ ಉದ್ಘಾಟನೆ


ಮೈಸೂರಿನ ಆಯಿಷ್‌ನಲ್ಲಿ ಔಟ್‌ರೀಚ್ ಘಟಕ ಉದ್ಘಾಟಿಸಿದ ಆಯುಷ್ ಇಲಾಖೆ ಆಯುಕ್ತ ಡಾ. ಶ್ರೀನಿವಾಸಲು, ವಾಕ್, ಶ್ರವಣ ದೋಷವಿರುವ ಮಕ್ಕಳಿಗೆ ಥೆರಪಿ ಚಿಕಿತ್ಸಾ ವಿಧಾನವನ್ನು ವೀಕ್ಷಿಸಿದರು. ಆಯಿಷ್ ನಿರ್ದೇಶಕಿ ಡಾ.ಎಂ.ಪುಷ್ಪಾವತಿ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಪುಷ್ಪ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಆ. 2(ಆರ್‌ಕೆ)– ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ (ಎಐಐಎಸ್‌ಹೆಚ್)ಯ ಸೆಂಟರ್ ಆಫ್ ಎಕ್ಸಲೆನ್ಸ್ ಕಟ್ಟಡದಲ್ಲಿ ಆಯುಷ್ ಇಲಾಖೆ ಆಯುಕ್ತ ಡಾ. ಶ್ರೀನಿವಾಸಲು ಆಯಿಷ್ ಔಟರೀಚ್ ಘಟಕವನ್ನು ಇಂದು ಉದ್ಘಾಟಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಆಯುಷ್ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಔಟ್‌ರೀಚ್ ಘಟಕದಲ್ಲಿ ವಾಕ್ ಮತ್ತು ಶ್ರವಣ ದೋಷವಿರುವ ನವಜಾತ ಶಿಶುಗಳಿಗೆ ಸ್ಕ್ರೀನಿಂಗ್ ಮತ್ತು ಇತರ ವಿಧಾನಗಳ ಮೂಲಕ ಚಿಕಿತ್ಸೆ ನೀಡಬಹುದಾಗಿದೆ ಎಂದರು. ಭಾಷೆ, ಮಾತು ಮತ್ತು ಶ್ರವಣ ಕ್ಷೇತ್ರದಲ್ಲಿ ಮಾನವ ಸಂಪನ್ಮೂಲ ಕ್ಷೇತ್ರದಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿ, ಪುನರ್ವಸತಿ, ಸಂಶೋಧನೆಗೆ ಖ್ಯಾತಿಯಾಗಿರುವ ಆಯಿಷ್, ಇದೀಗ ತಪಾಸಣೆ, ಚಿಕಿತ್ಸಾ ಸೌಲಭ್ಯದ ವ್ಯಾಪ್ತಿಯನ್ನು ವಿಸ್ತರಿಸಿರುವುದು ಶ್ಲಾಘನೀಯವಾದುದು ಎಂದ ಅವರು, ಸಂಸ್ಥೆಯು ಬ್ರಾಹ್ಮಸೇವಾ ಘಟಕ ತೆರೆಯಲು ಸಜ್ಜಾಗಿರುವುದು ಸಂತಸದ ವಿಷಯ ಎಂದರು.

ಆಯುರ್ವೇದ, ಯೋಗ, ಪ್ರಕೃತಿ ಚಿಕಿತ್ಸೆ, ಯುನಾನಿ, ಸಿದ್ಧ ಮತ್ತು ಹೋಮಿಯೋಪತಿ ಚಿಕಿತ್ಸಾ ವಿಧಾನವನ್ನು ಆಯಿಷ್ ಅಳವಡಿಸಿ ಕೊಂಡಿದೆಯಲ್ಲದೆ, ಪಾರ್ಶ್ವವಾಯು ಅಥವಾ ತಲೆಗೆ ಸಂವಹನ ನ್ಯೂನತೆಗೂ ಚಿಕಿತ್ಸೆ ನೀಡಿ ಗುಣಪಡಿಸುವ ಪ್ರಯತ್ನವನ್ನೂ ಮಾಡುತ್ತಿದೆ ಎಂದು ಡಾ. ಶ್ರೀನಿವಾಸಲು ಇದೇ ಸಂದರ್ಭ ನುಡಿದರು.

ಬೌದ್ಧಿಕ ಸಾಮರ್ಥ್ಯಗಳು, ಸ್ವಲೀನತೆ, ಅತೀ ಚಟುವಟಿಕೆ ಹಾಗೂ ಗಮನದ ಕೊರತೆ ಇರುವ ಮಕ್ಕಳಿಗೆ ಇತರರೊಂದಿಗೆ ಸಂವಹನ ಮಾಡಲು ತೊಂದರೆ ಇರುವುದರಿಂದ ಅಂತಹ ಮಕ್ಕಳ ಆರೋಗ್ಯ ಸುಧಾರಣೆಗೆ ಅಗತ್ಯ ಕ್ರಮ ವಹಿಸಬೇಕಾಗಿದೆ. ಈ ನಿಟ್ಟಿನಲ್ಲಿ ಔಟ್‌ರೀಚ್ ಘಟಕದ ಚಿಕಿತ್ಸೆಯು ಸಹಕಾರಿಯಾಗಿದೆ ಎಂದು ತಿಳಿಸಿದರು. ಆಯಿಷ್ ನಿರ್ದೇಶಕಿ ಡಾ. ಎಂ. ಪುಷ್ಪಾವತಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಪುಷ್ಪ, ಸಂಸ್ಥೆಯ ಪ್ರಾಧ್ಯಾಪಕರು ಹಾಗೂ ಇತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಮೈಸೂರು ಹಾಗೂ ಸುತ್ತಮುತ್ತ ಇಂದು...



## ಇಂದಿನ ಪಂಚಾಂಗ

**3.08.2024 ಶನಿವಾರ, ಮಳೆ ನಕ್ಷತ್ರ: ಆಶ್ಲೇಷ 03.08.2024 ರಿಂದ 12.08.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ, ತಿಥಿ: ಚತುರ್ದಶಿ ನಕ್ಷತ್ರ: ಪುನರ್ವಸು, ರಾಹುಕಾಲ: ಬೆಳಗ್ಗೆ 9 ರಿಂದ 10.30 ರವರೆಗೆ**

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆಳಗ್ಗೆ 9 ರಿಂದ ಕರ್ಕಾಟಕ ಚಿಕಿತ್ಸಾ (ಮಾನ್‌ಸೂನ್) ವರ್ಷ ಋತುವಿನ ಕಾಲದ ವಿಶೇಷ ಚಿಕಿತ್ಸಾ ಶಿಬಿರ, ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ.

■ **ಆಯುಷ್ ಇಲಾಖೆ, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ:** ಕಾರ್ಡಿಯೋ ಯೋಗ ಸಮಿತ್ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಆಯುಷ್ ಆಯುಕ್ತ ಡಾ.ಶ್ರೀನಿವಾಸುಲು, ಅಧ್ಯಕ್ಷತೆ: ಡಾ. ರವೀಂದ್ರನಾಥ್, ಉಪಸ್ಥಿತರು: ಎನ್‌ಎಂಸಿ, ನವದೆಹಲಿ ಅಧ್ಯಕ್ಷ ಡಾ. ಗಂಗಾಧರ್, ಆದಿಚುಂಚನಗಿರಿ ವಿವಿ ಕುಲಪತಿ ಡಾ. ಎಂ.ಎ. ಶೇಖರ್, ಡಾ.ಕೆ.ಎಸ್. ಸದಾನಂದ, ಡಾ. ಸೀತಾಲಕ್ಷ್ಮಿ, ಡಾ. ಏಂಜಲ್ ರಾಜ್, ಡಾ. ಎಲ್.ಎನ್. ಶೆಣೈ, ಸ್ಥಳ: ಎಸ್‌ಜಿಐಸಿಎಸ್‌ಆರ್ ಸಭಾಂಗಣ, ಬೆಳಗ್ಗೆ 9.30ಕ್ಕೆ

■ **ಕರ್ನಾಟಕ ಸೈಕಲ್ ಪೋಲೋ ಅಸೋಸಿಯೇಷನ್ :** ಜಿಲ್ಲಾ ಮಟ್ಟದ ಸೈಕಲ್ ಪೋಲೋ ಪಂದ್ಯಾವಳಿ, ಅಧ್ಯಕ್ಷತೆ : ಅಸೋಸಿಯೇಷನ್ ಅಧ್ಯಕ್ಷ ಎನ್.ಆರ್. ಮಂಜುನಾಥ್, ಮುಖ್ಯ ಅತಿಥಿಗಳು : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್, ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ. ವೆಂಕಟೇಶ್, ಡಾ. ಎಸ್. ಬಾಲಾಜಿ, ಎಸ್. ರಾಮಪ್ರಸಾದ್, ಅರುಣ್‌ಕುಮಾರ್ ಹೆಚ್. ಪಾಟೀಲ್, ಆರಾಧ್ಯ, ಸ್ಥಳ: ಗೌತಮ್ ಹಾಸ್ಟೆಲ್ ಗ್ರೌಂಡ್, ಮಾನಸಗಂಗೋತ್ರಿ, ಬೆಳಗ್ಗೆ 10ಕ್ಕೆ.

■ **ಭಾರತೀಯ ಹಸ್ತಶಿಲ್ಪ ಕಲೆಯ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ ಭಾರತ ಸರ್ಕಾರದ ವಸ್ತ್ರ ಮಂತ್ರಾಲಯದ ಕರಕುಶಲ ಅಭಿವೃದ್ಧಿ ಆಯುಕ್ತರ ಕಚೇರಿ :** ಹಸ್ತಶಿಲ್ಪ ಪ್ರದರ್ಶನ, ಮಾರಾಟ, ಗಾಂಧಿ ಶಿಲ್ಪ ಬಜಾರ್, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ಬೆಳಗ್ಗೆ 10.30 ರಿಂದ.

■ **ಜೆಎಸ್‌ಎಸ್‌ಎಸ್ ಪ್ರಥಮ ದರ್ಜೆ ಕಾಲೇಜು:** ಪುನಶ್ಚೇತನ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಗ್ರೂಪ್ ಕ್ಯಾಪ್ಟನ್ (ನಿವೃತ್ತ) ಅಭಿನವ್ ಚತುರ್ವೇದಿ, ಗೌರವ ಅತಿಥಿಗಳು : ಸಿ.ಎಸ್. ಪಣಿ ದತ್ತ, ದೊಡ್ಡನಾರಿ ನಟರಾಜ್, ಅಧ್ಯಕ್ಷತೆ: ಜೆಎಸ್‌ಎಸ್‌ಎಸ್ ಕಾರ್ಯದರ್ಶಿ ವನಜಾ ಬಿ. ಪಂಡಿತ್, ಸ್ಥಳ: ಜೆಎಸ್‌ಎಸ್‌ಎಸ್ ಸಭಾಂಗಣ, ಬೆಳಗ್ಗೆ 10.30ಕ್ಕೆ

■ **ಮೈಸೂರು ವಿಶ್ವವಿದ್ಯಾನಿಲಯ, ಶಾಲೆಗಳಲ್ಲಿ ವಿಜ್ಞಾನ ಶಿಕ್ಷಣ ಕೇಂದ್ರ:** ವಿಜ್ಞಾನ ಮತ್ತು ಗಣಿತ ವಿಷಯಗಳ ವಿವಿಧ ಕ್ಷೇತ್ರಗಳ ಪರಿಣಿತರೊಂದಿಗೆ ಸಂವಾದ, ಉಪಸ್ಥಿತರು; ಪ್ರೊ. ಪಿ. ವೆಂಕಟರಾಮಯ್ಯ, ಪ್ರೊ. ಜಿ.ಆರ್. ಪ್ರಕಾಶ್, ಪ್ರೊ.ಜಿ.ಆರ್. ಭಾಗ್ಯಲಕ್ಷ್ಮಿ, ಪ್ರೊ.ಎಸ್.ಆರ್. ರಮೇಶ್, ಪ್ರೊ. ಎಸ್.ಎನ್. ಪ್ರಸಾದ್, ಪ್ರೊ. ಎಂ.ಎಸ್. ಚಂದ್ರಶೇಖರ, ಸ್ಥಳ: ವಿಜ್ಞಾನ ಭವನ, ಬೆಳಗ್ಗೆ 10.30ಕ್ಕೆ.

■ **ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್:** ಸಾಮೂಹಿಕ ಸಹಸ್ರ ಬಿಲ್ವಾರ್ಚನೆ ಪೂಜೆ ಕಾರ್ಯಕ್ರಮ, ಧಾರ್ಮಿಕ ಸಭಾ ಕಾರ್ಯಕ್ರಮ, ಸಾನ್ನಿಧ್ಯ: ಶ್ರೀ ಗುರುಶಾಂತ ಸ್ವಾಮೀಜಿ, ಅಧ್ಯಕ್ಷತೆ: ಶಾಸಕ ತನ್ವೀರ್ ಸೇಠ್, ಉದ್ಘಾಟನೆ: ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸ್ಥಳ:ಡಾ.ಎಸ್.ರಾಧಾಕೃಷ್ಣನ್ ಸಭಾ ಭವನ, ಬೆಳಗ್ಗೆ 11 ರಿಂದ.

■ **ಶ್ರೀಕಾಂತ ವಿದ್ಯಾಸಂಸ್ಥೆಗಳು:** ಪ್ರೌಢಶಾಲಾ ಗಣಕಯಂತ್ರ ವಿಭಾಗದ ಉದ್ಘಾಟನಾ ಸಮಾರಂಭ, ಅಧ್ಯಕ್ಷತೆ: ಆರ್.ಜಿ.ನರಸಿಂಹ ಅಯ್ಯಂಗಾರ್, ಮುಖ್ಯ ಅತಿಥಿಗಳು: ವಿವೇಕ್ ಸುರೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್.ರಾಜು, ಸಂಪಾದಕರಾದ ಜಯಲಕ್ಷ್ಮಿ, ಸ್ಥಳ: ವಿದ್ಯಾಸಂಸ್ಥೆ ಗಣಕಯಂತ್ರ ವಿಭಾಗ, ಬೆಳಗ್ಗೆ 11ಕ್ಕೆ

■ **ಪಂಚಮ, ಮೈಸೂರು, ಸಾಮಾಜಿಕ ನ್ಯಾಯಪರ ವೇದಿಕೆ, ಸಂಶೋಧಕರ ಸಂಘ, ಮೈಸೂರು ವಿಶ್ವವಿದ್ಯಾನಿಲಯ :** ಸ್ವಾರ್ಥವಿಲ್ಲದ ಪಾರ್ಥ ಸಿ.ಎಸ್.ಪಾರ್ಥಸಾರಥಿ ಕುರಿತು ಕಾರ್ಯಕ್ರಮ, ಉದ್ಘಾಟನೆ: ಸಂಗೀತ ವಿವಿ ಕುಲಪತಿ ಪ್ರೊ.ನಾಗೇಶ್ ಬೆಟ್ಟಕೋಟೆ, ಅಧ್ಯಕ್ಷತೆ : ಚಿಂತಕ ಪ್ರೊ.ಎಚ್.ಗೋವಿಂದಯ್ಯ, ಮುಖ್ಯ ಅತಿಥಿಗಳು: ಡಾ.ಎಲ್. ಕೃಷ್ಣಮೂರ್ತಿ, ಮಾಜಿ ಶಾಸಕ ಡಾ.ಕೆ.ಅನ್ನದಾನಿ, ಆರ್. ಮೋಹನ್ ರಾಜ್, ಡಾ.ಡಿ.ಡೊಮಿನಿಕ್, ಶ್ರೀಮತಿ ಸಿ.ಎಸ್. ಪೂರ್ಣಿಮಾ, ಶ್ರೀಮತಿ ಸುಗಂಧಿನಿ ಪಾರ್ಥಸಾರಥಿ, ಸ್ಥಳ: ಇಎಂಎಂಆರ್‌ಸಿ ಸಭಾಂಗಣ, ಗಾಂಧಿ ಭವನದ ಎದುರು, ಬೆಳಗ್ಗೆ 11ಕ್ಕೆ.

■ **ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ :** ನಗರ ಆಶಾ ಕಾರ್ಯಕರ್ತೆಯರ ಪ್ರಥಮ ಸಮ್ಮೇಳನ, ಸ್ಥಳ: ಹೋಟೆಲ್ ಗೋವರ್ಧನ್ ಸಭಾಂಗಣ, ಬೆಳಗ್ಗೆ 11.30ಕ್ಕೆ

■ **ಕಲಾಸುರುಚಿ, ಸುರುಚಿ ರಂಗಮನೆ :** 'ಕಥೆ ಕೇಳೋಣ ಬನ್ನಿ' ಕಾರ್ಯಕ್ರಮ, ಕಥೆ ಹೇಳುವವರು: ದಕ್ಷಿಣಾಮೂರ್ತಿ ಕೃಷ್ಣಕುಮಾರ್, ಕಲಿಯುಗ ಶ್ರವಣಕುಮಾರ, ಸ್ಥಳ: ಸುರುಚಿ ರಂಗಮನೆ, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4

■ **ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್, ಮೈಸೂರು ವಲಯ:** ಪ್ರಶಸ್ತಿ ಪ್ರದಾನ ಸಮಾರಂಭ, ಗೌರವ ಅತಿಥಿಗಳು: ಕೆಎಸ್‌ಸಿಎ ಅಧ್ಯಕ್ಷ ರಘುರಾಮ್ ಭಟ್, ಕಾರ್ಯದರ್ಶಿ ಎ. ಶಂಕರ್, ಖಜಾಂಚಿ ಇ.ಎಸ್. ಜೈರಾಮ್, ಸ್ಥಳ: ನಿತ್ಯೋತ್ಸವ, ಬಲ್ಲಾಳ್ ವೃತ್ತದ ಬಳಿ, ಸಂಜೆ 4.30ಕ್ಕೆ.

■ **ಶ್ರೀ ವ್ಯಾಸರಾಜ ಮಠ ಚಾತುರ್ಮಾಸ್ಯ ಸೇವಾ ಸಮಿತಿ, ಸೋಸಲೆ :** ಶ್ರೀ ಶ್ರೀ ವಿದ್ಯಾಶ್ರೀಶತೀರ್ಥ ಶ್ರೀಪಾದರಂಗಳವರ 8ನೇ ಚಾತುರ್ಮಾಸ್ಯ, ಸ್ಥಳ: ಶ್ರೀ ವ್ಯಾಸರಾಜ ಮಠ, ಸೋಸಲೆ ಕ್ಷೇತ್ರ, ಸಂಜೆ 4.30ಕ್ಕೆ

■ **ಮಾಲಿನಿ ನೃತ್ಯಶಾಲೆ ಮತ್ತು ಸಾಂಸ್ಕೃತಿಕ ಕೇಂದ್ರ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು:** ವಚನ ಗಾಯನ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಡಿ. ಸುದರ್ಶನ್, ಭರತನಾಟ್ಯ ಮತ್ತು ನೃತ್ಯ ಗಾಯನ ನಿರ್ದೇಶನ : ಡಾ. ಮಾಲಿನಿ, ಮಾಲಿನಿ ನೃತ್ಯ ಶಾಲೆ ವತಿಯಿಂದ ಸನ್ಮಾನ ಕಾರ್ಯಕ್ರಮ, ಭರತನಾಟ್ಯ ಮತ್ತು ಭೀಮ ವಿಜಯ, ನರ್ತನ ಶಾಲ ನೃತ್ಯರೂಪಕ, ಸನ್ಮಾನಿತರು: ಕಲಾ ಪೋಷಕ ಎನ್. ಶಿವಕುಮಾರ್, ಸ್ಥಳ: ನಮನ ಕಲಾ ಮಂಟಪ, ಕೃಷ್ಣಮೂರ್ತಿಪುರಂ, ಸಂಜೆ 5ಕ್ಕೆ.

■ **ರಾಗ ಮ್ಯೂಸಿಕ್ ಅಕಾಡೆಮಿ :** ದಶಮಾನೋತ್ಸವ ಸಮಾರಂಭ, ವಿದುಷಿ ಅರ್ಚನಾ ಎಲ್. ರಾವ್ (ಕೋವಿಲಡಿ ಅರ್ಚನಾ) ಅವರಿಂದ ಗಾಯನ, ವಿದುಷಿ ಅದಿತಿ ಕೃಷ್ಣಪ್ರಕಾಶ್ –ವಯೋಲಿನ್, ವಿದ್ವಾನ್ ತುಮಕೂರು ಬಿ. ರವಿಶಂಕರ್–ಮೃದಂಗ, ವಿದ್ವಾನ್ ಎಸ್. ನಾರಾಯಣಮೂರ್ತಿ–ಘಟಂ, ಸ್ಥಳ: ಮೈಸೂರು ವಾಸುದೇವಾಚಾರ್ಯ ಭವನ, ಶ್ರೀ ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 5.30ಕ್ಕೆ

■ **ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್:** ಡಾ.ಭಾರತಿ ಅವರಿಂದ ರಿಸರ್ಚ್ ಟೂಲ್ಸ್ ಅಂಡ್ ಎಥಿಕ್ಸ್ ಕುರಿತು ತಾಂತ್ರಿಕ ಉಪನ್ಯಾಸ, ಅಧ್ಯಕ್ಷತೆ: ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಡಾ.ಆರ್. ದೀಪು, ಸ್ಥಳ: ಎಸ್.ಪಿ. ಭಟ್ ಹಾಲ್, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

## ಮೈಸೂರು ಆಕಾಶವಾಣಿ



**ಬೆಳಗ್ಗೆ:** 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 CFTRI 'ಶೋಧ ಅನುಶೋಧ'– ಪ್ರಾಯೋಜಿತ ಬಾನುಲಿ ಸರಣಿ, ಪ್ರಾಯೋಜಕರು: CSIR, CFTRI, Mysuru, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಹಾದಿಯಲ್ಲಿ ಕಂಡ ಮುಖ– ಬಾನುಲಿ ಸರಣಿ, ಪ್ರಸ್ತುತಿ: ಅಬ್ದುಲ್ ರಶೀದ್, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಸುರಭಿ. ಪಿ– ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ– 'ನಮ್ಮೂರ್ ಹೆಸರು', ಪ್ರಸ್ತುತಿ: ಡಾ. ಮೈಸೂರು ಉಮೇಶ್

**ಮಧ್ಯಾಹ್ನ:** 12.30ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆಗಳು, 3.00 ಹಳ್ಳಿ ಹಾಡು, 3.30 ಮಕ್ಕಳ ಮಂಟಪ 'ಉಶು' ಆಟಗಾರರಾದ ಅಯನ್ ಅಲಿ, ಅಫ್ಜಾ ಹಾಗೂ ಅವರ ತಂದೆ ಅಮೀರ್ ಜಾನ್ ಅವರೊಂದಿಗೆ ಮಾತುಕತೆ. ನಡೆಸಿಕೊಡುವವರು: ಜಾಂಪಣ್ಣ ಆಶೀಹಾಳ್, 4.00 ನಾಟಕ, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ), 6.50 ಕೃಷಿರಂಗ–ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ ಕೃಷಿ ಇಲಾಖೆಯ ಅಭಿವೃದ್ಧಿ ಯೋಜನೆಗಳು. ಈ ಕುರಿತು ಚಾಮರಾಜನಗರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಾದ ಎಸ್.ಎಸ್. ಅಬಿದ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ. 8.00 ಇಸ್ ಸಪ್ತಾಹ್ ಸಂಸದ್ ಮೇ, 8.15 ಯುವವಾಣಿ–ಷಾರ್ಟ್ ಫಿಲಂ ನಿರ್ದೇಶನ ಮತ್ತು ನಿರ್ಮಾಣದಲ್ಲಿ ತೊಡಗಿರುವ ಮೈಸೂರಿನ ಅಮೃತಾ ವಿದ್ಯಾಪೀಠದ ವಿದ್ಯಾರ್ಥಿ ಅಂಕಿತ್ ಭಾರದ್ವಾಜ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 9.30 ಸವಿನೆನಪು– ಹಳೆಯ ಕನ್ನಡ ಚಿತಗೀತೆಗಳು, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ : ನೂಪುರ್ ಗಾಡ್ಗಿಲ್ – ಗಾಯನ

# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 3 ಶನಿವಾರ 2024

₹4

ಸಂಪುಟ: 45 | ಸಂಚಿಕೆ: 109 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*



## ನಕ್ಕರೆ ಅದೇ ಸ್ವರ್ಗ

ಹುಡುಗ : ಸಿಸ್ಟರ್, ನಂಗೆ ಒಂದು ಬಾಟಲಿ ಬ್ಲಡ್ ಬೇಕು.
ನರ್ಸ್ : ಬ್ಲಡ್ ಗ್ರೂಪ್ ಹೇಳಿ.
ಹುಡುಗ : ಯಾವ್ದಾದ್ರು ಆಗುತ್ತೆ.
ನರ್ಸ್ : ಅದು ಹೇಗೆ ಆಗುತ್ತೆ?
ಹುಡುಗ : ಅದು ನನ್ನ ಗರ್ಲ್‌ಫ್ರೆಂಡ್‌ಗೆ ಲವ್ ಲೆಟರ್ ಬರೆಯೋಕೆ.

ಮೈಸೂರು ಮಿತ್ರ

ಶನಿವಾರ, 3 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

**ಅಮೃತವಾಹಿನಿ..........**

ಸುವಾಸನೆಯಿಂತಲೂ ದುರ್ವಾಸನೆ ಬೇಗ ಹರಡುತ್ತದೆ. ಸತ್ಕೀರ್ತಿ ಹಬ್ಬುವುದು ನಿಧಾನ. ಕೆಟ್ಟ ಕೀರ್ತಿ ಕಾಡ್ಗಿಚ್ಚಿನಂತೆ ಹಬ್ಬುತ್ತದೆ. — ಕುವೆಂಪು.

**ವೇದ ಸುಳ್ಳಾದರೂ ಗಾದೆ ಸುಳ್ಳಾಗದು** { ಸ್ವರ್ಗದಲ್ಲಿ ಸೇವೆಗೈಯುವುದಕ್ಕಿಂತ ನರಕದಲ್ಲಿ ಆಳುವುದೇ ಲೇಸು.

## ನಿಮ್ಮ ಪತ್ರಗಳು

### ಸೇವಾನಿರತ ಪಿಎಸ್‌ಟಿ ಪದವೀಧರ ಶಿಕ್ಷಕರಿಗೆ ನ್ಯಾಯ ದೊರಕಿಸಿ

ಮಾನ್ಯರೆ,

ವೃಂದ ಮತ್ತು ನೇಮಕ ನಿಯಮದ ಪೂರ್ವಾನ್ವಯ ಜಾರಿ ನಿರ್ಧಾರ ರಾಜ್ಯದ ಲಕ್ಷಕ್ಕೂ ಹೆಚ್ಚು ಪ್ರಾಥಮಿಕ ಶಾಲಾ ಶಿಕ್ಷಕರ (ಪಿಎಸ್‌ಟಿ) ಭವಿಷ್ಯವನ್ನೇ ಬುಡಮೇಲು ಮಾಡಿದೆ. ವಿದ್ಯಾರ್ಹತೆ ಪರಿಗಣಿಸದೆ ವಿಷಯವಾರು ವರ್ಗಾವಣೆ, ಬಡ್ತಿಯಲ್ಲಿ ಆಗುತ್ತಿರುವ ಅನ್ಯಾಯದಿಂದಾಗಿ 1.11 ಲಕ್ಷ ಶಿಕ್ಷಕರ ಸ್ಥಿತಿ ಡೋಲಾಯಮಾನವಾಗಿರುವ ಕಾರಣ ಈ ಪರಿಸ್ಥಿತಿ ವಿರುದ್ಧ ಸಿಡಿದೆದ್ದಿರುವ ಶಿಕ್ಷಕರು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಆಗಸ್ಟ್ 12 ರಂದು ಮತ್ತೊಂದು ಸುತ್ತಿನ ಹೋರಾಟಕ್ಕೆ ಕಹಳೆ ಮೊಳಗಿಸಿದ್ದಾರೆ.

ನಮ್ಮ ರಾಜ್ಯದ ಒಂದರಿಂದ ಎಂಟನೇ ತರಗತಿಯವರೆಗಿನ ಸರ್ಕಾರಿ ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಲಕ್ಷಾಂತರ ಮಂದಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದು, ಸರ್ಕಾರ ಒಂದರಿಂದ ಐದನೇ ತರಗತಿಯವರೆಗೆ ಬೋಧನೆ ಮಾಡುವ ಶಿಕ್ಷಕರನ್ನು ಪಿಎಸ್‌ಟಿ ಶಿಕ್ಷಕ (ಪ್ರಾಥಮಿಕ ಶಿಕ್ಷಕ) ರೆಂದು ಹಾಗೂ ಆರರಿಂದ ಎಂಟನೇ ತರಗತಿಯವರೆಗೆ ಬೋಧನೆ ಮಾಡುತ್ತಿರುವ ಶಿಕ್ಷಕರನ್ನು ಜಿಪಿಟಿ ಶಿಕ್ಷಕ (ಪದವೀಧರ ಶಿಕ್ಷಕ)ರೆಂದು ಪರಿಗಣಿಸಿ ಅದರಂತೆ ಸರ್ಕಾರ 2017 ರಲ್ಲಿ ಹೊಸದಾಗಿ ನೇಮಕಾತಿ ವೃಂದವನ್ನು ಬದಲಾವಣೆ ಮಾಡಿದೆ. ಆದರೆ ಹಾಲಿ ಸೇವಾನಿರತ ಪಿಎಸ್‌ಟಿ ಪ್ರಾಥಮಿಕ ಪದವೀಧರರ ಶಿಕ್ಷಕರಿಗೆ ತಮ್ಮ ಸೇವೆಯನ್ನು ವಿಲೀನಗೊಳಿಸಿ ಮುಂಬಡ್ತಿ ನೀಡಬೇಕೆಂಬುದು ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಬಹುದಿನದ ಒತ್ತಾಯವಾಯಾಗಿದೆ.

ರಾಜ್ಯದಲ್ಲಿ ಹಾಲಿ ಒಂದರಿಂದ ಏಂಟನೇ ತರಗತಿವರೆಗೆ ಪಾಠ ಮಾಡುತ್ತಿರುವ ಪ್ರಾಥಮಿಕ ಶಾಲಾ ಶಿಕ್ಷಕರಲ್ಲಿ ಸುಮಾರು 80,000ಕ್ಕಿಂತ ಹೆಚ್ಚು ಮಂದಿ ವಿವಿಧ ವಿಷಯಗಳಲ್ಲಿ ಪದವಿ ವಿದ್ಯಾರ್ಹತೆ ಹೊಂದಿದ ಶಿಕ್ಷಕರಿದ್ದಾರೆ. ಈ ಶಿಕ್ಷಕರು ಕಳೆದ 20–25 ವರ್ಷಗಳಿಂದ ಯಾವುದೇ ಬಡ್ತಿಯಿಲ್ಲದೇ ಒಂದೇ ಹುದ್ದೆಯಲ್ಲಿದ್ದುಕೊಂಡು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇವರೆಲ್ಲರೂ ರಾಷ್ಟ್ರೀಯ ಶಿಕ್ಷಕರ ಶಿಕ್ಷಣ ಮಂಡಳಿ (ಎನ್‌ಸಿಟಿಇ) ನಿಗದಿಪಡಿಸಿರುವ ವಿದ್ಯಾರ್ಹತೆ ಹೊಂದಿರುವ ಅರ್ಹ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರಾಗಿದ್ದು, ಇವರೆಲ್ಲರನ್ನೂ ಸೇವಾ ಜೇಷ್ಠತೆಯೊಂದಿಗೆ ಮುಂಬಡ್ತಿ ನೀಡಿ, ಸದರಿ ಪ್ರಾಥಮಿಕ ಶಾಲಾ ಶಿಕ್ಷಕರು 6 ರಿಂದ 8ನೇ ತರಗತಿವರೆಗೆ ಹಾಗೂ ಪ್ರೌಢಶಾಲೆಗಳಿಗೆ ಮುಂಬಡ್ತಿ ಹೊಂದಿದ್ದರೂ ತಮ್ಮ 10,15,20,25 ಹಾಗೂ 30 ವರ್ಷಗಳ ಕಾಲಮಿತಿ ಬಡ್ತಿಯನ್ನು ಪಡೆಯಲು ಯಾವುದೇ ತೊಂದರೆ ಆಗದಂತೆ ಸರ್ಕಾರ ಅಭಯಹಸ್ತ ನೀಡಿ, ಹಾಲಿ ಇರುವ ನೇಮಕಾತಿ ವೃಂದಗಳಿಗೆ ಸೂಕ್ತ ತಿದ್ದುಪಡಿ ಹಾಗೂ ಬದಲಾವಣೆ ಮಾಡುವುದು ನ್ಯಾಯ ಸಮ್ಮತವಾಗಿದೆ. ಈ ಬಗ್ಗೆ ಸರ್ಕಾರ ಶೀಘ್ರವಾಗಿ ತೀರ್ಮಾನ ಕೈಗೊಂಡು, ಪದವೀಧರ ಶಿಕ್ಷಕರು ಹೋರಾಟಕ್ಕೆ ಇಳಿಯುವ ಮುನ್ನ ಅವರೊಂದಿಗೆ ಫಲಪ್ರದವಾದ ಮಾತುಕತೆ ನಡೆಸಿ ಆದಷ್ಟು ಬೇಗ ಸೂಕ್ತ ಆದೇಶ ಹೊರಡಿಸಬೇಕೆಂಬುದು ರಾಜ್ಯದ ಸಮಸ್ತ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಮನವಿ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

### ಈ ರಸ್ತೆಯು ಕುಸಿಯುವ ಸಾಧ್ಯತೆ ಇದೆ, ಎಚ್ಚರವಿರಲಿ



ಮಾನ್ಯರೆ,

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿರುವ ಕುವೆಂಪುನಗರದ ಶ್ರೀ ಆದಿಚುಂಚನಗಿರಿ ರಸ್ತೆಯು ಜನನಿಬಿಡ ಪ್ರದೇಶವಾಗಿದ್ದು, ಅಪೊಲೋ ಆಸ್ಪತ್ರೆ, ಕಾವೇರಿ ಶಿಕ್ಷಣ ಸಂಸ್ಥೆ, ಕಾಳಿದಾಸ ಶಿಕ್ಷಣ ಸಂಸ್ಥೆ, ಗೋಕುಲ ಶಿಕ್ಷಣ ಸಂಸ್ಥೆ, ಸಾರ್ವಜನಿಕ ವಿದ್ಯಾರ್ಥಿ ನಿಲಯಗಳು, ಡಿಟಿಡಿಸಿ ಕೋರಿಯರ್ ಪ್ರಮುಖ ಘಟಕ ಹಾಗೂ ಇನ್ನಿತರ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿರುವ ವ್ಯಾಪಾರ ವಹಿವಾಟುಗಳು ಹೆಚ್ಚಿರುವುದರಿಂದ ಜನರು ಹೆಚ್ಚು ಬಳಕೆ ಮಾಡುವ ಈ ರಸ್ತೆ ಕುಸಿಯುವ ಸಾಧ್ಯತೆ ಇದೆ. ಹಿಂದೆ ಈ ರಸ್ತೆಯಲ್ಲಿ ಕೆಲವು ಕಾಮಗಾರಿ ನಡೆಸಿ, ಅಧಿಕಾರಿಗಳ ನಿರ್ಲಕ್ಷ್ಯತನ ಪರಿಶೀಲನೆಯಿಂದಾಗಿ ಅಲ್ಲಲ್ಲಿ ನೀರು ನಿಂತು ಅಪಾಯದ ಸ್ಥಿತಿಯಿದೆ. ಇದರಿಂದ ಸಾರ್ವಜನಿಕ ತೆರಿಗೆ ಹಣವು ಸಹ ವ್ಯರ್ಥವಾಗುತ್ತಿದೆ. ಮಳೆಯು ಹೆಚ್ಚಾಗಿ ಬರುತ್ತಿರುವುದರಿಂದ ಮುಂದಾಗುವ ಅನಾಹುತ ತಪ್ಪಿಸುವಂತೆ ಸಂಬಂಧಪಟ್ಟ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಲ್ಲಿ ಮನವಿ. –ನಾಗೇಶ್, ಮಾನಸಗಂಗೋತ್ರಿ, ಮೈಸೂರು

### ಇನ್ನಾದರೂ ಮುಖ್ಯಮಂತ್ರಿಗಳು ತಮ್ಮ ಜವಾಬ್ದಾರಿ ಅರಿಯಲಿ

ಮಾನ್ಯರೆ,

ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯಕ್ಕೆ ಮುಖ್ಯಮಂತ್ರಿಯೋ ಅಥವಾ ಕಾಂಗ್ರೆಸ್ ಪಕ್ಷಕ್ಕೆ ಮುಖ್ಯಮಂತ್ರಿಯೋ ಎಂಬ ಅನುಮಾನ ಈಗ ರಾಜ್ಯದ ಜನತೆಗೆ ಕಾಡುತ್ತಿದೆ.

ಕೇಂದ್ರ ಸರ್ಕಾರದ ವಿರುದ್ಧ ವೈಯಕ್ತಿಕವಾಗಿ ಇವರು ಸಮರ ಸಾರಿದಂತಿದೆ. ರಾಜ್ಯಕ್ಕೆ ಕೇಂದ್ರದಿಂದ ಪದೇಪದೆ ಅನ್ಯಾಯವಾಗುತ್ತಿದೆ ಎಂದು ಬೊಬ್ಬೆ ಹೊಡೆಯುತ್ತಾ ಇತ್ತೀಚೆಗೆ ಕೇಂದ್ರದ ಅರ್ಥ ಸಚಿವೆ ನಿರ್ಮಲ ಸೀತಾರಾಮನ್ ಕರೆದ ಬಜೆಟ್ ಪೂರ್ವಭಾವಿ ಸಭೆಗೆ ಗೈರು ಹಾಜರಾಗಿ ನಂತರ ಬಜೆಟ್‌ನಲ್ಲಿ ರಾಜ್ಯಕ್ಕೆ ಮೋಸವಾಗಿದೆ ಎನ್ನುತ್ತಿದ್ದಾರೆ.

ಮತ್ತೆ ಶನಿವಾರ ನಡೆದ ನರೇಂದ್ರ ಮೋದಿ ಅಧ್ಯಕ್ಷತೆಯ ನೀತಿ ಆಯೋಗದ ಸಭೆಗೂ ಸತತ ಎರಡನೇ ಬಾರಿ ಗೈರು ಹಾಜರಾಗಿದ್ದಾರೆ. ಕಳೆದ ಸಭೆಗೆ ಸಚಿವ ಕೃಷ್ಣ ಬೈರೇಗೌಡ ಸರ್ಕಾರದ ಪರವಾಗಿ ಭಾಗವಹಿಸಿದ್ದರು.

ಈ ರೀತಿಯಲ್ಲಿ ಸಿಕ್ಕ ಅವಕಾಶವನ್ನೆಲ್ಲಾ ಕೈಚೆಲ್ಲಿ ಕುಳಿತು ಮುಖ್ಯಮಂತ್ರಿಗಳು ರಾಜ್ಯದ ಜನತೆಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಹೇಳುವ ಮೂಲಕ ತಮ್ಮ ಪಕ್ಷದ ಅಧಿನಾಯಕಿಯ ಕೃಪೆಗೆ ಪಾತ್ರರಾಗುತ್ತಿದ್ದಾರೆ. ಇದು ಖಂಡನೀಯ ನಡೆ ಅಲ್ಲವೇ. ನಲವತ್ತು ವರ್ಷದಿಂದ ರಾಜಕಾರಣದಲ್ಲಿರುವ ಸಿದ್ದರಾಮಯ್ಯನವರು ಒಕ್ಕೂಟ ವ್ಯವಸ್ಥೆಯಲ್ಲಿ ನಂಬಿಕೆ ಇಲ್ಲದಂತೆ ವರ್ತಿಸಿ, ಮಮತಾ ಬ್ಯಾನರ್ಜಿ ಹಾದಿ ಹಿಡಿಯುತ್ತಿದ್ದಾರೆಯೇ? ಇನ್ನಾದರೂ ತಮ್ಮ ಜವಾಬ್ದಾರಿಯನ್ನು ಮುಖ್ಯಮಂತ್ರಿಗಳು ಅರಿಯಬೇಕಾಗಿದೆ.

–ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

# ಮೊಬೈಲ್ ಎಂಬ ಮಹಾ ಮಾಯೆ...!

ಜನ ಮರಳೋ – ಜಾತ್ರೆ ಮರುಳೋ ಎಂಬಂತಹ ಗಾದೆ ಮಾತನ್ನು ಪ್ರಸ್ತುತ ಸನ್ನಿವೇಶದಲ್ಲಿ ಸ್ವಲ್ಪ ಬದಲಾವಣೆ ಮಾಡಿಕೊಳ್ಳಬೇಕೆನಿಸಿದೆ–ಮೊಬೈಲ್ ಮರುಳೋ, ಜನರ ಅಭಿರುಚಿ ಮರುಳೋ ಎಂದು...! ಇಂದು ನಾಗಾಲೋಟದಲ್ಲಿ ನಾಗರಿಕತೆ ದಾಪುಗಾಲು ಹಾಕುತ್ತಿದೆ. ಮಾನವನ ಅವಶ್ಯಕತೆಗಳು, ಅಭಿರುಚಿಗಳು ಬದಲಾಗಿ ಎಲ್ಲವೂ ಕೈ ಬೆರಳ ತುದಿಗೆ ಜಗತ್ತು ಬಂದು ಕೂತಿದೆ. ಇದಕ್ಕೆಲ್ಲಾ ಕಾರಣೀ ಭೂತವಾಗಿರುವುದು ಅಲ್ಲದೆ ಭೂತದಂತೆ ಸರ್ವದ ನಮ್ಮನ್ನು ಆವರಿಸಿರುವುದು 'ಮೊಬೈಲ್' ಮಾಯಾಜಾಲ.


ಆಡುವ ಮಕ್ಕಳಿಂದ ಹಿಡಿದು ಅಲ್ಲಾಡುವ ಮುದುಕರವರೆಗೂ ಈ ಮೊಬೈಲ್ ಎಂಬ ಮಾಯೆ ತನ್ನ ಹಿಡಿತ ದಿಂದ ಬಿಡಿಸಿಕೊಳ್ಳಲಾಗದಷ್ಟು; ಹೇಳಬೇಕೆಂದರೆ ಹೆತ್ತ ಕರುಳು ತನ್ನ ಹೆತ್ತ ಕುಡಿಯನ್ನೇ ಮರೆತು ಮೊಬೈಲ್‌ನ ಜಾಲದಲ್ಲಿ ಇಳಿದು ಹೋಗುವಷ್ಟರಮಟ್ಟಿಗೆ ಆವರಿಸಿಟ್ಟುಕೊಂಡಿರುವುದು ದುರಂತವೇ ಸರಿ. ಈ ಬಗೆಯ ದುರಂತದ ಬಲೆಯೊಳಗೆ ಎಳೆದುಕೊಂಡು ಹೋಗುವ ಮೊಬೈಲ್ ಎಂಬ ಮಹಾ ಮಾಯೆಯನ್ನು ಬಿಟ್ಟು ಒಂದು ಕ್ಷಣವೂ ಕೂಡ ಬದುಕು ನಡೆಯಲಾರದು ಎನ್ನುವಂತೆ ಇಂದು ಬಹುತೇಕ ಮಂದಿ ತೀರ್ಮಾನಕ್ಕೆ ಬಂದಿರುವುದು ವಿಪರ್ಯಾಸವಾಗಿದೆ. ಯಾವುದೇ ಆಗಲಿ ಮಿತಿಯಲ್ಲಿದ್ದರೆ ಚೆಂದ, ಅದು ಅತಿಯಾದರೆ ವಾಕರಿಕೆ ಬರುವಂತಾಗಿ ಇಲ್ಲ–ಸಲ್ಲದ ಅಡ್ಡ ಪರಿಣಾಮಗಳನ್ನು ತಂದೊಡ್ಡುತ್ತವೆ.

ಮುಖ್ಯವಾಗಿ ಯುವ ಜನಾಂಗ ಮೊಬೈಲ್‌ನಲ್ಲಿ ಹುಚ್ಚು ಸಾಹಸದ ದೃಶ್ಯಗಳನ್ನು (ರೀಲ್ಸ್‌ಗಳನ್ನು ಮಾಡಿ) ಚಿತ್ರೀಕರಿಸಿ ಅದನ್ನು ಸಾಮಾಜಿಕ ಜಾಲತಾಣದಲ್ಲಿ ಹಾಕುವ ಮೂಲಕ ಅದು ಹೆಚ್ಚು ಮೆಚ್ಚುಗೆಗಳನ್ನು (ಲೈಕ್ಸ್) ಪಡೆದರೆ ನಾವು ಪ್ರಸಿದ್ಧಿ ಹೊಂದಬಹುದು ಎಂಬ ಭ್ರಮಾಲೋಕದಲ್ಲಿ ನೆಲೆಸಿ ಇತ್ತೀಚಿಗೆ ಬದುಕುತ್ತಿದ್ದಾರೆ. ತೀರಾ ಪ್ರತಿಯೊಬ್ಬರೂ ನಮ್ಮನ್ನು ಗುರುತಿಸಲು ಸಾಮಾಜಿಕ ಜಾಲತಾಣಗಳೇ ಉತ್ತಮ ವೇದಿಕೆ ಎಂದು ಕಲ್ಪನೆಯ ವಿಲಾಸದಲ್ಲಿ ನೆಲೆಸಿ, ಚಿತ್ರ–ವಿಚಿತ್ರವಾಗಿ ವರ್ತಿಸುತ್ತಿದ್ದಾರೆ.

ಮುಖ್ಯವಾಗಿ ಗಮನಿಸಬೇಕಾದ ಅಂಶ–ನಿಂತ ನೀರು ಕೆಡುತ್ತದೆ, ಹರಿಯುವ ನೀರು ಪರಿಶುದ್ಧಿಯಾಗಿರುತ್ತದೆ. ಹಾಗೆಯೇ ಅಲ್ಪ ಕಾಲದಲ್ಲಿ ದೊರೆತ ಯಶಸ್ಸು ಅಲ್ಪ ಕಾಲದಲ್ಲಿಯೇ ಮರೆಯಾಗಬಲ್ಲದು. ಈ ಸತ್ಯವನ್ನು ಅರಿತುಕೊಂಡಾಗ ಮಾತ್ರ ಜೀವನ ನಡೆಸಲು ಸಾಧ್ಯ.

ಮೊದಲೆಲ್ಲ ಭಾನುವಾರ, ಸರ್ಕಾರಿ ರಜೆ ದಿನಗಳು ಬಂದರೆ ಸಾಕು ಆಟದ ಮೈದಾನಗಳು ತುಂಬಿ ತುಳುಕಾಡುತ್ತಿದ್ದವು. ಗೋಲಿ, ಲಗೋರಿ, ಚಿನ್ನಿ–ದಾಂಡು, ಕಬ್ಬಡಿ, ಖೋ–ಖೋ, ಕ್ರಿಕೆಟ್, ಕಣ್ಣಾಮುಚ್ಚಾಲೆ ಹೀಗೆ ವಿವಿಧ ಬಗೆಯ ಆಟಗಳನ್ನಾಡುತ್ತಾ ಮಕ್ಕಳು, ಯುವಕರು, ಯುವತಿಯರು ಕಾಲ ಕಳೆಯುತ್ತಿದ್ದರು. ಸಮಯದ ಅರಿವೇ ಇಲ್ಲದಂತೆ ಆಟ ಆಡಿ ಮೈಮರೆಯುತ್ತಿದ್ದರು. ಆಟ, ಊಟ, ಪಾಠ ಆಗಿನ ಕಾಲದ ಮಕ್ಕಳ ಬದುಕಿನಲ್ಲಿ ಹಾಸು ಹೊಕ್ಕಾಗಿದ್ದವು. ಆಟಗಳ ಮೂಲಕ ಬದುಕಿನ ಪಾಠವನ್ನು ಕಲಿಯುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಈ ಆಟಗಳು ಅದರಲ್ಲೂ ಗ್ರಾಮೀಣ ಭಾಗದಲ್ಲಿ ಕಂಡು ಬರುತ್ತಿದ್ದ ಆಟಗಳೆಲ್ಲ ಈ ಮೊಬೈಲ್ ಎಂಬ ಮಾಯಾಜಿಂಕೆಯ ಪ್ರಭಾವದಿಂದ ಕಣ್ಮರೆಯಾಗುತ್ತಲಿವೆ. ಇಂದಿನ ಮಕ್ಕಳನ್ನು ಆಟ ಆಡಲು ಹೋಗುವುದಿಲ್ಲವೇ? ಎಂದು ಯಾರಾದರೂ ಪ್ರಶ್ನಿಸಿದರೆ ಪ್ರತಿದಿನವೂ ಆಟವನ್ನು ಆಡುತ್ತಿರುವೆವು ಮೊಬೈಲ್‌ನಲ್ಲಿ! ಎಂಬ ಉತ್ತರವನ್ನು ಯಾವುದೇ ಮುಜುಗರವಿಲ್ಲದೆ ಕೊಡುವುದು ಸಾಮಾನ್ಯವಾಗಿದೆ.

ಈ ಮೊಬೈಲ್ ಎಂಬ ಮಾಯಾ ಪುಟ್ಟ ಬಾಕ್ಸ್‌ನ ಜಿಂಕೆ ಸಾಮಾಜಿಕ ಜಾಲತಾಣಗಳೆಂಬ ಮರೀಚಿಕೆ ಯುವ ಜನಾಂಗದ ಕ್ರೀಡೆಯ ಹಕ್ಕನ್ನು ಕಸಿದುಕೊಳ್ಳುವುದರ ಜೊತೆಗೆ ಪುಸ್ತಕ ಓದುವ ಅಭಿರುಚಿಯನ್ನು ಕೂಡ ಸಾರಾ ಸಗಟಾಗಿ ತಳ್ಳಿ ಹಾಕಿದೆ. ಅದು ಎಷ್ಟರ ಮಟ್ಟಿಗೆ ಎಂದರೆ ಬೇಕಿದ್ದರೆ ಬೆಳಗ್ಗೆಯಿಂದ ರಾತ್ರಿವರೆಗೂ ಒಂದೇ ಸಮನೆ ಯಾವುದೇ ಬಿಡುವಿಲ್ಲದೆ ಸಾಮಾಜಿಕ ಜಾಲತಾಣಗಳನ್ನು ಉಪಯೋಗಿಸುತ್ತಾ ಮೊಬೈಲ್ ಬಳಕೆ ಮಾಡಲು ತಾವು ತಯಾರಾಗಿ ಇರುವುದಾಗಿಯೂ ಒಂದರ್ಧ ಗಂಟೆ ಒಂದೇ ಜಾಗದಲ್ಲಿ ಕುಳಿತು ಏಕಾಗ್ರತೆಯಿಂದ ಯಾವುದೇ ಉದ್ವೇಗಕ್ಕೆ ಒಳಗಾಗದೆ ಇನ್ನಿತರ ಕೆಲಸಗಳ ಮೇಲೆ ಗಮನಹರಿಸದೆ ಓದಲು ಸಾಧ್ಯವಾಗದೇ ಇರುವಷ್ಟರ ಮಟ್ಟಿಗೆ ಇಂದಿನ ಬಹುತೇಕ ಜನರು ತಲುಪಿದ್ದಾರೆ ಎಂದರೆ ಮೊಬೈಲ್ ಎಂಬ ಮಾಯಾವಿ ತನ್ನ ಪ್ರಭಾವವನ್ನು ಎಷ್ಟರ ಮಟ್ಟಿಗೆ ಬೀರಿದೆ ಎಂಬುದು ಮನದಟ್ಟಾಗುತ್ತದೆ.



> ಈ ಮೊಬೈಲ್ ಎಂಬ ಮಾಯಾ ಪುಟ್ಟ ಬಾಕ್ಸ್‌ನ ಜಿಂಕೆ ಸಾಮಾಜಿಕ ಜಾಲತಾಣಗಳೆಂಬ ಮರೀಚಿಕೆ ಯುವ ಜನಾಂಗದ ಕ್ರೀಡೆಯ ಹಕ್ಕನ್ನು ಕಸಿದುಕೊಳ್ಳುವುದರ ಜೊತೆಗೆ ಪುಸ್ತಕ ಓದುವ ಅಭಿರುಚಿಯನ್ನು ಕೂಡ ಸಾರಾ ಸಗಟಾಗಿ ತಳ್ಳಿ ಹಾಕಿದೆ. ಅದು ಎಷ್ಟರ ಮಟ್ಟಿಗೆ ಎಂದರೆ ಬೇಕಿದ್ದರೆ ಬೆಳಗ್ಗೆಯಿಂದ ರಾತ್ರಿವರೆಗೂ ಒಂದೇ ಸಮನೆ ಯಾವುದೇ ಬಿಡುವಿಲ್ಲದೆ ಸಾಮಾಜಿಕ ಜಾಲತಾಣಗಳನ್ನು ಉಪಯೋಗಿಸುತ್ತಾ ಮೊಬೈಲ್ ಬಳಕೆ ಮಾಡಲು ತಾವು ತಯಾರಾಗಿ ಇರುವುದಾಗಿಯೂ ಒಂದರ್ಧ ಗಂಟೆ ಒಂದೇ ಜಾಗದಲ್ಲಿ ಕುಳಿತು ಏಕಾಗ್ರತೆಯಿಂದ ಯಾವುದೇ ಉದ್ವೇಗಕ್ಕೆ ಒಳಗಾಗದೆ ಇನ್ನಿತರ ಕೆಲಸಗಳ ಮೇಲೆ ಗಮನಹರಿಸದೆ ಓದಲು ಸಾಧ್ಯ ವಾಗದೇ ಇರುವಷ್ಟರ ಮಟ್ಟಿಗೆ ಇಂದಿನ ಬಹುತೇಕ ಜನರು ತಲುಪಿದ್ದಾರೆ ಎಂದರೆ ಮೊಬೈಲ್ ಎಂಬ ಮಾಯಾವಿ ತನ್ನ ಪ್ರಭಾವವನ್ನು ಎಷ್ಟರ ಮಟ್ಟಿಗೆ ಬೀರಿದೆ ಎಂಬುದು ಮನದಟ್ಟಾಗುತ್ತದೆ.

ಪ್ರಸ್ತುತ ಯುವ ಜನಾಂಗವಾಗಲೀ ಅಥವಾ ಅತ್ಯಧಿಕವಾಗಿ ಸಾಮಾಜಿಕ ಜಾಲತಾಣವನ್ನು ಅಥವಾ ಮೊಬೈಲ್ ಅನ್ನು ಬಳಸುವವರಿಗೆ ವಿಚಾರವೊಂದಿದೆ. ಮನುಷ್ಯನ ಬುದ್ಧಿಶಕ್ತಿ ಅಗಾಧವಾದದ್ದು, ಅದನ್ನು ಸತ್ಕಾರ್ಯಗಳಿಗೆ ಬಳಸಿಕೊಂಡಿದ್ದೇ ಆದಲ್ಲಿ ಅಸಾಧ್ಯವಾದುದನ್ನು ಸಾಧ್ಯವಾಗಿಸುವುದು ಸುಲಭವಾಗಬಲ್ಲದು. ಇದನ್ನು ಮರೆತು ಗಂಟೆಗಟ್ಟಲೆ ಸಾಮಾಜಿಕ ಜಾಲ ತಾಣಗಳಲ್ಲಿ ಇಲ್ಲ–ಸಲ್ಲದ ಬೇಡವಾದ ವಿಚಾರಗಳ ಬಗ್ಗೆ ತಿಳಿಯುವ ವ್ಯರ್ಥ ಪ್ರಯತ್ನವನ್ನು ಮಾಡುತ್ತಾ ಸಮಯವನ್ನು ಕಳೆಯುವಂತಹ ಜನರು ಮುಂದೆ ಕಳೆದುಕೊಂಡ ಸಮಯಕ್ಕಾಗಿ ವ್ಯಥೆಪಡಬೇಕಾದ ಪರಿಸ್ಥಿತಿ ನಿರ್ಮಾಣವಾಗಬಹುದು. ಪುಸ್ತಕಗಳನ್ನು ಓದುವುದರಿಂದ ಜೀವನದ ಅನುಭವ ಉಂಟಾಗುತ್ತದೆ. ಕಲ್ಪನೆಯ ಶಕ್ತಿ ಬೆಳೆಯುತ್ತದೆ, ವಿಚಾರಗಳ ವಿನಿಮಯವಾಗುತ್ತದೆ. ಜನರ ಜೊತೆ ಮಾತನಾಡುವುದರಿಂದ ಅನುಭವಗಳ ಸಾರವೇ ದೊರಕಿದಂತಾಗುತ್ತದೆ. ಸ್ವತಂತ್ರವಾಗಿ ಆಲೋಚಿಸುವ ಸರಿ ತಪ್ಪುಗಳನ್ನು ತಿಳಿದು ಉತ್ತಮ ಮಾರ್ಗದಲ್ಲಿ ನಡೆಯುವ ಬದುಕು ನಮ್ಮದಾಗುತ್ತದೆ. ಸರಿ ಇವುಗಳನ್ನು ನಿರ್ಲಕ್ಷಿಸಿ ನಿರ್ಜೀವ ವಸ್ತುವಾದ ಮೊಬೈಲ್‌ನಲ್ಲಿಯೇ ಮುಳುಗಿ ಹೋದರೆ ಬದುಕಿಗೊಂದು ಅರ್ಥವೇ ಇಲ್ಲದಂತಾಗುತ್ತದೆ.

ಮೊದಲೆಲ್ಲ ಬಸ್ಸಿನಲ್ಲಿ ಅಥವಾ ರೈಲಿನಲ್ಲಿ ಪ್ರಯಾಣ ಮಾಡುವಾಗ ಅಕ್ಕ–ಪಕ್ಕ ಕುಳಿತವರೊಂದಿಗೆ ಮಾತನಾಡುತ್ತಾ ಕಷ್ಟಗಳು ಸುಖಗಳನ್ನು ಹಂಚಿಕೊಳ್ಳುತ್ತಾ ಪ್ರಯಾಣದ ಹಾದಿಯನ್ನು ತಲುಪುತಲ್ಲಿದ್ದರು. ಆದರೆ ಈಗ ಬಸ್, ರೈಲುಗಳಲ್ಲಿ ಪ್ರಯಾಣ ಮಾಡುವಾಗ ಗಮನಿಸುವ ವಿಚಾರ ಎಂದರೆ ವಯಸ್ಸಾದವರು, ಗರ್ಭಿಣಿಯರು, ಹಿರಿಯರು ನಿಂತಿರುತ್ತಾರೆ. ಕಿರಿಯರು ತಮಗೂ ಈ ಲೋಕಕ್ಕೂ ಯಾವುದೇ ಸಂಬಂಧವೇ ಇಲ್ಲವೆನ್ನುವ ಹಾಗೇ ಜಂಗಮವಾಣಿಯಲ್ಲಿ ಮೈಮರೆತು ನೋಡಿಯು ನೋಡದಾಗೆ ತನ್ಮಯಭಾವದಲ್ಲಿ ಮೈ ಮನಸ್ಸನ್ನು ನಿಗ್ರಹಿಸಿಕೊಂಡು ತಲ್ಲೀನರಾಗಿರುತ್ತಾರೆ. ಎಲ್ಲರೂ ಹೀಗೆ ಮಾಡುತ್ತಾರೆ ಎಂದೇನಲ್ಲ, ಆದರೆ ಬಹುತೇಕರು ಹೀಗೆ ಮಾಡುವುದನ್ನು ನೋಡಿರುವುದರಿಂದ ಬೇಸರವಾಗುತ್ತದೆ.

ಎಷ್ಟೇ ಪದವಿಗಳನ್ನು ಪಡೆದುಕೊಂಡರೂ ಈ ಗುಣಗಳು ಬದಲಾಗದಿದ್ದರೆ ನಾವು ಕಲಿತ ಶಿಕ್ಷಣ, ಮರೆಯಾಗುತ್ತಿರುವ ಮಾನವೀಯತೆ, ಪಡೆದ ಪದವಿಗಳು ವ್ಯರ್ಥವೆಂದೇ ನನ್ನ ಭಾವನೆ. ಮೊದಲೆಲ್ಲ ತಾಯಂದಿರು ಮಗುವಿಗೆ ಚಂದ್ರನನ್ನು ತೋರಿಸುತ್ತಲೋ, ಆಟ ಆಡಿಸುತ್ತಲೋ ಊಟವನ್ನು ಮಾಡಿಸುತ್ತಿದ್ದರು. ಇಂದಿನ ಸ್ಥಿತಿಯನ್ನು ಅವಲೋಕಿಸಿದರೆ ಮಕ್ಕಳ ಕೈಗೊಂದು ಮೊಬೈಲ್ ಕೊಟ್ಟು ಊಟ ಮಾಡಿಸಿದರೆ ಅಲ್ಲಿಗೆ ತಮ್ಮ ಕರ್ತವ್ಯ ಮುಗಿಯಿತು ಎಂದು ಭಾವಿಸುವ ಆಧುನಿಕ ತಾಯಂದಿರು ನೆನಪಿಸಿಕೊಳ್ಳಬೇಕಾದ ವಿಚಾರ – ತಮ್ಮ ತಾಯಂದಿರು ತಮಗೆ ತೋರುತ್ತಿದ್ದ ಪ್ರೀತಿ, ಪಾಲನೆ ಮಾಡುತ್ತಿದ್ದ ಬಗೆ, ಸಂಬಂಧ ಗಟ್ಟಿಯಾಗಿರಲು ಹೇಳಿಕೊಟ್ಟ ಬದುಕಿನ ಪಾಠ ಇವುಗಳನ್ನು ನೆನಪಿಸಿಕೊಂಡಿದ್ದಲ್ಲಿ ಮೊಬೈಲ್ ಕೊಟ್ಟರೆ ಮಾತ್ರ ಮಕ್ಕಳು ಊಟ ಮಾಡುವುದು ಎಂಬ ತೇಲಿಕೆಯ ಉತ್ತರವನ್ನು ನೀಡಲಾರರೆಂಬ ಅಚಲವಾದ ನಂಬಿಕೆ ನನ್ನದು.


10, 15 ವರ್ಷಗಳ ಹಿಂದೆ ಮೊಬೈಲ್ ಅನ್ನು ಇತರ ಸಾಮಾಜಿಕ ಜಾಲತಾಣಗಳನ್ನು ಬಳಸುವವರ ಸಂಖ್ಯೆಯೇನು ಹೆಚ್ಚಾಗಿರಲಿಲ್ಲ. ಇತ್ತೀಚೆಗೆ ಕೆಲವು ಕಂಪನಿಗಳು ಅಧಿಕವಾಗಿ ಕೊಟ್ಟ ಅಂತರ್ಜಾಲದ ಪ್ರಭಾವವೋ ಅಥವಾ ರಾತ್ರೋರಾತ್ರಿ ಪ್ರಸಿದ್ಧರಾಗಬೇಕೆಂಬ ಹುಚ್ಚು ಹಂಬಲವೋ ಅತಿ ಹೆಚ್ಚು ಜನರು ಈ ಮೊಬೈಲ್‌ನ ಗೀಳಿಗೊಳಗಾಗಿ ಸಂಬಂಧಗಳ ಮೌಲ್ಯಗಳನ್ನೇ ಮರೆಯುತ್ತಿದ್ದಾರೆ. ಇಂತಹ ಜನರಿಗೆ ಹೇಳಬಹುದಾದ ಕಿವಿ ಮಾತೊಂದಿದೆ. ಸಾಮಾನ್ಯವಾಗಿ ಪ್ರಸಿದ್ಧರಾಗಬೇಕು ಅಥವಾ ನಮ್ಮನ್ನು ಗುರುತಿಸಬೇಕು ಎಂಬುದು ಪ್ರತಿಯೊಬ್ಬ ಮನುಷ್ಯರಲ್ಲೂ ಇರುವ ಒಂದು ಆಸೆ. ಅದು ಸಹಜವು ಎಂದು ಹೇಳಬಹುದು. ಇತರರಿಗಿಂತ ತಾನು ವಿಭಿನ್ನ, ತಾನು ಮಾಡುವ ಕಾರ್ಯಗಳನ್ನು ಯಾರಾದರೂ ಹೊಗಳಬೇಕು, ಗುರುತಿಸಬೇಕು, ಮೆಚ್ಚಬೇಕು, ಪ್ರೋತ್ಸಾಹಿಸಬೇಕು ಎಂಬುದಿರುತ್ತದೆ. ಇದು ಅಂತರ್ಜಾಲ ಬಳಸುವುದರಿಂದ ಆಗಲಿ ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯವಾಗಿ ಇರುವುದರಿಂದಾಗಲೀ ಗಳಿಸಿಕೊಳ್ಳುವ, ಗುರುತಿಸುವಿಕೆ ಶಾಶ್ವತವಲ್ಲ ಎಂಬ ಸತ್ಯ ನಮಗೆ ಅರಿವಾಗಬೇಕು. ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಹೋರಾಟಗಾರರು, ತಮ್ಮ ಸಂಶೋಧನೆಗಳ ಮೂಲಕ ಹೊಸ ಹೊಸ ವಿಷಯಗಳನ್ನು ಕಂಡುಹಿಡಿದ ವಿಜ್ಞಾನಿಗಳಾಗಲೀ, ತಮ್ಮ ಕೃತಿಗಳ ಮೂಲಕ ಇಂದಿಗೂ ಜೀವಂತವಾಗಿರುವ ಸಾಹಿತಿಗಳಾಗಲೀ ಇವರೆಲ್ಲರೂ ತಮ್ಮ ಸಾಧನೆಯ ಮೂಲಕ, ಪ್ರಾಮಾಣಿಕವಾದ ಕಾಯಕದ ಮೂಲಕ ಗಳಿಸಿರುವ ಯಶಸ್ಸನ್ನು ಪ್ರಸ್ತುತ ಜಾಲತಾಣಗಳಿಂದ ಗಳಿಸಲು ಸಾಧ್ಯವೇ ಎಂದು ಒಂದು ಕ್ಷಣ ನಿಮ್ಮನ್ನು ನೀವು ಪ್ರಶ್ನಿಸಿಕೊಳ್ಳಿ!! ಉತ್ತರ ನಿಮಗೇನೆ ತಿಳಿಯುತ್ತದೆ. ಅಡ್ಡ ದಾರಿಯಲ್ಲಿ ತಲುಪಿದ ಮಾರ್ಗವಾಗಲೀ, ಕ್ಷಣಿಕವಾಗಿ ಸಿಕ್ಕ ಸುಖವಾಗಲಿ, ಅಲ್ಪ ಕಾಲದಲ್ಲಿ ದೊರೆತ ಯಶಸ್ಸಾಗಲಿ ಕೊನೆಯವರೆಗೂ ಇರಲಾರದು. ಉದಾಹರಣೆಗೆ ಅತಿ ಹೆಚ್ಚು ಜನರು ನೋಡಿರುವ ದೃಶ್ಯ / ರೀಲ್ಸ್ ಅನ್ನು ಅಬ್ಬಬ್ಬಾ ಎಂದರೆ ಆ ಕ್ಷಣ ಅಥವಾ ನಿಮಿಷ ಇನ್ನೂ ಹೆಚ್ಚೆಂದರೆ ಒಂದು ತಿಂಗಳು ನೆನಪಿಸಿಕೊಳ್ಳಲು ಸಾಧ್ಯ. ಹೊಸ ನೀರು ಬಂದಾಗ ಹಳೆ ನೀರು ತೇಲಿ ಹೋಗುತ್ತದೆ ಎಂಬ ಮಾತಿನಂತೆ ಇನ್ಯಾರಾದರೂ ಚಿತ್ರ–ವಿಚಿತ್ರವಾದ ದೃಶ್ಯಗಳನ್ನು ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹಾಕಿದ್ದಲ್ಲಿ ಜನ ನಿಮ್ಮನ್ನು ಮರೆಯುತ್ತಾರೆ. ನೀವು ಗಳಿಸಿದ ಯಶಸ್ಸು, ನಿಮ್ಮ ಬದುಕು ಇಷ್ಟೇನಾ?! ಪ್ರಶ್ನಿಸಿಕೊಳ್ಳಿ. ಪ್ರಾಣಿಗಳಲ್ಲಿ ಬುದ್ಧಿವಂತ ಪ್ರಾಣಿ ಎಂದರೆ ಅದು ಮನುಷ್ಯ, ಮಂತ್ರವಾಗಿ ಆಲೋಚಿಸುವ ತರ್ಕಿಸುವ ಗುಣ ಮನುಷ್ಯನಿಗೆ ಅಂತಹ ಮನುಷ್ಯರು ತಮ್ಮ ಸಾಮರ್ಥ್ಯವನ್ನು ಮರೆತು ಸಮಯವನ್ನು ವ್ಯರ್ಥವಾಗಿ ಕಳೆಯುತ್ತಿರುವುದು ಎಷ್ಟರಮಟ್ಟಿಗೆ ಸರಿ ? ಉತ್ತರ ನಮಗೆ ಬಿಟ್ಟದ್ದು.

ಇಷ್ಟೆಲ್ಲಾ ಹೇಳಿದ ಮಾತ್ರಕ್ಕೆ ಸಾಮಾಜಿಕ ಜಾಲತಾಣವನ್ನು ಬಳಸಬಾರದು ಎಂದಾಗಲೀ ಅಥವಾ ನಾನು ಸಾಮಾಜಿಕ ಜಾಲತಾಣವನ್ನು ಬಳಸುತ್ತಿಲ್ಲ ಎಂದಾಗಲೀ ಅರ್ಥವಲ್ಲ. ಬದಲಾಗುತ್ತಿರುವ ಸನ್ನಿವೇಶಗಳಲ್ಲಿ ಹೊಸತನ್ನು ತಿಳಿದುಕೊಳ್ಳುವ, ಬಳಸುವ, ಉಪಯೋಗಿಸುವ ಹಕ್ಕು ಎಲ್ಲರಿಗೂ ಇದೆ. ಆದರೆ ಅದನ್ನು ಸರಿಯಾಗಿ ಸದುಪಯೋಗಪಡಿಸಿಕೊಂಡು ಒಳ್ಳೆಯ ಮಾರ್ಗದಲ್ಲಿ ಬಳಸಿಕೊಂಡಿದ್ದಲ್ಲಿ ಸರಿಯಾಗಿರುತ್ತದೆ. ಅವಕಾಶಗಳು ಯಥೇಚ್ಛವಾಗಿದೆ ಎಂದ ಮಾತ್ರಕ್ಕೆ ಅದನ್ನು ಬೇಕಾ ಬಿಟ್ಟಿಯಾಗಿ ಬಳಸಿಕೊಂಡಿದ್ದಲ್ಲಿ ಅದರಿಂದ ನೋವನ್ನು ಅನುಭವಿಸಬೇಕಾದವರು ನಾವೇ ಆಗಿರುತ್ತೇವೆ ಎಂಬುದನ್ನು ಮರೆಯಬಾರದು. ಮಾಧ್ಯಮ ಯಾವುದೇ ಆದರೂ ಸುಲಭವಾದ ಎಟುಗುವಿಕೆ ಮತ್ತು ಪ್ರತಿಯೊಬ್ಬರ ಕೈಯಲ್ಲಿ ಅನಿವಾರ್ಯದ ಕೂಸಾಗಿ ಪರಿವರ್ತನೆ ಆಗಿರುವ ಈ ಮೊಬೈಲನ್ನು ಆಡಿಸುವ, ಜೋಪಾನವಾಗಿ ಕಾಪಿಟ್ಟು ಕಾಯ್ದುಕೊಳ್ಳುವ ಭರದಲ್ಲಿ ಜಗದ ಮನಸ್ಸುಗಳು ಮುಗಿ ಬಿದ್ದಿವೆ. ಅನುಗಾಲ ಬಂಧವಿರಲಿ ಅನುಬಂಧವಿರಲಿ ಸಂಬಂಧವಿರಲಿ ಈ ಎಲ್ಲವುಗಳ ನಡುವೆ ಕಂದಕದ ತೆಕ್ಕೆಗೆ ಬಿದ್ದು ಒದ್ದಾಡುತ್ತಾ ಉಸಿರುಗಟ್ಟಿಸುವ ವಾತಾವರಣಕ್ಕೆ ಒಳಗಾಗಬಾರದು. ಅಂತೆಯೇ ಹಿರಿಯರು ಹೇಳಿದ ಒಂದು ಮಾತು ಅಕ್ಷರಶಃ ನಿಜ – ಅತಿಯಾದರೆ ಅಮೃತವೂ ವಿಷ. ಯಾವುದನ್ನೇ ಆಗಲಿ ಎಷ್ಟು ಬೇಕೋ ಅಷ್ಟನ್ನು ಬಳಸಿಕೊಂಡಲ್ಲಿ ಒಳಿತು ಎಂಬುದನ್ನು ಸಾದರಪಡಿಸುವುದು ಸದರಿ ಲೇಖನದ ಉದ್ದೇಶವಾಗಿದೆ.

**ವಯನಾಡು ಗುಡ್ಡ ಕುಸಿತದಿಂದ ಎಚ್ಚೆತ್ತ ಸರ್ಕಾರ**

## ಅನಧಿಕೃತ ಹೋಮ್ ಸ್ಟೇ, ರೆಸಾರ್ಟ್ ತೆರವಿಗೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆ

ಬೆಂಗಳೂರು, ಆ.2– ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ದೇಶದ ಹಲವು ಭಾಗಗಳು ನಲುಗಿ ಹೋಗಿವೆ. ಅಲ್ಲಲ್ಲಿ ಪ್ರವಾಹ, ಗುಡ್ಡ ಕುಸಿತದಿಂದಾಗಿ ಜನ ಜೀವನ ಅಸ್ತವ್ಯಸ್ತವಾಗಿದೆ. ನೂರಾರು ಜೀವಗಳು ಬಲಿಯಾಗಿವೆ. ಅದರಲ್ಲೂ ವಯನಾಡು ದುರಂತವಂತೂ ಇಡೀ ದೇಶವನ್ನೇ ಬೆಚ್ಚಿ ಬೀಳಿಸಿದೆ. ವಯನಾಡು ಗುಡ್ಡ ಕುಸಿತ ದುರ್ಘಟನೆ ಬಳಿಕ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದ್ದು, ಪಶ್ಚಿಮ ಘಟ್ಟದಲ್ಲಿನ ಎಲ್ಲಾ ಅನಧಿಕೃತ ಹೋಮ್ ಸ್ಟೇ ಹಾಗೂ ರೆಸಾರ್ಟ್‌ಗಳ ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದೆ.



ಈ ಕುರಿತು ಅರಣ್ಯ ಸಚಿವ ಈಶ್ವರ್ ಖಂಡ್ರೆಯವರು ಸುತ್ತೋಲೆ ಹೊರಡಿಸಿದ್ದಾರೆ. ರಾಜ್ಯದ ಶಿರೂರು ಬಳಿ ಸಂಭವಿಸಿದ ಗುಡ್ಡ ಕುಸಿತದಲ್ಲಿ 11 ಮಂದಿ ಬಲಿಯಾಗಿದ್ದಾರೆ. ನೆರೆ ರಾಜ್ಯ ಕೇರಳದ ವಯನಾಡಿನಲ್ಲಿ ಸಂಭವಿಸಿರುವ ಗುಡ್ಡ ಕುಸಿತದಲ್ಲಿ 250 ಮುಗ್ಧ ಜನರು ಮೃತಪಟ್ಟಿದ್ದು, 200ಕ್ಕೂ ಹೆಚ್ಚು ಜನರು ಕಣ್ಮರೆಯಾಗಿರುವುದು ಅತ್ಯಂತ ನೋವಿನ ಸಂಗತಿ. ಈ ದುರಂತಗಳು ನಮಗೂ ಎಚ್ಚರಿಕೆಯ ಗಂಟೆಯಾಗಿದೆ.

ಸ್ವಾಭಾವಿಕ, ಪ್ರಕೃತಿ ದತ್ತವಾದ ಪಶ್ಚಿಮ ಘಟ್ಟದ ಗುಡ್ಡಗಳು ಮತ್ತು ಶೋಲಾ ಅರಣ್ಯಗಳ ತಲೆ ಕಡಿದು ಕಾಫಿ ತೋಟ, ಮನೆ, ಹೋಂಸ್ಟೇ, ರೆಸಾರ್ಟ್ ಮಾಡುತ್ತಿರುವುದರಿಂದ ಹಾಗೂ ಬೇರಿನಿಂದ ಗಟ್ಟಿಯಾಗಿ ಮಣ್ಣು ಹಿಡಿದಿಡುವ ಬೃಹತ್ ಮರಗಳ ಕಡಿತಲೆ, ಅವೈಜ್ಞಾನಿಕವಾಗಿ ಗುಡ್ಡ ಕತ್ತರಿಸಿ ನಿರ್ಮಿಸುವ ರಸ್ತೆಗಳಿಂದ ಇಂತಹ ದುರಂತ ಮರುಕಳಿಸುತ್ತಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿರುವುದನ್ನು, ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

ಗಿರಿ ಮತ್ತು ಘಟ್ಟ ಪ್ರದೇಶದಲ್ಲಿ ವಿಪರೀತವಾಗಿ ವಾಹನಗಳ ಸಂಚಾರದಿಂದಲೂ ಅಪಾಯ ಎದುರಾಗುತ್ತಿದೆ. ವಾರಾಂತ್ಯದಲ್ಲಿ ಪ್ರವಾಸ, ಚಾರಣದ ಹೆಸರಲ್ಲಿ ಗಿರಿ ಮತ್ತು ಕಾನನ ಪ್ರದೇಶಕ್ಕೆ ಸಾವಿರಾರು ಸಂಖ್ಯೆಯಲ್ಲಿ ಜನರು ಬರುವುದೂ ಇಂತಹ ದುರಂತಗಳಿಗೆ ಪೂರಕವಾಗಿದೆ.

ಈ ಹಿನ್ನೆಲೆಯಲ್ಲಿ ಚಿಕ್ಕಮಗಳೂರು, ಶಿವಮೊಗ್ಗ, ಮೈಸೂರು, ಚಾಮರಾಜಗರ, ಬೆಳಗಾವಿ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಕೊಡಗು, ಹಾಸನ ಸೇರಿದಂತೆ ರಾಜ್ಯದ ಪಶ್ಚಿಮಘಟ್ಟದಲ್ಲಿ 2015ರಿಂದೀಚೆಗೆ ಪಶ್ಚಿಮ ಘಟ್ಟದ ಎಲ್ಲ ಗಿರಿ ಪ್ರದೇಶಗಳಲ್ಲಿ ಅನಧಿಕೃತವಾಗಿ ಮತ್ತು ಅರಣ್ಯ ಪ್ರದೇಶ ಒತ್ತುವರಿ ಮಾಡಿ ನಿರ್ಮಿಸಲಾಗಿರುವ ಬಡಾವಣೆ, ತೋಟ, ಹೋಂ ಸ್ಟೇ ಮತ್ತು ರೆಸಾರ್ಟ್‌ಗಳ ವಿರುದ್ಧ ತಕ್ಷಣವೇ ಕ್ರಮ ಕೈಗೊಳ್ಳಲು ಹಾಗೂ 1 ತಿಂಗಳೊಳಗೆ ಕೈಗೊಂಡ ಕ್ರಮದ ವಿವರದೊಂದಿಗೆ ಕಡತದಲ್ಲಿ ವರದಿ ಸಲ್ಲಿಸುವಂತೆ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದಾರೆ.

ಸುತ್ತೋಲೆ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿರುವ ಸಚಿವರು, ರಾಜ್ಯದ ಪಶ್ಚಿಮ ಘಟ್ಟಗಳಲ್ಲಿ 2015ರ ನಂತರ ಅರಣ್ಯ ಒತ್ತುವರಿ ಮಾಡಿಕೊಂಡು ಅನಧಿಕೃತವಾಗಿ ನಿರ್ಮಿಸಿರುವ ಹೋಮ್ ಸ್ಟೇ , ರೆಸಾರ್ಟ್ ತೆರವಿಗೆ ಕ್ರಮ ಕೈಗೊಳ್ಳಲಾಗಿದೆ. ಪ್ರಕೃತಿ ವಿಕೋಪದಿಂದ ಆಗುತ್ತಿರುವ ಅನಾಹುತಗಳನ್ನು ನೋಡುತ್ತಿದ್ದೇವೆ. ಕೇರಳದಲ್ಲಿ ಆದ ಘಟನೆಯಿಂದ ನಾಲ್ಕೈದು ಹಳ್ಳಿ ನಾಪತ್ತೆಯಾಗಿ ನೂರಾರು ಜನರು ಸಾವಿಗೀಡಾಗಿದ್ದಾರೆ. ವಿಶೇಷವಾಗಿ ಪಶ್ಚಿಮ ಘಟ್ಟಗಳ ಸಾಲಿನಲ್ಲಿ ಹೋಂ ಸ್ಟೇ, ರೆಸಾರ್ಟ್‌ಗಳಿಗೆ ರಸ್ತೆ ಮಾಡುತ್ತಾರೆ, ಅವೈಜ್ಞಾನಿಕವಾಗಿ ಗುಡ್ಡ ಕತ್ತರಿಸ್ತಾರೆ. ಇವುಗಳಿಂದ ಅನಾಹುತ ಆಗುತ್ತದೆ. ಮೊದಲು ಕೃಷಿ ಚಟುವಟಿಕೆಗಳನ್ನು ಶುರುಮಾಡಿ ನಂತರ ರೆಸಾರ್ಟ್ ಮಾಡುತ್ತಾರೆ. ಹೀಗಾಗಿ ಅನಧಿಕೃತ ಹೋಂ ಸ್ಟೇ ವಿರುದ್ಧ ಕ್ರಮಕ್ಕೆ ಸರ್ಕಾರ ಮುಂದಾಗಿದೆ ಎಂದು ಹೇಳಿದ್ದಾರೆ.

## ವಯನಾಡ್ ದುರಂತ: ಮೃತರ ಸಂಖ್ಯೆ 333ಕ್ಕೆ ಏರಿಕೆ



**ಇನ್ನೂ 300 ಮಂದಿ ನಾಪತ್ತೆ**

ವಯನಾಡ್, ಆ.2– ಕೇರಳದ ವಯನಾಡ್ ಜಿಲ್ಲೆಯಲ್ಲಿ ಭೂಕುಸಿತ ಸಂಭವಿಸಿದ ನಂತರ ನಾಲ್ಕನೇ ದಿನವಾದ ಇಂದು ಶುಕ್ರವಾರ ನಡೆದ ಶೋಧ ಕಾರ್ಯಾಚರಣೆಯಲ್ಲಿ ನಾಲ್ವರು ಜೀವಂತವಾಗಿ ಪತ್ತೆಯಾಗಿದ್ದಾರೆ. ಚೂರಲ್ಮಲಾದಿಂದ ಮೂರು ಕಿಲೋ ಮೀಟರ್ ದೂರದಲ್ಲಿರುವ ಪಡವೆಟ್ಟಿಕುನ್ನು ಎಂಬಲ್ಲಿ ಒಂದೇ ಕುಟುಂಬದ ನಾಲ್ವರು ಗಾಯಗಳೊಂದಿಗೆ ಅವರ ಮನೆಯಲ್ಲಿ ಜೀವಂತವಾಗಿ ಪತ್ತೆಯಾಗಿದ್ದಾರೆ.

ಸ್ಥಳೀಯ ಮಾಧ್ಯಮಗಳ ವರದಿಗಳ ಪ್ರಕಾರ, ಕುಟುಂಬವನ್ನು ವಿಮಾನದಲ್ಲಿ ಆಸ್ಪತ್ರೆಗೆ ಸಾಗಿಸಲು ವ್ಯವಸ್ಥೆ ಮಾಡಲಾಗುತ್ತಿದೆ. ಕೇರಳ ಸರ್ಕಾರದ ಅಧಿಕೃತ ಮಾಹಿತಿ ಪ್ರಕಾರ ಜನರ ಸಾವಿನ ಸಂಖ್ಯೆ 333ಕ್ಕೆ ಏರಿಕೆಯಾಗಿದೆ. ಕೇರಳದ ಎಡಿಜಿಪಿ ಎಂ ಆರ್.ಅಜಿತ್‌ಕುಮಾರ್ ಇಂದು ಈ ಪ್ರದೇಶದಲ್ಲಿ ಸಂಭವಿಸಿದ ವಿನಾಶಕಾರಿ ಭೂಕುಸಿತದಲ್ಲಿ ಸುಮಾರು 300 ಜನರು ಇನ್ನೂ ನಾಪತ್ತೆಯಾಗಿದ್ದಾರೆ ಎಂದು ಹೇಳಿದ್ದಾರೆ. ಭೂಕುಸಿತದಿಂದ 348 ಮನೆಗಳಿಗೆ ಹಾನಿಯಾಗಿದೆ ಎಂದು ಹೇಳಲಾಗಿದೆ.

ರಕ್ಷಕರ 40 ತಂಡಗಳು ಇಂದು ಮುಂಜಾನೆ ವಯನಾಡ್ ಜಿಲ್ಲೆಯಲ್ಲಿ ಶೋಧ ಕಾರ್ಯಾಚರಣೆಯನ್ನು ಪುನರಾರಂಭಿಸಿದವು. ಕಳೆದ ರಾತ್ರಿ, ಸೇನೆಯು ಚೂರಲ್ಮಲಾದಲ್ಲಿ ಬೈಲಿ ಸೇತುವೆಯ ನಿರ್ಮಾಣವನ್ನು ಪೂರ್ಣಗೊಳಿಸಿತು, ಇದು ಮುಂಡಕ್ಕೈ ಮತ್ತು ಪುಂಜಿರಿಮಟ್ಟಂ ಗ್ರಾಮಗಳಲ್ಲಿ ಶೋಧ ಕಾರ್ಯಾಚರಣೆಯನ್ನು ವೇಗಗೊಳಿಸಲು ಸಹಾಯ ಮಾಡುತ್ತದೆ.

190 ಅಡಿ ಉದ್ದದ ಬೈಲಿ ಸೇತುವೆಯ ಪೂರ್ಣಗೊಂಡ ಕಾರಣ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳು ಪ್ರಚೋದನೆಯನ್ನು ಪಡೆದಿವೆ, ಇದು ಅಗೆಯುವ ಯಂತ್ರಗಳು ಮತ್ತು ಆಂಬ್ಯುಲೆನ್ಸ್‌ಗಳನ್ನು ಒಳಗೊಂಡಂತೆ ಭಾರೀ ಯಂತ್ರಗಳ ಚಲನೆಯನ್ನು ಶಕ್ತಗೊಳಿಸುತ್ತದೆ, ಮುಂಡಕ್ಕೈ ಮತ್ತು ಚೂರಲ್ಮಲಾ ಕುಗ್ರಾಮಗಳಿಗೆ ಆಂಬ್ಯುಲೆನ್ಸ್‌ಗಳನ್ನು ಸಕ್ರಿಯಗೊಳಿಸುತ್ತದೆ ಎಂದು ಅಧಿಕಾರಿ ಸೇರಿಸಲಾಗಿದೆ.

ವೈಮಾನಿಕ ಡ್ರೋನ್ ಮತ್ತು ಸೆಲ್‌ಫೋನ್‌ಗಳಿಂದ ಜಿಪಿಎಸ್ ನಿರ್ದೇಶಾಂಕಗಳು ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಕೇಂದ್ರೀಕರಿಸಬಹುದಾದ ಸ್ಥಳಗಳನ್ನು ಗುರುತಿಸಲು ವಯನಾಡ್ ಜಿಲ್ಲಾಧಿಕಾರಿ ಹೇಳಿದ್ದಾರೆ. ವಯಂಡ್ ಕಲೆಕ್ಟರ್ ಮೇಘಶ್ರೀ ಡಿ ಆರ್ ಸುದ್ದಿಗಾರರೊಂದಿಗೆ ಮಾತನಾಡಿ, ಅತಿ ಹೆಚ್ಚು ಹಾನಿಗೊಳಗಾದ ಮುಂಡಕ್ಕೈ ಮತ್ತು ಚೂರಲ್‌ಮಲಾ ಕುಗ್ರಾಮಗಳನ್ನು ಆರು ವಲಯಗಳಾಗಿ ಪರಿವರ್ತಿಸಲಾಗಿದೆ, ಅಲ್ಲಿ 40 ರಕ್ಷಣಾ ಸಿಬ್ಬಂದಿಯನ್ನು, ಶವ ನಾಯಿಗಳು ಮತ್ತು ಭಾರೀ ಯಂತ್ರೋಪಕರಣಗಳ ಜೊತೆಗೆ ಬದುಕುಳಿದವರು ಮತ್ತು ಅವಶೇಷಗಳಿಂದ ಅವಶೇಷಗಳನ್ನು ಹೊರತೆಗೆಯಲು ನಿಯೋಜಿಸಲಾಗಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಆಗಸ್ಟ್ 3 ಶನಿವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 109 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4








### ವಾಲ್ಮೀಕಿ ನಿಗಮ, ಮುಡಾ ಹಗರಣ; ಮುಖ್ಯಮಂತ್ರಿ ರಾಜೀನಾಮೆಗೆ ಆಗ್ರಹಿಸಿ

# ಇಂದಿನಿಂದ ಬಿಜೆಪಿ–ಜೆಡಿಎಸ್ ಮೈಸೂರು ಚಲೋ ಪಾದಯಾತ್ರೆ

■ ಒಂದು ವಾರ ಕಾಲ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ; ಇಂದು ಬೆಳಗ್ಗೆ 8.30ಕ್ಕೆ ಕೆಂಗೇರಿಯ ಕೆಂಪಮ್ಮ ದೇವಸ್ಥಾನ ಬಳಿ ಬಿಎಸ್‌ವೈ, ಹೆಚ್‌ಡಿಕೆ ಚಾಲನೆ ■ ನಿತ್ಯವೂ 8ರಿಂದ 10 ಸಾವಿರ ಜನ ಪಾಲ್ಗೊಳ್ಳುವ ಸಾಧ್ಯತೆ; ಆ.10ರಂದು ಮೈಸೂರಲ್ಲಿ ಸಮಾರೋಪ




ಬಿ.ವೈ.ವಿಜಯೇಂದ್ರ



ಬೆಂಗಳೂರು, ಆ. 2(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅಕ್ರಮವಾಗಿ ತಮ್ಮ ಕುಟುಂಬದವರಿಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ನಿವೇಶನ ಪಡೆದು ಸರ್ಕಾರದ ಬೊಕ್ಕಸಕ್ಕೆ ಭಾರಿ ನಷ್ಟ ಉಂಟು ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಶೋಕಾಸ್ ನೋಟಿಸ್ ನೀಡಿ ವಿವರಣೆ ಕೇಳಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ, ಜೆಡಿಎಸ್ ನಾಳೆಯಿಂದ (ಆ.3) ಮೈಸೂರು ಚಲೋ ಪಾದಯಾತ್ರೆ ಹಮ್ಮಿಕೊಂಡಿದೆ.

ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರಗಳನ್ನು ಜನರಿಗೆ ತಿಳಿಸಲು ಎನ್‌ಡಿಎ ಮೈತ್ರಿಕೂಟದ ಬಿಜೆಪಿ–ಜೆಡಿಎಸ್ ಪಕ್ಷಗಳು ಬೆಂಗಳೂರಿನಿಂದ ಮೈಸೂರಿಗೆ ಒಂದು ವಾರ ಕಾಲ ಪಾದಯಾತ್ರೆ ನಡೆಸುತ್ತಿವೆ. ನಗರದ ಹೊರವಲಯದ ಕೆಂಗೇರಿ ಸಮೀಪದಿಂದ ಪಾದಯಾತ್ರೆ ಆರಂಭಗೊಳ್ಳಲಿದ್ದು, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪಾದಯಾತ್ರೆಗೆ ಚಾಲನೆ ನೀಡಲಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಕಾಂಗ್ರೆಸ್ ಸರ್ಕಾರದ ವಿರುದ್ಧ ಭ್ರಷ್ಟಾಚಾರ ■ 9ನೇ ಪುಟಕ್ಕೆ




ಬಿಜೆಪಿ–ಜೆಡಿಎಸ್ ಮೈಸೂರು ಚಲೋ ಪಾದಯಾತ್ರೆ ಸಾಗುವ ಮಾರ್ಗ

## ಪಾದಯಾತ್ರೆಗೆ ಸರ್ಕಾರದ ಅನುಮತಿ



ಪರಮೇಶ್ವರ್

ಬೆಂಗಳೂರು, ಆ. 2(ಕೆಎಂಶಿ)– ಬಿಜೆಪಿ ಮತ್ತು ಜೆಡಿಎಸ್ ನಾಳೆ (ಆ.3) ಹಮ್ಮಿಕೊಂಡಿರುವ 'ಮೈಸೂರು ಚಲೋ' ಪಾದಯಾತ್ರೆಗೆ ಅನುಮತಿ ಕೊಡಲು ನಿರ್ಧರಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಂತಿಯುತವಾಗಿ ಪಾದಯಾತ್ರೆ ಮಾಡುತ್ತೇವೆ ಎಂಬುದಾಗಿ ಹೇಳಿದ್ದಾರೆ. ಆದ್ದರಿಂದ ಪಾದಯಾತ್ರೆಗೆ ಅನುಮತಿ ಕೊಡಲು ಸರ್ಕಾರ ನಿರ್ಧರಿಸಿದೆ ಎಂದರು.

ಕಾಂಗ್ರೆಸ್ ಸರ್ಕಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣ ಹೋರಾಟವನ್ನು ಮತ್ತಷ್ಟು ದೊಡ್ಡಮಟ್ಟಕ್ಕೆ ಕೊಂಡೊಯ್ಯಲು ಪ್ರತಿಪಕ್ಷ ಬಿಜೆಪಿ ಹಾಗೂ ಜೆಡಿಎಸ್ ನಾಳೆ ನಡೆಸಲು ಉದ್ದೇಶಿಸಿರುವ ■ 9ನೇ ಪುಟಕ್ಕೆ



## ಪಾದಯಾತ್ರೆ ರೂಟ್ ಮ್ಯಾಪ್

ಬೆಂಗಳೂರು, ಆ. 2– ಮುಡಾ ಮತ್ತು ವಾಲ್ಮೀಕಿ ನಿಗಮದ ಹಗರಣಗಳ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಬಿಜೆಪಿ–ಜೆಡಿಎಸ್ ಜಂಟಿಯಾಗಿ ನಾಳೆ (ಆ. 3)ಯಿಂದ ಆಗಸ್ಟ್ 10ರವರೆಗೆ ನಡೆಸಲಿರುವ ಪಾದಯಾತ್ರೆಯ ರೂಟ್ ಮ್ಯಾಪ್ ಮತ್ತು ಕಾರ್ಯಕ್ರಮಗಳ ಪಟ್ಟಿ ಅಂತಿಮಗೊಳಿಸಲಾಗಿದೆ. ಮೊದಲ ದಿನ 16 ಕಿ.ಮೀ. ಕ್ರಮಿಸುವ ಪಾದಯಾತ್ರೆ ರಾತ್ರಿ ಬಿಡದಿಯ ಮಂಜುನಾಥ ಕನ್ವೆನ್‌ಷನ್ ಹಾಲ್‌ನಲ್ಲಿ ವಾಸ್ತವ್ಯ ಹೂಡಲಿದೆ.

ಭಾನುವಾರ ಬೆಳಗ್ಗೆ ಬಿಡದಿಯ ಮಂಜುನಾಥ ಕನ್ವೆನ್‌ಷನ್ ಬಳಿ ತಮಟೆ ಬಾರಿಸುವ ಮೂಲಕ ಪಾದಯಾತ್ರೆಗೆ ಚಾಲನೆ ನೀಡಲಿದ್ದು, ■ 9ನೇ ಪುಟಕ್ಕೆ

### ಕೊಡಗಿನ ನೆರೆ ಸಂತ್ರಸ್ತರ ಭೇಟಿಯಾದ ಮುಖ್ಯಮಂತ್ರಿ ಸಿದ್ದರಾಮಯ್ಯ

## ಪೂರ್ಣ ಮನೆ ಹಾನಿಗೆ 1.20 ಲಕ್ಷ ಪರಿಹಾರದ ಜೊತೆಗೆ ಮನೆ ನಿರ್ಮಿಸಿಕೊಡುವ ಭರವಸೆ

ಮಡಿಕೇರಿ, ಆ.2–ಪೂರ್ಣ ಮನೆ ಹಾನಿಗೆ 1.20 ಲಕ್ಷ ರೂ. ಪರಿಹಾರದ ಜೊತೆಗೆ ಡಿ.ದೇವರಾಜು ಅರಸು ನಿಗಮದ ಮೂಲಕ ಮನೆ ಕಟ್ಟಿ ಕೊಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಕೊಡಗಿನ ಮಳೆ ಹಾನಿ, ಭೂ ಕುಸಿತ ಹಾಗೂ ಪ್ರವಾಹ ಪೀಡಿತ ಪ್ರದೇಶಗಳಿಗೆ ಶುಕ್ರವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾಗಶಃ ಹಾನಿಯಾಗಿರುವ ಮನೆಗಳಿಗೆ 50 ಸಾವಿರ ರೂ. ಪರಿಹಾರ ನೀಡಲಾಗುವುದು. ಇದರಲ್ಲಿ 43 ಸಾವಿರ ರೂ. ರಾಜ್ಯ ಸರ್ಕಾರದ ಹಣವಾಗಿದ್ದು, ಈಗಾಗಲೇ ನೇರವಾಗಿ ಸಂತ್ರಸ್ತರ ಖಾತೆಗೆ ಹಣ ವರ್ಗಾವಣೆಯಾಗಿದೆ ಎಂದು ಮಾಹಿತಿ ನೀಡಿದರು.

ಮಳೆಯಿಂದ 16 ಜಾನುವಾರು ಸತ್ತಿದ್ದು, ತಲಾ 35 ಸಾವಿರ ರೂ. ಪರಿಹಾರ ನೀಡಲಾಗಿದೆ. 14 ಪರಿಹಾರ ಕ್ಯಾಂಪ್‌ಗಳನ್ನು ತೆರೆಯಲಾಗಿದ್ದು, 10 ಕ್ಯಾಂಪ್‌ಗಳಲ್ಲಿ 186 ಮಂದಿ ಆಶ್ರಯ ಪಡೆದಿದ್ದಾರೆ. ತೋರಾ ಕ್ಯಾಂಪ್‌ನ ಸಂತ್ರಸ್ತರೊಂದಿಗೆ ನಾನೇ ನೇರವಾಗಿ ಸಂವಾದ ನಡೆಸಿ, ಅಲ್ಲಿನ ವ್ಯವಸ್ಥೆಗಳ ಬಗ್ಗೆ ಮಾಹಿತಿ ಪಡೆದಿರುವುದಾಗಿ ತಿಳಿಸಿದರು.



ಪೊನ್ನಂಪೇಟೆ ತಾಲೂಕಿನಲ್ಲಿ ಮಳೆ ಹಾನಿ ಪ್ರದೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

> “ ಕಸ್ತೂರಿ ರಂಗನ್ ವರದಿ ತಿರಸ್ಕರಿಸಬೇಕು ಎನ್ನುವುದು ನಮ್ಮ ತೀರ್ಮಾನವಾಗಿದೆ. ಈ ಬಗ್ಗೆ ಅರಣ್ಯ ಸಚಿವರೊಂದಿಗೆ ಮತ್ತೊಮ್ಮೆ ಚರ್ಚಿಸಿ, ತೀರ್ಮಾನ ಮಾಡಲಾಗುವುದು.
> –ಸಿದ್ದರಾಮಯ್ಯ, ಮುಖ್ಯಮಂತ್ರಿ

ಭೂ ಕುಸಿತ ಪ್ರದೇಶಗಳಲ್ಲಿ ಶಾಶ್ವತ ಪರಿಹಾರಕ್ಕೆ ಜಿಎಸ್‌ಐ ವರದಿ ನಂತರ ತೀರ್ಮಾನಿಸಲಾಗುವುದು ಎಂದು ಹೇಳಿದರು. ರಾಜ್ಯದಲ್ಲಿ 746 ಕೋಟಿ ಮತ್ತು ಕೊಡಗು ಜಿಲ್ಲಾಧಿಕಾರಿ ಪಿಡಿ ಖಾತೆಯಲ್ಲಿ 46 ಕೋಟಿ ರೂ. ಇದ್ದು, ಅಗತ್ಯಬಿದ್ದರೆ ಇನ್ನೂ ಹೆಚ್ಚಿನ ಹಣ ನೀಡಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲೆಯಲ್ಲಿ 20 ಕಡೆ ಭೂ ಕುಸಿತ ಮತ್ತು 24 ಕಡೆ ಸಣ್ಣ ಪ್ರಮಾಣದಲ್ಲಿ ಮಣ್ಣು ಕುಸಿತವಾಗಿದೆ. ಅದೃಷ್ಟವಶಾತ್ ಪ್ರಾಣ ಹಾನಿ ಆಗಿಲ್ಲ. ಕೆಲವೆಡೆ 5 ಮಂದಿ ಗಾಯಗೊಂಡಿದ್ದಾರೆ. 67 ಮನೆಗಳು ಪೂರ್ಣಹಾನಿ ಆಗಿದ್ದರೆ, 176 ಮನೆಗಳು ಭಾಗಶಃ ಹಾನಿಯಾಗಿದೆ ಎಂದು ವಿವರಿಸಿದರು. ಮಳೆಯಿಂದ 28 ಹೆಕ್ಟೇರ್‌ನಲ್ಲಿ ತೋಟಗಾರಿಕಾ ಬೆಳೆ ಹಾನಿಯಾಗಿದೆ. ಈ ಕುರಿತು ಕಾಫಿ ಬೋರ್ಡ್ ಮತ್ತು ಕಂದಾಯ ಇಲಾಖೆ ■ 9ನೇ ಪುಟಕ್ಕೆ



# ರಾಜ್ಯಪಾಲರ ಶೋಕಾಸ್ ನೋಟಿಸ್‌ಗೆ ಹೆದರಲ್ಲ

### ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ದಿಟ್ಟ ಪ್ರತಿಕ್ರಿಯೆ

● ಅದನ್ನು ಸಮರ್ಥವಾಗಿ ಎದುರಿಸುತ್ತೇನೆ ● ತಪ್ಪು ಮಾಡಿದ್ದರೆ ತಾನೆ ಹೆದರುವುದು ● ರಾಜ್ಯಪಾಲರು ತರಾತುರಿಯಲ್ಲಿ ನೋಟಿಸ್ ನೀಡಿದ್ದೇಕೆ ● ಸರ್ಕಾರ ಅಸ್ಥಿರಗೊಳಿಸುವ ಯತ್ನ ನಡೆದಿದೆ

ಮೈಸೂರು, ಆ.2(ಬಿಎಲ್‌ಎಯು)– ಮುಡಾ ಹಗರಣ ಸಂಬಂಧ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನೀಡಿರುವ ಶೋಕಾಸ್ ನೋಟಿಸ್‌ಗೆ ನಾನು ಹೆದರಲ್ಲ. ಇದು ಮುಖ್ಯಮಂತ್ರಿ ಸಿದ್ದರಾಮಯ್ಯ ದಿಟ್ಟ ಪ್ರತಿಕ್ರಿಯೆ. ಮೈಸೂರು ವಿಮಾನ ನಿಲ್ದಾಣದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಇದನ್ನು ನಾನು ಸಮರ್ಥವಾಗಿ ಎದುರಿಸುತ್ತೇನೆ, ಎಲ್ಲದಕ್ಕೂ ಸಿದ್ಧ ನಾಗಿದ್ದೇನೆ. ರಾಜ್ಯ ಪಾಲರು ಕಾನೂನು ರೀತಿ ಶೋಕಾಸ್ ನೋಟಿಸ್ ನೀಡಿಲ್ಲ. ಇದರಿಂದ ನಾನೇಕೆ ಹೆದರಿಕೊಳ್ಳಬೇಕು ಎಂದು ಪ್ರಶ್ನಿಸಿದ ಸಿದ್ದರಾಮಯ್ಯ, ತಪ್ಪು ಮಾಡಿದ್ದರೆ ತಾನೆ ಹೆದರುವುದಕ್ಕೆ ಎಂದು ತಿಳಿಸಿದರು. ■ 6ನೇ ಪುಟಕ್ಕೆ

> “ ಟಿ.ಜೆ.ಅಬ್ರಹಾಂ ಒಬ್ಬ ಬ್ಲ್ಯಾಕ್‌ಮೈಲರ್
> ತಮ್ಮ ವಿರುದ್ಧ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್‌ಗೆ ದೂರು ನೀಡಿರುವ ಟಿ.ಜೆ.ಅಬ್ರಾಹಾಂ ಒಬ್ಬ ಬ್ಲ್ಯಾಕ್‌ಮೈಲರ್. ಈ ಹಿಂದೆಯೂ ಇದೇ ರೀತಿ ಹಲವರ ವಿರುದ್ಧ ದೂರು ನೀಡಿದ್ದಾರೆ. ಆತ ನೀಡಿರುವ ದೂರು ಸ್ವೀಕರಿಸಿ ರಾಜ್ಯಪಾಲರು ನನಗೆ ಶೋಕಾಸ್ ನೋಟಿಸ್ ಜಾರಿ ಮಾಡಿರುವುದು ಕಾನೂನು ಬಾಹಿರ. ನನ್ನ ಮೇಲೆ ಬಂದಿರುವ ಆಪಾದನೆಗಳ ಬಗ್ಗೆ ಮೊನ್ನೆ ದೆಹಲಿಯಲ್ಲಿ ಹೈಕಮಾಂಡ್‌ಗೆ ವಿವರಣೆ ನೀಡಿದ್ದೇನೆ. ಈ ಮೂಲಕ ವಸ್ತು ಸ್ಥಿತಿ ಅರ್ಥ ಮಾಡಿಸಿದ್ದೇನೆ.
> – ಸಿದ್ದರಾಮಯ್ಯ, ಮುಖ್ಯಮಂತ್ರಿ




ಮೈಸೂರು ವಿಮಾನ ನಿಲ್ದಾಣದಲ್ಲಿ ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಕರ್ತರ ಜೊತೆ ಮಾತನಾಡಿದರು.

### ರಾಜ್ಯಪಾಲರು ಕೇಂದ್ರ ಸರ್ಕಾರ, ಬಿಜೆಪಿ, ಜೆಡಿಎಸ್ ಕೈಗೊಂಬೆ

ತಮಗೆ ಶೋಕಾಸ್ ನೋಟಿಸ್ ನೀಡಿರುವ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕೇಂದ್ರ ಸರ್ಕಾರ, ಬಿಜೆಪಿ ಹಾಗೂ ಜೆಡಿಎಸ್ ಕೈ ಗೊಂಬೆಯಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು. ಈ ಮೂಲಕ ಕೇಂದ್ರ ಸರ್ಕಾರ ರಾಜಭವನವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದು, ಚುನಾಯಿತ ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನ ಮಾಡುತ್ತಿದೆ ಎಂದು ದೂರಿದರು. ರಾಜ್ಯಪಾಲರು ಶೋಕಾಸ್ ನೋಟಿಸ್ ನೀಡಿರುವುದು ಕಾನೂನು ಬಾಹಿರ ಹಾಗೂ ಪ್ರಜಾಪ್ರಭುತ್ವವನ್ನು ನಾಶ ಮಾಡುವ ಯತ್ನವಾಗಿದೆ. ■ 9ನೇ ಪುಟಕ್ಕೆ

### ಇಂದು ನಂಜನಗೂಡಿಗೆ ಸಿದ್ದರಾಮಯ್ಯ ಭೇಟಿ

ಪ್ರವಾಹ ಪೀಡಿತ ಮೈಸೂರಿನ ನಂಜನಗೂಡಿಗೆ ನಾಳೆ (ಆಗಸ್ಟ್ 3) ಭೇಟಿ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಸಚಿವರಿಗೆ ಸೂಚನೆ ನೀಡಿದ್ದೇನೆ. ಈಗಾಗಲೇ ಸಚಿವರು ನೆರೆ ಪೀಡಿತ ಪ್ರದೇಶಗಳ ಪ್ರವಾಸದಲ್ಲಿದ್ದಾರೆ ಎಂದು ಹೇಳಿದರು. ಪ್ರವಾಹದಲ್ಲಿ ಮನೆ ಕಳೆದುಕೊಂಡವರಿಗೆ ಮನೆ ನಿರ್ಮಿಸಿ ಕೊಡಲಾಗುವುದು, ಜೊತೆಗೆ ಪರಿಹಾರ ಕೂಡ ನೀಡಲಾಗುವುದು. ಎಸ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಪರಿಹಾರ ವಿತರಣೆ ಮಾಡಲಾಗುವುದು ಎಂದರು.



## ಜಯ ಕರ್ನಾಟಕ ಮೈಸೂರು ಜಿಲ್ಲಾಧ್ಯಕ್ಷರಾಗಿ ಲಾರಿ ಶ್ರೀನಿವಾಸ್ ನೇಮಕ

ಮೈಸೂರು, ಆ.2–ಜಯ ಕರ್ನಾಟಕ ಮೈಸೂರು ಜಿಲ್ಲಾ ಅಧ್ಯಕ್ಷರಾಗಿ ಲಾರಿ ಶ್ರೀನಿವಾಸ್ ಅವರನ್ನು ನೇಮಕ ಮಾಡಲಾಗಿದೆ ಎಂದು ಜಯ ಕರ್ನಾಟಕ ರಾಜ್ಯ ಸಂಘಟನಾ ಕಾರ್ಯದರ್ಶಿ ವಿಜಯಗೌಡ ತಿಳಿಸಿದ್ದಾರೆ.


# ದೇವಾಲಯದಲ್ಲಿ ಲಕ್ಷಾಂತರ ರೂ. ಚಿನ್ನಾಭರಣ, ಕಾಣಿಕೆ ಕಳವು

## ದೇವಿಯ ತಾಳಿಯಯನ್ನೂ ಬಿಡದ ಖದೀಮರು

ಮೈಸೂರು, ಆ.2(ಎಸ್‌ಬಿಡಿ)– ದೇವಿಗೆ ಧರಿಸಿದ್ದ ಚಿನ್ನದ ತಾಳಿ ಸೇರಿದಂತೆ ದೇವಾಲಯದಲ್ಲಿದ್ದ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ, ಕಾಣಿಕೆ ಹುಂಡಿ ಇನ್ನಿತರ ವಸ್ತುಗಳನ್ನು ಕಳ್ಳತನ ಮಾಡಿರುವ ಘಟನೆ ಮೈಸೂರು ತಾಲೂಕು ಮರಿಗೌಡನಹುಂಡಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಶ್ರೀ ಲಕ್ಷ್ಮೀದೇವಿ ದೇವಸ್ಥಾನದ ಬೀಗ ಒಡೆದು ಒಳ ನುಗ್ಗಿರುವ ಖದೀಮರು, ಗರ್ಭಗುಡಿಯಲ್ಲಿದ್ದ ಕಾಣಿಕೆ ಹುಂಡಿ, ದೇವಿಗೆ ಧರಿಸಿದ್ದ 15 ಗ್ರಾಂ ಚಿನ್ನದ ಸರ ಹಾಗೂ 10 ಮತ್ತು 5 ಗ್ರಾಂ ತೂಕದ ಎರಡು ತಾಳಿ, ಮೂರು ಪೆಟ್ಟಿಗೆಗಳಲ್ಲಿದ್ದ ಮೂಲ ಲಕ್ಷ್ಮೀ ದೇವಿಯ ವಿಗ್ರಹ ಸೇರಿದಂತೆ ಸುಮಾರು 19 ಕೆಜಿ ತೂಕದ ವಿವಿಧ ಕಂಚಿನ ವಿಗ್ರಹಗಳು, ಲಕ್ಷ್ಮೀ ದೇವಿಯ ಮುಖವಾಡ 2 ಕೊಳಗ, ಸರ ಸೇರಿದಂತೆ ಸುಮಾರು 6 ಕೆಜಿ ಬೆಳ್ಳಿ ವಸ್ತುಗಳನ್ನು ದೋಚಿದ್ದಾರೆ.

ಅರ್ಚಕರಾದ ಕೋಡಿ ನಾರಾಯಣಸ್ವಾಮಿ ಅವರು ಬುಧವಾರ ಸಂಜೆ 7.30ಕ್ಕೆ ಪೂಜೆ ಮುಗಿಸಿ, ದೇವಾಲಯಕ್ಕೆ ಬೀಗ ಹಾಕಿಕೊಂಡು ಸ್ವಗ್ರಾಮ ಸಜ್ಜೇಹುಂಡಿಗೆ ತೆರಳಿದ್ದಾರೆ. ಎಂದಿನಂತೆ ಗುರುವಾರ ಬೆಳಗ್ಗೆ 6 ಗಂಟೆಗೆ ದೇವಸ್ಥಾನಕ್ಕೆ ಬಂದಾಗ ಬೀಗ ಒಡೆದಿದ್ದಲ್ಲದೆ ಬಾಗಿಲು ತೆರೆದ ಸ್ಥಿತಿಯಲ್ಲಿತ್ತು. ಒಳಹೋಗಿ ನೋಡಿದಾಗ ಗರ್ಭಗುಡಿಯಲ್ಲಿದ್ದ ಕಾಣಿಕೆ ಹುಂಡಿ, ದೇವಿಯ ಕೊರಳಲ್ಲಿದ್ದ ಚಿನ್ನಾಭರಣ ಹಾಗೂ ಮೂರು ಪೆಟ್ಟಿಗೆಯಲ್ಲಿದ್ದ ಬೆಳ್ಳಿ ಹಾಗೂ ಕಂಚಿನ ವಸ್ತುಗಳೂ ಕಳ್ಳತನವಾಗಿರುವುದು ಗೊತ್ತಾಗಿದೆ. ಈ ಸಂಬಂಧ ವರುಣಾ ಪೊಲೀಸ್ ಠಾಣೆಗೆ ದೂರು ನೀಡಿರುವ ಅರ್ಚಕರು, ಸುಮಾರು 2.10 ಲಕ್ಷ ರೂ. ಮೌಲ್ಯದ ಚಿನ್ನಾಭರಣ, ಸುಮಾರು 4.20 ಲಕ್ಷ ರೂ. ಮೌಲ್ಯದ ಬೆಳ್ಳಿ ವಸ್ತುಗಳು ಹಾಗೂ 28 ಸಾವಿರ ರೂ. ಮೌಲ್ಯದ ಕಂಚಿನ ವಿಗ್ರಹಗಳು ಹಾಗೂ ಸುಮಾರು 40 ಸಾವಿರ ರೂ. ಇರಬಹುದಾದ ಹುಂಡಿ ಸೇರಿ ಒಟ್ಟು 6.98 ಲಕ್ಷ ರೂ. ಮೌಲ್ಯದ ವಸ್ತುಗಳು ಕಳುವಾಗಿದೆ ಎಂದು ವಿವರಿಸಿದ್ದಾರೆ. ದೂರಿನನ್ವಯ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ತನಿಖೆ ಕೈಗೊಂಡಿದ್ದಾರೆ.

## ನಿಧನ



### ಮಹದೇವು

ಮೈಸೂರು, ಆ.2– ಮೈಸೂರು ತಾಲೂಕು ಹಂಚ್ಯಾ ಗ್ರಾಮ ಪಂಚಾಯ್ತಿ ಮಾಜಿ ಸದಸ್ಯ ಹಾಗೂ ಹಂಚ್ಯಾ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಎಂ.ಮಹದೇವು(59) ಅವರು ಶುಕ್ರವಾರ ನಿಧನರಾದರು. ಇವರು ಪತ್ನಿ ವೀಣಾ, ಪುತ್ರರಾದ ಸುಮನ್, ಶರತ್ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಹಂಚ್ಯಾ ಗ್ರಾಮದ ಅವರ ತೋಟದಲ್ಲಿ ಅಂತ್ಯಕ್ರಿಯೆ ನೆರವೇರಿಸಿದ್ದಾಗಿ ಕುಟುಂಬದ ಮೂಲಗಳು ತಿಳಿಸಿವೆ.

ಐದನೇ ಪುಟದಿಂದ

# ಶೋಕಾಸ್ ನೋಟಿಸ್‌ಗೆ ಹೆದರಲ್ಲ

ಮುಡಾ ಹಗರಣ ದಲ್ಲಿ ನನ್ನ ಯಾವುದೇ ಪಾತ್ರವಿಲ್ಲ, ನಾನು ಯಾವುದೇ ರೀತಿಯ ಅಪರಾಧ ಮಾಡಿಲ್ಲ. ನಾನೇಕೆ ಹೆದರಿಕೊಳ್ಳಬೇಕು. ಇದನ್ನೆಲ್ಲಾ ನಾನು ಸಮರ್ಥವಾಗಿ ಎದುರಿಸುತ್ತೇನೆ ಎಂದು ಪುನರುಚ್ಚರಿಸಿದರು.

ರಾಜ್ಯಪಾಲರು ನೀಡಿರುವ ಶೋಕಾಸ್ ನೋಟಿಸ್‌ಗೆ ನಾನು ಹೆದರಿದ್ದೇನೆ ಎಂದೇಳುವ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೆದರಿರಬೇಕು ಅಷ್ಟೇ ಎಂದು ಸಿದ್ದರಾಮಯ್ಯ ತಿರುಗೇಟು ನೀಡಿದರು. ಟಿ.ಜೆ.ಅಬ್ರಾಹಾಂ ಜುಲೈ 26 ರಂದು ಬೆಳಿಗ್ಗೆ 11.30 ಗಂಟೆಗೆ ನನ್ನ ವಿರುದ್ಧ ರಾಜ್ಯಪಾಲರಿಗೆ ದೂರು ನೀಡುತ್ತಾರೆ. ರಾಜ್ಯಪಾಲರು ಆ ದೂರನ್ನು ಕೂಲಂಕುಶವಾಗಿ ಪರಿಶೀಲನೆ ಕೂಡ ಮಾಡುವುದಿಲ್ಲ. ಮುಡಾ ಹಗರಣ ಸಂಬಂಧ ಸರ್ಕಾರದ ಮುಖ್ಯ ಕಾರ್ಯದರ್ಶಿ ಸಮಗ್ರ ವರದಿ ನೀಡುತ್ತಾರೆ. ಅದನ್ನು ಕೂಡ ನೋಡುವುದಿಲ್ಲ. ಕಾನೂನಾತ್ಮಕವಾದ ವಿಚಾರವನ್ನು ಪರಿಶೀಲನೆ ಮಾಡದೆ ಆತುರಾತುರವಾಗಿ ಶೋಕಾಸ್ ನೋಟಿಸ್ ಜಾರಿ ಮಾಡಿದ್ದಾರೆ ಎಂದು ಆರೋಪಿಸಿದರು. ಟಿ.ಜೆ.ಅಬ್ರಹಾಂ ದೂರು ನೀಡಿದ ದಿನ ರಾತ್ರಿ 10 ಗಂಟೆಗೆ ರಾಜ್ಯಪಾಲರ ವಿಶೇಷ ಅಧಿಕಾರಿ ಪ್ರಭುಶಂಕರ್ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್ ಅವರಿಗೆ ದೂರವಾಣಿ ಕರೆ ಮಾಡಿ ಶೋಕಾಸ್ ನೋಟಿಸ್ ಪಡೆಯುವಂತೆ ಹೇಳುತ್ತಾರೆ. ರಾತ್ರಿ ನೋಟಿಸ್ ಪಡೆಯಲು ಸಾಧ್ಯವಿಲ್ಲ ಎಂದಾಗ ಜುಲೈ 27 ರಂದು ಮಧ್ಯಾಹ್ನ 2 ಗಂಟೆಗೆ ಶೋಕಾಸ್ ನೋಟಿಸ್ ನೀಡುತ್ತಾರೆ. ಕಾನೂನಾತ್ಮಕ ಅಂಶಗಳ ಬಗ್ಗೆ ಯಾವುದೇ ರೀತಿಯಲ್ಲೂ ಪರಿಶೀಲನೆ ಮಾಡದೆ ಇಷ್ಟು ಆತುರವಾಗಿ ನೋಟಿಸ್ ನೀಡುವ ಪ್ರಮೇಯವೇನಿತ್ತು ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

ರಾಜ್ಯದ 136 ಶಾಸಕರು ನನ್ನನ್ನು ಆಯ್ಕೆ ಮಾಡಿದ್ದಾರೆ. ನಾನು ಚುನಾಯಿತ ಸರ್ಕಾರದ ಮುಖ್ಯಮಂತ್ರಿಯಾಗಿದ್ದೇನೆ. ಹೀಗಿರುವಾಗ ಒಬ್ಬ ಮುಖ್ಯಮಂತ್ರಿಗೆ ನೋಟಿಸ್ ಜಾರಿ ಮಾಡುವಾಗ ರಾಜ್ಯಪಾಲರು ಕಾನೂನಾತ್ಮಕ ಅಂಶಗಳ ಬಗ್ಗೆ ಪರಿಶೀಲನೆ ಮಾಡಬೇಕಿತ್ತಲ್ಲವೆ ಎಂದು ಕೇಳಿದರು. ಜನಾರ್ಧನ ರೆಡ್ಡಿ, ಮುರುಗೇಶ್ ನಿರಾಣಿ, ಜೊಲ್ಲೆ ವಿರುದ್ಧ ಕೂಡ ಹಲವು ದಿನಗಳ ಹಿಂದೆಯೇ ದೂರು ನೀಡಲಾಗಿದೆ. ಈ ತನಕ ಅವರಿಗೆ ಶೋಕಾಸ್ ನೋಟಿಸ್ ನೀಡಿಲ್ಲವೇಕೆ ಎಂದು ಮರು ಪ್ರಶ್ನಿಸಿದರು. ಈ ಹಿನ್ನೆಲೆಯಲ್ಲಿ ನಿನ್ನೆ ಡಿ.ಕೆ.ಶಿವಕುಮಾರ್ ಸಚಿವ ಸಂಪುಟ ಸಭೆ ನಡೆಸಿ, ಶೋಕಾಸ್ ನೋಟಿಸ್ ಬಗ್ಗೆ ಸುದೀರ್ಘವಾಗಿ ಚರ್ಚಿಸಿದ್ದಾರೆ. ರಾಜ್ಯಪಾಲರು ನೀಡಿರುವ ಶೋಕಾಸ್ ನೋಟಿಸ್ ಕಾನೂನು ಬಾಹಿರವಾದ ಕಾರಣ ವಾಪಾಸು ಪಡೆಯಬೇಕು ಎಂದು ಸಚಿವ ಸಂಪುಟದಲ್ಲಿ ನಿರ್ಣಯ ತೆಗೆದುಕೊಳ್ಳಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

### ಈಗ ಪ್ರವಾಹ ಹೋಗಿದೆಯಾ ಕುಮಾರಸ್ವಾಮಿ ಅವರೆ...!

ಪ್ರವಾಹ ಇರುವ ಕಾರಣಕ್ಕೆ ಪಾದಯಾತ್ರೆ ಬೇಡವೆಂದು ಹೇಳಿದ್ದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಈಗ ಪಾದಯಾತ್ರೆ ಮಾಡುತ್ತೇವೆ ಎನ್ನುತ್ತಿದ್ದಾರೆ. ಹಾಗಾದರೆ ಈಗ ಪ್ರವಾಹ ಹೋಗಿದೆಯಾ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಮುಡಾ ಹಗರಣದಲ್ಲಿ ಸ್ಪಷ್ಟತೆ ಇಲ್ಲ, ಪಾದಯಾತ್ರೆ ಬೇಡ ಎಂದು ಹೇಳಿದ್ದರು. ಆದರೆ ಈಗ ಅವರೇ ಪಾದಯಾತ್ರೆ ಮಾಡುವುದಾಗಿ ಹೇಳುತ್ತಿದ್ದಾರೆ. ಇದನ್ನು ಕುಮಾರಸ್ವಾಮಿ ಸ್ವಇಚ್ಛೆಯಿಂದ ಮಾಡುತ್ತಿಲ್ಲ ಎಂದು ಹೇಳಿದರು. ಭಾರೀ ಮಳೆಯ ಕಾರಣ ಪ್ರವಾಹ ಬಂದಿದೆ. ಜನರು ಕಷ್ಟದಲ್ಲಿದ್ದಾರೆ. ಮೊದಲು ಅತ್ತ ಗಮನ ನೀಡಬೇಕು ಎಂದು ಹೇಳಿದ್ದರು.

### ಶೋಕಾಸ್ ನೋಟಿಸ್ ಹಿಂಪಡೆಯಲು ರಾಜ್ಯಪಾಲರಲ್ಲಿ ಮನವಿ:ಸಿಎಂ

ಮುಡಾ ಹಗರಣ ವಿಷಯಕ್ಕೆ ಸಂಬಂಧಿಸಿದ ಶೋಕಾಸ್ ನೋಟಿಸ್ ಹಿಂಪಡೆಯುವಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಮಾಡಲು ಸಚಿವ ಸಂಪುಟ ಸಭೆ ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು, ಮುಖ್ಯಮಂತ್ರಿಗೆ ನೀಡಿರುವ ಶೋಕಾಸ್ ನೋಟಿಸ್ ಹಿಂಪಡೆಯಬೇಕು ಹಾಗೂ ಟಿ.ಜೆ.ಅಬ್ರಹಾಂ ಸಲ್ಲಿಸಿರುವ ಅರ್ಜಿ ತಿರಸ್ಕರಿಸಲು ರಾಜ್ಯಪಾಲರಿಗೆ ಸಲಹೆ ನೀಡಲು ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಹೇಳಿದರು.

# ರಾಜ್ಯದ 20,668 ಚ.ಕಿ.ಮೀ ಸೇರಿ ಪಶ್ಚಿಮ ಘಟ್ಟದ 57,000 ಚದುರ ಕಿ.ಮೀ. ಪರಿಸರ ಸೂಕ್ಷ್ಮ ಪ್ರದೇಶ

## ಕೇಂದ್ರದಿಂದ ಕರಡು ಅಧಿಸೂಚನೆ



ನವದೆಹಲಿ, ಆ.2–ಕೇರಳದ ವಯನಾಡು ಭೂಕುಸಿತ ಬಳಿಕ ಎಚ್ಚೆತ್ತುಕೊಂಡಿರುವ ಕೇಂದ್ರ ಸರಕಾರ ಕರ್ನಾಟಕದ 20,668 ಚದುರ ಕಿ.ಮೀ. ಸೇರಿದಂತೆ ಪಶ್ಚಿಮ ಘಟ್ಟದ 57 ಸಾವಿರ ಚದರ ಕಿಮೀ ಪ್ರದೇಶವನ್ನು ಪರಿಸರ ಸೂಕ್ಷ್ಮ ವಲಯ ಎಂದು ಘೋಷಿಸಿದೆ.

ಜುಲೈ 31 ರಂದು ಈ ಸಂಬಂಧ ಕೇಂದ್ರ ಸರಕಾರ ಕರಡು ಅಧಿಸೂಚನೆ ಹೊರಡಿಸಿದ್ದು, ಇದು ಕಳೆದ ಒಂದು ದಶಕದಲ್ಲಿ ಹೊರಡಿಸಲಾಗುತ್ತಿರುವ 6ನೇ ಕರಡು ಅಧಿಸೂಚನೆಂಯಾಗಿದೆ. ಇದರಲ್ಲಿ ಪಶ್ಚಿಮಘಟ್ಟದ ಶೇ. 36ರಷ್ಟು ಪ್ರದೇಶ ಪರಿಸರ ಸೂಕ್ಷ್ಮ ವಲಯ ಎಂದು ಘೋಷಣೆ ಮಾಡಿದೆ. ಭೂ ಕುಸಿತ ಸಂಭವಿಸಿರುವ ಕೇರಳದ ವಯನಾಡು ಜಿಲ್ಲೆಯ 13 ಹಳ್ಳಿಗಳನ್ನು ಒಳಗೊಂಡಂತೆ ರಾಜ್ಯ ವ್ಯಾಪ್ತಿಯ 10 ಸಾವಿರ ಚದರ ಕಿಮೀ ಪಶ್ಚಿಮಘಟ್ಟ ಪ್ರದೇಶ ಪರಿಸರ ಸೂಕ್ಷ್ಮ ವಲಯದಲ್ಲಿದೆ ಎಂದು ಕರಡು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಕರಡು ಅಧಿಸೂಚನೆ ಸಂಬಂಧ ನಾಗರಿಕರು 60 ದಿನದೊಳಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿರುವ ಕೇಂದ್ರ ಸರಕಾರ, ಜನರ ಅಭಿಪ್ರಾಯ ಆಲಿಸಿದ ಬಳಿಕ ಅಂತಿಮ ಅಧಿಸೂಚನೆ ಪ್ರಕಟಿಸುವುದಾಗಿ ಹೇಳಿದೆ. ಕರಡು ವರದಿ ಪ್ರಕಾರ ಮಹಾರಾಷ್ಟ್ರ, ಕರ್ನಾಟಕ, ಕೇರಳ, ತಮಿಳುನಾಡು, ಗೋವಾ, ಗುಜರಾತ್ ರಾಜ್ಯ ವ್ಯಾಪ್ತಿಯ 56,826 ಚದರ ಕಿ.ಮೀ. ಪಶ್ಚಿಮ ಘಟ್ಟ ಪ್ರದೇಶ ಪರಿಸರ ಸೂಕ್ಷ್ಮ ವಲಂಯದಲ್ಲಿದೆ. ಪರಿಸರ ಸೂಕ್ಷ್ಮ ವಲಯದಲ್ಲಿ ಗಣಿಗಾರಿಕೆ, ಕಟ್ಟಡ ನಿರ್ಮಾಣ, ಶಾಖೋತ್ಪನ್ನ ವಿದ್ಯುತ್ ಘಟಕಗಳು, ನಿಷೇಧಿತ (ರೆಡ್ ಇಂಡಸ್ಟ್ರೀಸ್) ಕೈಗಾರಿಕೆಗಳ ಚಟುವಟಿಕೆಗೆ ನಿರ್ಬಂಧಿಸಲಾಗಿದೆ.

| | |
|---|---|
| ಕರ್ನಾಟಕ | –20,668 ಚದರ ಕಿ.ಮೀ. |
| ಮಹಾರಾಷ್ಟ್ರ | –17,340 ಚದರ ಕಿ.ಮೀ. |
| ಕೇರಳ | –9,993 ಚದರ ಕಿ.ಮೀ. |
| ತಮಿಳುನಾಡು | –6,914 ಚದರ ಕಿ.ಮೀ. |
| ಗೋವಾ | –1,461 ಚದರ ಕಿ.ಮೀ. |
| ಗುಜರಾತ್ | –449 ಚದರ ಕಿ.ಮೀ. |

ಅಂಕೋಲಾದ ಶಿರೂರು, ಶಿರಾಡಿ ಘಾಟ್ ಭೂಕುಸಿತ ಹಾಗೂ ಕೇರಳದ ವಯನಾಡಿನ ದುರ್ಘಟನೆ ಹಿನ್ನೆಲೆಯಲ್ಲಿ ರಾಜ್ಯದ ಪಶ್ಚಿಮಘಟ್ಟ ಪ್ರದೇಶದಲ್ಲಿ ಅನಧಿಕೃತ ರೆಸಾರ್ಟ್, ಹೋಂ ಸ್ಟೇ, ತೋಟ ತೆರವುಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ರಾಜ್ಯ ಸರಕಾರ ಸೂಚಿಸಿದೆ.

**ಪಶ್ಚಿಮ ಘಟ್ಟದಲ್ಲಿ 2015ರ ನಂತರದ ಅರಣ್ಯ ಒತ್ತುವರಿ ತೆರವಿಗೆ ಈಶ್ವರ ಖಂಡ್ರೆ ಸೂಚನೆ:** ಈ ಸಂಬಂಧ ಅರಣ್ಯ ಇಲಾಖೆ ಕ್ರಮಕ್ಕೆ ಮುಂದಾಗಿದ್ದು, 2015ರ ನಂತರದ ಅರಣ್ಯ ಒತ್ತುವರಿಗಳನ್ನು ನಿರ್ದಾಕ್ಷಿಣ್ಯವಾಗಿ ತೆರವು ಮಾಡುವಂತೆ ಸೂಚನೆ ನೀಡಲಾಗಿದೆ. ಜತೆಗೆ ಒಂದು ತಿಂಗಳ ಒಳಗೆ ಈ ಕ್ರಮ ಕೈಗೊಂಡ ಕುರಿತು ವರದಿ ನೀಡುವಂತೆಯೂ ಗಡುವು ವಿಧಿಸಲಾಗಿದೆ

ಈ ಬಗ್ಗೆ ಟಿಪ್ಪಣಿ ಮೂಲಕ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗೆ ಸೂಚಿಸಿರುವ ಅರಣ್ಯ ಸಚಿವ ಈಶ್ವರ ಖಂಡ್ರೆ, ಅರಣ್ಯ ಒತ್ತುವರಿಯನ್ನು ತಕ್ಷಣದಿಂದಲೇ ತೆರವುಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಹಾಗೂ ತೆಗೆದುಕೊಂಡ ಕ್ರಮ ಕುರಿತು ಒಂದು ತಿಂಗಳೊಳಗೆ ವಿವರಗಳೊಂದಿಗೆ ಕಡತದಲ್ಲಿ ವರದಿ ಸಲ್ಲಿಸಬೇಕು ಎಂದು ಸ್ಪಷ್ಟ ನಿರ್ದೇಶನ ನೀಡಿದ್ದಾರೆ.

## ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



**ಶ್ರೀಮತಿ ಚಿಕ್ಕತಾಯಮ್ಮ**

(ಲೇ|| ಚಿಕ್ಕಕಾಳೇಗೌಡರ ಧರ್ಮಪತ್ನಿ)

ಇವರು ದಿ: 24.07.2023 ಬುಧವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿ: 03.08.2023 ಶನಿವಾರ ಬೆಳಗ್ಗೆ 10.30ಕ್ಕೆ ಕುಂಬಾರಕೊಪ್ಪಲಿನ ರುದ್ರಭೂಮಿಯಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ದುಃಖತಪ್ತರು: ಶ್ರೀಮತಿ ಜಯಂತಿ ಮತ್ತು ಶ್ರೀ ಚೆಲುವೇಗೌಡರು ಹಾಗೂ ಲಕ್ಕಣ್ಣ ಮಾದೇಗೌಡರ ಕುಟುಂಬವರ್ಗದವರು.

ಭೋಜನ: ಮಧ್ಯಾಹ್ನ: 12 ಗಂಟೆಗೆ

ಸ್ಥಳ: ಶ್ರೀ ಮಹದೇಶ್ವರ ಸಮುದಾಯ ಭವನ, ಕುಂಬಾರಕೊಪ್ಪಲು, ಮೈಸೂರು

## 3ನೇ ವರ್ಷದ ಪುಣ್ಯಸ್ಮರಣೆ



ನಿಮ್ಮ ದಿವ್ಯಾತ್ಮಕ್ಕೆ ಚಿರಶಾಂತಿ ಕೋರಿ ಸದಾ ನಿಮ್ಮನ್ನು ಸ್ಮರಿಸುತ್ತಿರುವ

**ಎಂ.ಮಹದೇವು (ರಾಜು)**

ನಿಧನ: 3.8.2021

ದುಃಖತಪ್ತರು:- ಧರ್ಮಪತ್ನಿ ಜಯಮ್ಮ ಮತ್ತು ಮಕ್ಕಳು, ಕುಟುಂಬವರ್ಗ, 6ನೇ ಕ್ರಾಸ್, ಅಶೋಕಪುರಂ, ಮೈಸೂರು

## 1ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 1 ವರ್ಷ ಕಳೆದಿದೆ. ಭಗವಂತನು ನಿಮ್ಮ ಆತ್ಮಕ್ಕೆ ಚಿರ ಶಾಂತಿಯನ್ನು ನೀಡಲಿ ಹಾಗೂ ಸದಾ ನಿಮ್ಮ ನೆನಪಿನಲ್ಲಿರುವ ಶ್ರೀಮತಿ ಎಂ.ಎಸ್. ಜಯಮ್ಮ, ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು.

**ಹೆಚ್.ಎಂ.ಗೌಡೇಗೌಡ್ರು**

ಅಧ್ಯಕ್ಷರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನೌಕರರ ಸಂಘ

## 4ನೇ ವರ್ಷದ ಸವಿನೆನಪು



**ಶ್ರೀಮತಿ ಪುಟ್ಟತಾಯಮ್ಮ**

ದುಃಖತಪ್ತರು: ಸಿ.ಆರ್. ಶ್ರೀನಿವಾಸ ಮತ್ತು ಕುಟುಂಬವರ್ಗದವರು



## ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಶ್ರೀ. ರಾಮಚಂದ್ರ, ರವರ ಪತ್ನಿ ಶ್ರೀಮತಿ. ಎಚ್. ಎಂ. ಶೋಭ ರವರು, ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ ಬ್ಯಾಂಕ್ ಮತ್ತು ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 07 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ

ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕು, ಕುಶಾಲನಗರ ಹೋಬಳಿ, ಮಾದಾಪಟ್ಟಣ ಗ್ರಾಮದಲ್ಲಿರುವ ಸರ್ವೆ ನಂ. 18/1 ರ ವಿಸ್ತೀರ್ಣ 02 ಎಕರೆ, ಹೊಂದಿರುವ ಸ್ವತ್ತಿಗೆ ಚಕ್ಕುಬಂದಿ ಪೂರ್ವಕ್ಕೆ: ಬೈಚನಹಳ್ಳಿ ಗಡಿ ಮತ್ತು ಗ್ರಾಮ, ಪಶ್ಚಿಮಕ್ಕೆ: ಸರ್ವೆ ನಂ. 22 ರ ಜಮೀನು, ಉತ್ತರಕ್ಕೆ: ಸರ್ವೆ ನಂ. 18/2 ರ ಜಮೀನು ಮತ್ತು ದಕ್ಷಿಣಕ್ಕೆ: ಸರ್ವೆ ನಂ. 18/3 ರ ಜಮೀನು.

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು
ಎಸ್‌ಎಲ್‌ಡಿ ಲಾ ಫರ್ಮ್
ನಂ. 1458/ಎ, ನಾರಾಯಣಶಾಸ್ತ್ರಿ ರಸ್ತೆ,
ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು.
ಮೊ: 9844640641
email: sldlawfirm2021@gmail.com






## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಜಿಲ್ಲಾ ಕಾರ್ಯಕ್ರಮ ನಿರ್ವಹಣ ಘಟಕ ಚಾಮರಾಜನಗರ ಜಿಲ್ಲೆ, ಚಾಮರಾಜನಗರ.

#308, ಮೂರನೇ ಮಹಡಿ, ಜಿಲ್ಲಾಡಳಿತ ಭವನ, ಶ್ರೀ ಬಿ.ರಾಚಯ್ಯ ಜೋಡಿ ರಸ್ತೆ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ –571313

Email Id:rchochamarajanagar@gmail.com ದೂರವಾಣಿ ಸಂಖ್ಯೆ: 08226-355162

ಕ್ರಸಂ: ಜಿ.ಆ.ಕು.ಕ.ಸೋ/ಚಾ.ನ/12/2024–25 ದಿನಾಂಕ: 01/08/2024

### ಆಸಕ್ತ ವ್ಯಕ್ತಪಡಿಸುವುದು (EOI)

ತಾಯಿ ಆರೋಗ್ಯ, ಜೆ.ಎಸ್.ಎಸ್.ಕೆ ಕಾರ್ಯಕ್ರಮದಡಿಯಲ್ಲಿ ಗರ್ಭಿಣಿ ಮಹಿಳೆಯರಿಗೆ ಸ್ಕ್ಯಾನಿಂಗ್ ಸೌಲಭ್ಯ ನೀಡಲು ಆಸಕ್ತ ಸ್ಕ್ಯಾನಿಂಗ್ ಸೆಂಟರ್, ಸೊನಾಲಾಜಿಸ್ಟ್ / ರೇಡಿಯಾಲಜಿಸ್ಟ್ ರವರಿಂದ ಆಸಕ್ತ ವ್ಯಕ್ತಪಡಿಸಲು (EOI) ಆಹ್ವಾನಿಸಲಾಗಿದೆ.

**ಸನ್ನಿವೇಶ**–1 : ಈ ಆರೋಗ್ಯ ಸಂಸ್ಥೆಗಳಲ್ಲಿ ಸ್ಕ್ಯಾನಿಂಗ್ ಯಂತ್ರ ಲಭ್ಯವಿದ್ದು ಸೊನಾಲಾಜಿಸ್ಟ್ / ರೇಡಿಯಾಲಜಿಸ್ಟ್ ರವರಿಂದ ಸೇವೆ ನೀಡಲು ಆಸಕ್ತ ವ್ಯಕ್ತಪಡಿಸುವುದು (EOI) 1. ಸಾರ್ವಜನಿಕ ಆಸ್ಪತ್ರೆ ಕೊಳ್ಳೇಗಾಲ, 2. ಸಮುದಾಯ ಆರೋಗ್ಯ ಕೇಂದ್ರ ಸಂತೇಮರಳ್ಳಿ, 3. ಸಾರ್ವಜನಿಕ ಆಸ್ಪತ್ರೆ ಗುಂಡ್ಲುಪೇಟೆ.

**ಸನ್ನಿವೇಶ–2** : ಈ ಆರೋಗ್ಯ ಸಂಸ್ಥೆಗಳಲ್ಲಿ ಸ್ಕ್ಯಾನಿಂಗ್ ಯಂತ್ರ / ಸೊನಾಲಾಜಿಸ್ಟ್ / ರೇಡಿಯಾಲಜಿಸ್ಟ್ ಲಭ್ಯವಿರುವುದಿಲ್ಲ ಖಾಸಗಿ ಸ್ಕ್ಯಾನಿಂಗ್ ಸಂಸ್ಥೆಗಳು ಸೇವೆ ನೀಡಲು ಆಸಕ್ತ ವ್ಯಕ್ತಪಡಿಸುವುದು (EOI) 1. ಸಾರ್ವಜನಿಕ ಆಸ್ಪತ್ರೆ ಯಳಂದೂರು, 2. ಸಮುದಾಯ ಆರೋಗ್ಯ ಕೇಂದ್ರ ಕಬ್ಬಳ್ಳಿ, 3. ಸಮುದಾಯ ಆರೋಗ್ಯ ಕೇಂದ್ರ ಬೇಗೂರು .

ಸೂಚನೆ:– ಆಸಕ್ತರು ಮೇಲ್ಕಂಡ ಕಛೇರಿಗೆ ದಿನಾಂಕ:– 17/08/2024 ರ ಒಳಗೆ ಕಛೇರಿಯ ವೇಳೆಯಲ್ಲಿ ಭೇಟಿ ನೀಡಿ ನಿಗದಿತ ನಮೂನೆಯನ್ನು ಪಡೆದು ಆಸಕ್ತ ವ್ಯಕ್ತಪಡಿಸಬಹುದಾಗಿರುತ್ತದೆ. **(EXPRESSION OF INTEREST)**

ಸಹಿ/– ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಚಾಮರಾಜನಗರ ಜಿಲ್ಲೆ, ಚಾಮರಾಜನಗರ.

ಸಂ : ವಾಸಾಸಂಇ : ಚಾನಗರ : 152 : 2024–25

# ನಾಳೆ ಕೃತಿ ಬಿಡುಗಡೆ

ಮೈಸೂರು, ಆ.2(ಜಿಎ)– ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಆ.4ರಂದು ಸಂಜೆ 4ಗಂಟೆಗೆ ಎಸ್.ಚಿಕ್ಕಸಾವಕ ಅವರು ರಚಿಸಿರುವ 'ಸಂವಿಧಾನ ಸಭೆ ವರ್ಸಸ್ ಅಂಬೇಡ್ಕರ್'(ಕ್ರಾಂತಿಕಾರಿ ಸಂಶೋಧನೆ) ನಾಲ್ಕು ಸಂಪುಟಗಳ ಲೋಕಾರ್ಪಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಹೋರಾಟಗಾರ ದೇವನೂರ ಪುಟ್ಟನಂಜಯ್ಯ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಹಿತಿ ಪ್ರೊ.ಕೆ.ಎಸ್. ಭಗವಾನ್ ಕೃತಿ ಬಿಡುಗಡೆ ಮಾಡುವರು. ಕೃತಿ ಕುರಿತು ಪತ್ರಕರ್ತ ಬಿ.ಆರ್. ರಂಗಸ್ವಾಮಿ ಮತ್ತು ಹಿರಿಯ ರಂಗಕರ್ಮಿ ಸಿ. ಬಸವಲಿಂಗಯ್ಯ ಕೃತಿ ಕುರಿತು ಮಾತನಾಡುವರು. ಹಿರಿಯ ಸಾಹಿತಿ ಹೊರೆಯಾಲ ದೊರೆಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮಾಜಿ ಮೇಯರ್ ಪುರುಷೋತ್ತಮ್, ಡಾ.ಆರ್. ಮೋಹನ್‌ರಾಜ್ ಆಗಮಿಸಲಿದ್ದಾರೆ ಎಂದು ತಿಳಿಸಿದರು.

## ಭಾವಪೂರ್ಣ ಶ್ರದ್ಧಾಂಜಲಿ



ನಮ್ಮ ಅಜ್ಜಿಯವರ ಅಂತ್ಯಕ್ರಿಯೆಯನ್ನು ಹುರ ಚನ್ನಪಟ್ಟಣದಲ್ಲಿ ನೆರವೇರಿಸಲಾಗುವುದು

ದುಃಖತಪ್ತರು: ಎಂ. ಸ್ವಾಮಿ ಮತ್ತು ಸಹೋದರರು, ಜೆ.ಪಿನಗರ, ಮೈಸೂರು 8749440023, ಅಮ್ಮ ಚಿಕ್ಕಮ್ಮ, ಮಾವ ಮಕ್ಕಳು ಮತ್ತು ಮೊಮ್ಮಕ್ಕಳು

**ಹನುಮಮ್ಮ (ಕೋಣೂರಮ್ಮ)**

ಜನನ: 1916, ಮರಣ; 03.08.2024

## ಕರ್ನಾಟಕ ಪೊಲೀಸ್ ಗೃಹ ನಿರ್ಮಾಣ ಸಹಕಾರ ಸಂಘ ನಿ.,

ಆಲನಹಳ್ಳಿ, ನೇತಾಜಿನಗರ, ಮೈಸೂರು
3ನೇ ಕ್ರಾಸ್, ಸಿ.ಎ. ಸೈಟ್, ಪೊಲೀಸ್ ಗೃಹ ನಿರ್ಮಾಣ ಸಹಕಾರ ಸಂಘದ ಬಡಾವಣೆ, ನೇತಾಜಿನಗರ, ಟಿ.ನರಸೀಪುರ ರಸ್ತೆ, ಮೈಸೂರು–28

### ಸರ್ವ ಸದಸ್ಯರ ಸಭೆಯ ಆಹ್ವಾನ ಪತ್ರಿಕೆ

ಕರ್ನಾಟಕ ಪೊಲೀಸ್ ಗೃಹ ನಿರ್ಮಾಣ ಸಹಕಾರ ಸಂಘ ನಿ., ನೇತಾಜಿನಗರ ಮೈಸೂರು ಈ ಸಂಘದ 2023–2024ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ದಿನಾಂಕ: 04–08–2024 ರಂದು ಭಾನುವಾರ ಬೆಳಿಗ್ಗೆ 11.00 ಘಂಟೆಗೆ ಸಂಘದ 4ನೇ ಹಂತದ ಬಡಾವಣೆಯ ಜಮೀನು ಸ್ಥಳದಲ್ಲಿ ದಾರಿಪುರ ಗ್ರಾಮ, ಹೆಚ್.ಡಿ. ಕೋಟೆ ರಸ್ತೆ, ಮೈಸೂರು ಜಾಗದಲ್ಲಿ ಏರ್ಪಡಿಸಲಾಗಿದೆ. ಆಹ್ವಾನವನ್ನು ಸದಸ್ಯರೆಲ್ಲರಿಗೂ ಅಂಚೆ ಮುಖಾಂತರ ಕಳುಹಿಸಲಾಗಿದೆ. ಆಹ್ವಾನ ಪತ್ರಿಕೆ ತಲುಪದೆ ಇರುವವರು ಇದನ್ನೇ ಆಹ್ವಾನ ಪತ್ರಿಕೆ ಎಂದು ಭಾವಿಸಿ ಸಭೆಗೆ ಹಾಜರಾಗಬೇಕೆಂದು ತಮ್ಮಲ್ಲಿ ಕೋರಿದೆ.

ಸೂಚನೆ: ಮಳೆಯ ಕಾರಣ ನಿಗಧಿತ ಸಮಯಕ್ಕೆ ಸಭೆಗೆ ಹಾಜರಾಗತಕ್ಕದ್ದು.

ಸಹಿ/– ಅಧ್ಯಕ್ಷರು

## ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

# ಮಳೆ ಹಾನಿ ಪ್ರದೇಶಕ್ಕೆ ಸಿಎಂ ಸಿದ್ದರಾಮಯ್ಯ ಭೇಟಿ

## ಶಾಶ್ವತ ಪರಿಹಾರಕ್ಕೆ ಪೈಸಾರಿ ನಿವಾಸಿಗಳ ಮನವಿ



ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮೂರೇಕ್ರೆ ಪೈಸಾರಿ ನಿವಾಸಿಗಳು ಶಾಶ್ವತ ಪರಿಹಾರ ಒದಗಿಸುವಂತೆ ಮನವಿ ಮಾಡಿದರು.

ಮಡಿಕೇರಿ, ಆ.2–ಮಳೆಯಿಂದ ಹಾನಿಗೀಡಾಗಿರುವ ಪೊನ್ನಂಪೇಟೆ ತಾಲೂಕಿನ ಶ್ರೀಮಂಗಲ ಮಂಚಳ್ಳಿ ರಸ್ತೆ ಕುಸಿತ ಪ್ರದೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಇದೇ ವೇಳೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ರಸ್ತೆ ಕುಸಿತಕ್ಕೆ ಕಾರಣ, ಸುರಕ್ಷತಾ ಕ್ರಮಗಳು ಹಾಗೂ ಕೈಗೊಳ್ಳಬೇಕಾಗಿರುವ ಕಾಮಗಾರಿಗಳ ಕುರಿತು ಮುಖ್ಯಮಂತ್ರಿಗಳಿಗೆ ವಿವರಿಸಿದರು.

ಈ ವೇಳೆ ಅಲ್ಲಿನ ಮೂರೇಕ್ರೆ ಪೈಸಾರಿ ನಿವಾಸಿಗಳು, ಮಳೆಗಾಲದಲ್ಲಿ ಉಕ್ಕಿ ಹರಿಯುವ ನದಿಯಿಂದ ಮತ್ತೊಂದು ಬದಿಯಲ್ಲಿ ವಾಸವಿರುವ 40ಕ್ಕೂ ಅಧಿಕ ಕುಟುಂಬಗಳು ಸಂಕಷ್ಟ ಎದುರಿಸುತ್ತಿದ್ದೇವೆ. ಈ ಹಿನ್ನೆಲೆಯಲ್ಲಿ ಶಾಶ್ವತ ಮೇಲ್ಸೇತುವೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಮುಖ್ಯಮಂತ್ರಿ, ಈ ಕುರಿತು ಅಧಿಕಾರಿಗಳ ಜೊತೆಯಲ್ಲಿ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳುವುದಾಗಿ ತಿಳಿಸಿದರು. ಬಳಿಕ ಕೆದಮುಳ್ಳೂರು ಗ್ರಾಮಕ್ಕೆ ತೆರಳಿದ ಸಿದ್ದರಾಮಯ್ಯ, ಭೂ ಕುಸಿತದಿಂದ ಕಾಂಕ್ರೀಟ್ ರಸ್ತೆ ಹಾನಿಗೀಡಾಗಿರುವುದನ್ನು ಪರಿಶೀಲನೆ ನಡೆಸಿದರು.

ಈ ಸಂದರ್ಭ ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಬೋಸರಾಜು, ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ.ಮಂತರ್‌ಗೌಡ ಹಾಗೂ ಕಂದಾಯ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೃತ ಬಾಲಕನ ತಾಯಿಗೆ ಸಿಎಂ ಸಾಂತ್ವನ

ಮಡಿಕೇರಿ, ಆ.2– ಕೇರಳದ ವಯನಾಡಿನ ಭೀಕರ ಭೂ ಕುಸಿತಕ್ಕೆ ಸಿಲುಕಿ ಮೃತಪಟ್ಟ ಸಿದ್ದಾಪುರದ ಬಾಲಕ ರೋಹಿತ್ ತಾಯಿ ಕವಿತಾಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ಮಾಡಿ ಸಾಂತ್ವನ ಹೇಳಿದರು.

ವಯನಾಡಿನಲ್ಲಿರುವ ತನ್ನ ಅಜ್ಜ ಮನೆಗೆ ಹೋಗಿದ್ದ ಸಂದರ್ಭ ಭೂ ಕುಸಿತದಲ್ಲಿ ವಿರಾಜಪೇಟೆ ತಾಲೂಕಿನ ಸಿದ್ದಾಪುರ ಗುಹ್ಯ ಗ್ರಾಮದ ಸರ್ಕಾರಿ ಶಾಲೆಯ 4ನೇ ತರಗತಿ ವಿದ್ಯಾರ್ಥಿ ರೋಹಿತ್ ಮೃತಪಟ್ಟಿದ್ದ. ಈ ಹಿನ್ನೆಲೆಯಲ್ಲಿ ಮೃತ ಬಾಲಕನ ತಾಯಿ ಕವಿತಾಗೆ ಕರೆ ಮಾಡಿದ ಸಿದ್ದರಾಮಯ್ಯ ಸಾಂತ್ವನ ಹೇಳಿದರು. ಈಗಾಗಲೇ ರಾಜ್ಯ ಸರ್ಕಾರದ ವತಿಯಿಂದ ಪರಿಹಾರ ಘೋಷಿಸಲಾಗಿದೆ. ಶೀಘ್ರ ಪರಿಹಾರ ವಿತರಿಸುವುದಾಗಿ ಭರವಸೆ ನೀಡಿದರು.

## ಮಾದಪಟ್ಟಣದ ಮನೆ ಹಾನಿ ವೀಕ್ಷಣೆ



ಮಾದಪಟ್ಟಣ ಗ್ರಾಮದಲ್ಲಿ ಮನೆ ಗೋಡೆ ಕುಸಿದ ಬಸವರಾಜುಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಧೈರ್ಯ ತುಂಬಿದರು.

ಕುಶಾಲನಗರ, ಆ.2–ಸಮೀಪದ ಗುಡ್ಡೆಹೊಸೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾದಪಟ್ಟಣ ಗ್ರಾಮದಲ್ಲಿ ಮಳೆಗೆ ಮನೆ ಗೋಡೆ ಕುಸಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾನಿ ಪ್ರದೇಶಕ್ಕೆ ಭೇಟಿ ನೀಡಿ, ವೀಕ್ಷಿಸಿದರು.

ಗ್ರಾಮದ ಬಸವರಾಜು ಅವರ ಮನೆಯ ಗೋಡೆ ಕುಸಿದು ತೀವ್ರ ಹಾನಿಯಾಗಿದ್ದು, ಮನೆ ಪರಿಶೀಲಿಸಿ ಕುಟುಂಬದವರಿಗೆ ಧೈರ್ಯ ತುಂಬಿದರು. ಮನೆ ನಿರ್ಮಾಣಕ್ಕೆ ಅಗತ್ಯ ನೆರವು ನೀಡಲಾಗುವುದು ಎಂದು ಸಿಎಂ ಭರವಸೆ ನೀಡಿದರು.

ಇದೇ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು, ಶಾಸಕರಾದ ಮಂತರ್‌ಗೌಡ, ಪೊನ್ನಣ್ಣ, ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ, ಪ್ರಮುಖರಾದ ವಿ.ಪಿ.ಶಶಿಧರ್, ಪ್ರವೋದ್ ಉತ್ತಪ್ಪ, ಯಾಕುಬ್, ಹಲವರು ಹಾಜರಿದ್ದರು.

## ಸಿಎನ್‌ಸಿಯಿಂದ ಕಕ್ಕಡ–18 ಆಚರಣೆ

ಮಡಿಕೇರಿ, ಆ.2–ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ 29ನೇ ವರ್ಷದ 'ಕಕ್ಕಡ–18' ಆಚರಣೆ ನಗರದ ಹೊರವಲಯದ ಕ್ಯಾಪಿಟಲ್ ವಿಲೇಜ್‌ನಲ್ಲಿ ಅರ್ಥ ಪೂರ್ಣವಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ವಿರಾಟ್ ಹಿಂದೂಸ್ಥಾನ್ ಸಂಗಮ್‌ನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಖ್ಯಾತ ಆರ್ಥಿಕ ತಜ್ಞ ಡಾ.ಸುಬ್ರಮಣಿಯನ್ ಸ್ವಾಮಿ ಅವರ ಆಪ್ತ ಜಗದೀಶ್ ಶೆಟ್ಟಿ ಮಾತನಾಡಿ, ಕೊಡವರ ಉಳಿವಿಗಾಗಿ ಸಿಎನ್‌ಸಿ ನಡೆಸುತ್ತಿರುವ 'ಕೊಡವ ಲ್ಯಾಂಡ್' ಪರವಾದ ಹೋರಾಟಕ್ಕೆ ಸರ್ವರೂ ಬೆಂಬಲ ನೀಡಬೇಕೆಂದು ಮನವಿ ಮಾಡಿದರು.

ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಮಾತನಾಡಿ, ಕೊಡವ ಲ್ಯಾಂಡ್ ಭೂ–ರಾಜಕೀಯ ಸ್ವಾಯತ್ತತೆಯ ಸ್ವಯಂ ಆಡಳಿತ ನೀಡಬೇಕು. ಕೊಡವರಿಗೆ ಎಸ್‌ಟಿ ಟ್ಯಾಗ್ ಘೋಷಿಸಬೇಕು. ಕೊಡವ ಬುಡಕಟ್ಟು ವಿಶಿಷ್ಟ ಸಾಂಸ್ಕೃತಿಕ ಪರಂಪರೆಯನ್ನು ಯುನೆಸ್ಕೋದ ಅಮೂರ್ತ ಸಾಂಸ್ಕೃತಿಕ ಪರಂಪರೆಯ ಪಟ್ಟಿಗೆ ಸೇರಿಸಬೇಕು. ಕೊಡವರು, ಅವರ ಪಾರಂಪರಿಕ ಭೂಮಿ, ಭಾಷೆ, ಪರಿಸರ, ಜಲಸಂಪನ್ಮೂಲ, ಜಾನಪದ ಪರಂಪರೆ, ರಾಜಕೀಯ ಅಸ್ಮಿತೆ ಮತ್ತು ಐತಿಹಾಸಿಕ ನಿರಂತರತೆ, ಸಾಂಪ್ರದಾಯಿಕ ಆವಾಸಸ್ಥಾನಗಳನ್ನು ಗುರುತಿಸಬೇಕು ಎಂಬ ಬೇಡಿಕೆ ಸೇರಿದಂತೆ ವಿವಿಧ ಹಕ್ಕೊತ್ತಾಯ ಮಂಡಿಸಿದರು.

ಸಭೆಯಲ್ಲಿ ಬೃಹತ್ ಭೂ ಪರಿವರ್ತನೆ ಮತ್ತು ಭೂ ವಿಲೇವಾರಿ ವಿರುದ್ಧ ಪ್ರತಿಜ್ಞಾವಿಧಿ ಸ್ವೀಕರಿಸಿ, ಸಿಎನ್‌ಸಿ ಬೇಡಿಕೆಗಳ ಪರ ನಿರ್ಣಯ ಕೈಗೊಳ್ಳಲಾಯಿತು. ಬಳಿಕ ಮೆರವಣಿಗೆ ಮೂಲಕ ತೆರಳಿ ಮಂದ್‌ಗೆ ಪ್ರದಕ್ಷಿಣೆ ಹಾಗೂ ಗದ್ದೆಯಲ್ಲಿ ಸಾಂಪ್ರದಾಯಿಕ ಭತ್ತದ ನಾಟಿ ಕಾರ್ಯ ಮಾಡಿ, ಮೂರು ಸುತ್ತು ಗುಂಡು ಹಾರಿಸಿ ಕಕ್ಕಡ–18ರ ಸಂಭ್ರಮಕ್ಕೆ ಚಾಲನೆ ನೀಡಲಾಯಿತು.



ಕಕ್ಕಡ–18 ಆಚರಣೆ ಅಂಗವಾಗಿ ಮಡಿಕೇರಿಯ ಹೊರ ವಲಯದಲ್ಲಿ ಭತ್ತದ ನಾಟಿ ಕಾರ್ಯ ಮಾಡಲಾಯಿತು.

ಈ ಸಂದರ್ಭ ಕಲಿಯಂಡ ಮೀನಾ ಪ್ರಕಾಶ್, ಬೊಪ್ಪಂಡ ಬೊಳ್ಳಮ್ಮ ನಾಣಯ್ಯ, ಪಟ್ಟಮಾಡ ಲಲಿತಾ ಗಣಪತಿ, ನಂದೇಟಿರ ಕವಿತಾ, ಬೊಟ್ಟಂಗಡ ಸವಿತ, ಚೋಳಪಂಡ ಜ್ಯೋತಿ ನಾಣಯ್ಯ, ಅರೆಯಡ ಸವಿತಾ, ಲೆಫ್ಟಿನೆಂಟ್ ಕರ್ನಲ್ ಬಿ.ಎಂ. ಪಾರ್ವತಿ, ನಂದಿನೆರವಂಡ ನಿಶ, ನಂದಿನೆರವಂಡ ಬೀನ ಅಯ್ಯಣ್ಣ, ಮುದ್ದಿಯಡ ಲೀಲಾವತಿ, ಸೊಮೇಯಂಡ ರೇಷ್ಮ ತಿಮ್ಮಯ್ಯ, ಕುಞವಾಡ ಕಾವೇರಪ್ಪ, ತಡಿಯಂಗಡ ನಿತೇಶ್ ಸೋಮಯ್ಯ, ವಿಜೇಂದ್ರ ಶೆಟ್ಟಿ, ಬಾಚಿರ ಚಿಣ್ಣಪ್ಪ, ಪೊಯೆಟ್ಟಿರ ನಂದ ಉಪಸ್ಥಿತರಿದ್ದರು.

## ಹೆದ್ದಾರಿ ಬದಿಗೆ ಮಗುಚಿ ಬಿದ್ದ ಬಸ್

ಸುಂಟಿಕೊಪ್ಪ, ಆ.2–ಜೀಪ್ ಹಾಗೂ ಸಾರಿಗೆ ಸಂಸ್ಥೆಯ ಪವರ್ ಪ್ಲಸ್ ಬಸ್ ನಡುವೆ ಡಿಕ್ಕಿಯಾಗಿ ಬಸ್ ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿ ಮಗುಚಿಕೊಂಡ ಘಟನೆ ಕೊಡಗರಹಳ್ಳಿ ಬಳಿ ಶುಕ್ರವಾರ ನಡೆದಿದೆ. ಬಸ್‌ನಲ್ಲಿದ್ದ ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಅಪಾಯದಿಂದ ಪಾರಾಗಿದ್ದಾರೆ. ಮಡಿಕೇರಿಯಿಂದ ಬೆಂಗಳೂರು ಕಡೆಗೆ ಬಸ್ ತೆರಳುತ್ತಿದ್ದು, ಇದೇ ವೇಳೆ ಕುಶಾಲನಗದಿಂದ ಸುಂಟಿಕೊಪ್ಪ ಕಡೆಗೆ ಬರುತ್ತಿದ್ದ ಜೀಪ್ ಮತ್ತೊಂದು ವಾಹನವನ್ನು ಹಿಂದಿಕ್ಕಿಕೊಂಡು ಬರುತ್ತಿದ್ದ ವೇಳೆ ಎದುರುಗಡೆಯಿಂದ ಬರುತ್ತಿದ್ದ ಪವರ್ ಪ್ಲಸ್ ಬಸ್‌ಗೆ ಡಿಕ್ಕಿ ಹೊಡೆದಿದೆ.

ಬಸ್ ಚಾಲಕ ಭಾರಿ ಅವಘಡ ತಪ್ಪಿಸುವ ಸಲುವಾಗಿ ಬಸ್ ಅನ್ನು ನಿಯಂತ್ರಿಸಲು ಪಯತ್ನಿಸುತ್ತಿದ್ದ ಸಂದರ್ಭ ಬಸ್ ಹೆದ್ದಾರಿ ಬದಿಯಲ್ಲಿ ಮಗುಚಿಕೊಂಡಿದೆ. ಸ್ಥಳಕ್ಕೆ ಸುಂಟಿಕೊಪ್ಪ ಪೊಲೀಸ್ ಠಾಣಾಧಿಕಾರಿ ಎಂ.ಸಿ.ಶ್ರೀಧರ್ ಹಾಗೂ ಸಿಬ್ಬಂದಿ ತೆರಳಿ ಪರಿಶೀಲಿಸಿದರು.

## ಕಾಡಾನೆಗಳ ದಾಳಿ, ಫಸಲು ನಾಶ



ಕಬ್ಬಿನ ಗದ್ದೆಗೆ ನುಗ್ಗಿ ಫಸಲು ನಾಶಪಡಿಸುತ್ತಿರುವ ಕಾಡಾನೆಗಳು.

ಭಾರತೀನಗರ,ಆ.2– ಇಲ್ಲಿಗೆ ಸಮೀಪದ ಕಾರ್ಕಹಳ್ಳಿ ಗ್ರಾಮದ ಹೊರ ವಲಯದ ಗದ್ದೆಗಳಿಗೆ ಎರಡು ಕಾಡಾನೆಗಳು ಲಗ್ಗೆ ಇಟ್ಟು, ಒಂದು ಎಕರೆಗೂ ಹೆಚ್ಚು ಕಬ್ಬಿನ ಫಸಲನ್ನು ನಾಶಪಡಿಸಿವೆ.

ಕಾರ್ಕಹಳ್ಳಿ ಗ್ರಾಮದ ನಾಗರಾಜು ಬಿನ್ ಸಿದ್ದೇಗೌಡ ಉ॥ಸಣ್ಣೇಗೌಡ ಎಂಬುವರ ಕಬ್ಬಿನ ಗದ್ದೆಯಲ್ಲಿ ಕಳೆದ ಗುರುವಾರ ಸಂಜೆ ಕಾಡಾನೆಗಳು ಕಬ್ಬಿನ ಫಸಲನ್ನು ನಾಶಪಡಿಸುತ್ತಿರುವುದನ್ನು ರೈತರು ಗಮನಿಸಿ, ಅರಣ್ಯ ಇಲಾಖೆ ಅಧಿಕಾರಿಗಳಿಗೆ ತಿಳಿಸಿದ್ದಾರೆ.

ಆನೆಗಳನ್ನು ಕಂಡು ಗ್ರಾಮಸ್ಥರು ಆತಂಕಗೊಂಡಿದ್ದಾರೆ. ಕಾರ್ಕಹಳ್ಳಿ ಗ್ರಾಮದ ರೈತರು ತಮ್ಮ ಜಮೀನುಗಳಲ್ಲಿ ಕಬ್ಬನ್ನು ಬೆಳೆದಿದ್ದು ಈ ಎರಡು ಕಾಡಾನೆಗಳು ಬೆಳೆಗಳನ್ನು ನಾಶಪಡಿಸುತ್ತಿದೆ. ಅರಣ್ಯ ಇಲಾಖೆಗೆ ಗ್ರಾಮಸ್ಥರು ದೂರು ನೀಡಿದ ಮೇರೆಗೆ ತಕ್ಷಣವೇ ಕಾರ್ಯ ಪ್ರವೃತ್ತರಾದ ಅರಣ್ಯ ಇಲಾಖೆಯ ಉಪ ವಲಯ ಅರಣ್ಯಾಧಿಕಾರಿ ರವಿ ಅವರ ನೇತೃತ್ವದ ತಂಡ ಸ್ಥಳಕ್ಕೆ ಆಗಮಿಸಿ ಕಾಡಿಗೆ ಆನೆಗಳನ್ನು ಕಾಡಿಗೆ ಓಡಿಸಲು ಆರಂಭಿಸಿದರು. ಅರಣ್ಯ ಇಲಾಖೆ ಅಧಿಕಾರಿ ಗವಿಯಪ್ಪ, ಡಿಆರ್‌ಎಫ್ ಮುರುಳಿ, ಕಾಂತರಾಜು, ಅರಣ್ಯ ರಕ್ಷಕರಾದ ಸುದರ್ಶನ್, ಚಿನ್ನಪ್ಪ, ಹೂಣಸೂರು ಆನೆ ಕಾರ್ಯಪಡೆ ಸಿಬ್ಬಂದಿಗಳು, ಮಂಡ್ಯ ವಲಯದ ಸಿಬ್ಬಂದಿಗಳು, ಕೆ.ಎಂ.ದೊಡ್ಡಿ ಪೊಲೀಸರು ಈ ಕಾರ್ಯಾಚರಣೆಯಲ್ಲಿ ಪಾಲೊಂಡಿದ್ದರು. ಗದ್ದೆಯ ಮಧ್ಯಭಾಗದಲ್ಲಿ ಆನೆಗಳು ಇದ್ದ ಕಾರಣ ಆನೆಗಳನ್ನು ಓಡಿಸಲು ಹರಸಾಹಸ ಪಡಬೇಕಾಯಿತು. ಆನೆಗಳು ಗದ್ದೆಯಿಂದ ಹೊರಬಾರದ ಕಾರಣ ಮದ್ದುಗಳನ್ನು ಸಿಡಿಸುವ ಮೂಲಕ ಆನೆಗಳನ್ನು ಓಡಿಸಲು ಮುಂದಾದರು.

ರಾತ್ರಿ ವೇಳೆಗೆ ಕಾಡಾನೆಗಳನ್ನು ಕಾಡಿನತ್ತ ಓಡಿಸುವ ಪ್ರಯತ್ನ ನಡೆಯಿತ್ತಾದರೂ, ಕಾಡಾನೆಗಳು ಕಾಡಿನತ್ತ ತೆರಳದೆ ಮದ್ದೂರು ಮಳವಳ್ಳಿ ಮುಖ್ಯ ರಸ್ತೆಯ ಬಲಭಾಗದಲ್ಲಿರುವ ಬಿದರಹಳ್ಳಿ ಗ್ರಾಮದ ಬಯಲು ಪ್ರದೇಶಕ್ಕೆ ನುಗ್ಗಿದವು. ಹಗಲು ವೇಳೆಯಲ್ಲಿ ಆನೆಗಳನ್ನು ಕಾಡಿಗೆ ಓಡಿಸಲು ಯಾವುದೇ ಪ್ರಯತ್ನ ಮಾಡದೇ ರಾತ್ರಿಯ ವೇಳೆಗೆ ಕಾರ್ಯಾಚರಣೆ ನಡೆಸಲು ತೀರ್ಮಾನ ಕೈಗೊಂಡು ಅದರಂತೆ ರಾತ್ರಿ ಕಾಡಾನೆಗಳನ್ನು ಕಾಡಿನತ್ತ ಓಡಿಸುವ ಕಾರ್ಯಾಚರಣೆ ನಡೆಸಿದ್ದರು.

## ಉಕ್ಕಿ ಹರಿಯುತ್ತಿರುವ ಹೇಮಾವತಿ

### ಜಮೀನುಗಳಿಗೆ ನೀರು ನುಗ್ಗಿ ಅಪಾರ ಹಾನಿ, ದೇವಸ್ಥಾನ, ಕೊಟ್ಟಿಗೆಗೆ ನುಗ್ಗಿದ ನೀರು, ಜನಜೀವನ ಅಸ್ತವ್ಯಸ್ಥ



ಹೇಮಾವತಿ ಉಕ್ಕಿ ಹರಿಯುತ್ತಿರುವುದರಿಂದ ಜಲಾವೃತಗೊಂಡಿರುವ ಜಮೀನು

ಕಿಕ್ಕೇರಿ,ಆ.2– ಹೇಮಾವತಿ ನದಿ ನೀರು ಉಕ್ಕಿ ಹರಿಯುತ್ತಿದ್ದು ಅಪಾರ ಪ್ರಮಾಣದ ಬೆಳೆ ಹಾನಿ ಸಂಭವಿಸಿ ರೈತಾಪಿ ವರ್ಗ ಕಂಗಾಲಾಗಿದೆ.

ಹೇಮಾವತಿ ನದಿಯ ಹೊರಹರಿವು ಹೆಚ್ಚಾಗಿ ನದಿಪಾತ್ರದ ಜಮೀನುಗಳಿಗೆ ಅಪಾರ ಪ್ರಮಾಣದಲ್ಲಿ ನೀರು ನುಗ್ಗಿ ನೂರಾರು ಎಕರೆಯಲ್ಲಿದ್ದ ಬೆಳೆಗಳು ನಷ್ಟವಾಗಿದೆ. ಹೇಮೆ ಉಕ್ಕಿ ನೆರೆ ಬಂದಿರುವುದರಿಂದ ಮಂದಗೆರೆ, ಮಾದಾಪುರ, ಕಡಹೆಮ್ಮಿಗೆ ಹಾಗೂ ಸುತ್ತಮುತ್ತಲ ನದಿಪಾತ್ರದ ಜನತೆಗೆ ಆತಂಕ ಶುರುವಾಗಿದೆ. ನೆರೆ ಹಾವಳಿಗೆ ಕೃಷಿ ಭೂಮಿ ಮುಳುಗಿದೆ. ಕೃಷಿ ಭೂಮಿಯ ಫಲವತ್ತತೆ ಮಣ್ಣು ಕೊಚ್ಚಿ ಹೋಗಿದೆ. ಜಮೀನು ತುಂಬಾ ಹೇಮೆ ಕಸಕಡ್ಡಿಗಳ ಹೊರೆಯನ್ನು ಭಾರೀ ಪ್ರಮಾಣದಲ್ಲಿ ತಂದು ಹಾಕಿದೆ. ರೈತರ ಕೃಷಿ ಬದುಕು ದುಸ್ಥರವಾಗಿದೆ.

ಚಿಕ್ಕಮಂದಗೆರೆಯ ಮಂಜುನಾಥ್ ಅವರ ತೋಟಕ್ಕೆ ನೀರು ನುಗ್ಗಿರುವುದಲ್ಲದೆ ಇವರ ಮನೆಯ ಕೊಟ್ಟಿಗೆ ಅರ್ಧ ಭಾಗ ಮುಳುಗಡೆಯಾಗಿದೆ. ರಾತ್ರಿ ವೇಳೆಯಾಗಿದ್ದ ಕಾರಣ ರೈತ ಮಂಜುನಾಥ್ ಅವರ ಜಾನುವಾರುಗಳನ್ನು ಸುರಕ್ಷಿತ ಸ್ಥಳಕ್ಕೆ ರವಾನಿಸಲು ಪರದಾಡಬೇಕಾಯಿತು. ಬೇವಿನಹಳ್ಳಿಯ ಪಾಪನಾಯ್ಕ, ಪುಟ್ಟನಾಯ್ಕ, ಪಾಪನಾಯ್ಕ ಸಣ್ಣನಾಯ್ಕ ಅವರ ಭತ್ತ, ಜೋಳ, ತೆಂಗಿನ ತೋಟಕ್ಕೆ ನೀರು ನುಗ್ಗಿ ಜೋಳದ ಬೆಳೆ ಕೊಚ್ಚಿ ಹೋಗಿದೆ. ಸಾಕಷ್ಟು ರೈತರ ಪಂಪ್‌ಸೆಟ್, ಪಂಪ್‌ಸೆಟ್ ಮನೆಗಳು ಹಾಳಾಗಿವೆ

ಹಳೆ ಮಾದಾಪುರದ ರಾಮಲಿಂಗೇಶ್ವರ ದೇವಸ್ಥಾನದ ಮೆಟ್ಟಿಲಿನ ಪಾದದವರೆಗೆ ಹೇಮೆ ನೀರು ಆವರಿಸಿದೆ. ಪವಿತ್ರ ಗೋವಿನಕಲ್ಲು ಸಂಪೂರ್ಣ ಮುಳುಗಡೆಯಾಗಿದೆ. ಮಾದಾಪುರದ ಸನ್ಯಾಸಿಮಂಟಪ ಮುಳುಗಡೆಯಾಗಿ ನದಿಪಾತ್ರದ ರೈತರು ಜಮೀನುಗಳಿಗೆ ತೆರಳಲು ಪರದಾಡುವಂತಾಗಿದೆ

ನಾಲ್ಕೈದು ದಿನಗಳ ಹಿಂದೆ ಬೇವಿನಹಳ್ಳಿ ಅಂಕನಾಥೇಶ್ವರದ ದೇಗುಲದ ಮೆಟ್ಟಿಲಿನವರಿಗೆ ನುಗ್ಗಿದ ಹೇಮೆ ಈ ಬಾರಿ ದೇಗುಲದ ಅರ್ಧ ಭಾಗ ಸುತ್ತುವರಿದಿದೆ. ದೇಗುಲದ ಪಕ್ಕದ ತೋಟದಲ್ಲಿದ್ದ ಮೇವಿನ ಜೋಳದ ಜಮೀನಿಗೆ ನೀರು ನುಗ್ಗಿ ಕೊಚ್ಚಿಕೊಂಡು ಹೋಗಿದೆ.

ದಬ್ಬೇಘಟ್ಟ ಎಲ್ಲೆಯ ಬೋಜೇಗೌಡರ ಅಡಿಕೆ ತೋಟಕ್ಕೆ ನೀರು ನುಗ್ಗಿ ಅಡಿಕೆ ಸಸಿಗಳಿಗೆ ಹಾನಿಯಾಗಿವೆ. ಚಿಕ್ಕಮಂದಗೆರೆಯ ರೈತ ಗುಂಡ, ಪಟೇಲರ ಶಿವಣ್ಣ, ಕುಮಾರ್, ಮಂಜು, ಮೊಗಣ್ಣಗೌಡ, ಮಂಜೇಗೌಡ, ಹೊನ್ನೇಗೌಡ, ರಾಮಚಂದ್ರ, ಬಸವೇಗೌಡ, ಬೋರೇಗೌಡ, ಮಹದೇವಯ್ಯನ ಮಂಜು, ಚಂದ್ರಶೇಖರ್, ಧರಣಿ, ಕೆಂಪೇಗೌಡ, ನಂಜೇಗೌಡ ಅವರ ಕಬ್ಬು, ತೆಂಗು, ಅಡಿಕೆ ತೋಟಗಳಿಗೆ ಅಪಾರ ಪ್ರಮಾಣದಲ್ಲಿ ನೀರು ನುಗ್ಗಿದೆ.

ಕಡಹೆಮ್ಮಿಗೆ ನದಿಪಾತ್ರದಲ್ಲಿ ಸಾಕಷ್ಟು ರೈತರು ಶುಂಠಿ ಬೇಸಾಯ ಮಾಡಿದ್ದು, ದಿಢೀರನೆ ನುಗ್ಗಿದ ನೀರಿನಿಂದ ಬಾರಿ ಹಾನಿಯಾಗಿದೆ ಮಂದಗೆರೆ ಬಳಿಯ ಕುರಾವು(ದ್ವೀಪ) ಸುತ್ತ ಹೇಮೆ ಸುತ್ತುವರಿದಿದೆ. ಈ ಸ್ಥಳದಲ್ಲಿ ವಾಸವಾಗಿದ್ದ ನಾಲ್ಕೈದು ಕುಟುಂಬಗಳು ಹೇಮಾವತಿ ನದಿ ನೀರು ಹೆಚ್ಚುವ ಕಾರಣ ಮುಂಜಾಗ್ರತೆಯಾಗಿ ನದಿ ಗಡ್ಡೆ ಪ್ರದೇಶದಿಂದ ಹೊರಗಡೆ ಸುರಕ್ಷಿತ ಪ್ರದೇಶಕ್ಕೆ ತೆರಳಿದ್ದಾರೆ.

ಯಾವುದೇ ಪ್ರಾಣಹಾನಿ ಸಂಭವಿಸದಿದ್ದರೂ ಸಾಕಷ್ಟು ತೆಂಗು, ಬಾಳೆ, ಭತ್ತ, ಜೋಳ, ಅಡಿಕೆ ತೋಟಗಳಿಗೆ ಹಾನಿಯಾಗಿವೆ

ಕಂದಾಯ ಇಲಾಖೆ, ಗ್ರಾಪಂ. ಅಧಿಕಾರಿಗಳು, ಪೊಲೀಸ್ ಇಲಾಖೆಯವರು ನದಿಪಾತ್ರದ ಜನರಿಗೆ ನದಿಯಲ್ಲಿ ಇಳಿಯದಂತೆ ಸುರಕ್ಷಿತ ಸ್ಥಳಕ್ಕೆ ತೆರಳಲು ಕಟ್ಟೆಚ್ಚರಿಕೆ ನೀಡುತ್ತಿದ್ದಾರೆ

### ವೆಲ್ಲೆಸ್ಲಿ ಸೇತುವೆಯ ಸಂಪರ್ಕ ರಸ್ತೆಗೆ ಹಾನಿ

## ಸ್ಥಳಕ್ಕೆ ಉಸ್ತುವಾರಿ ಸಚಿವರ ಭೇಟಿ, ಪರಿಶೀಲನೆ

### ಮಳೆ ನಿಂತ ಬಳಿಕ ತಡೆಗೋಡೆ ನಿರ್ಮಿಸಿ, ರಸ್ತೆ ದುರಸ್ಥಿ ಮಾಡಿಸಿ



ಹಾನಿಗೊಳಗಾಗಿರುವ ಪ್ರದೇಶಕ್ಕೆ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಭೇಟಿ

ಶ್ರೀರಂಗಪಟ್ಟಣ,ಆ.2–ಕಾವೇರಿ ನದಿ ಪ್ರವಾಹದಿಂದಾಗಿ ಪಟ್ಟಣದ ವೆಲ್ಲೆಸ್ಲಿ ಸೇತುವೆ ಬಳಿ ಕುಸಿತಗೊಂಡಿದ್ದ ತಡೆಗೋಡೆ, ಹಾನಿಗೊಳಗಾಗಿದ್ದ ಪ್ರದೇಶಕ್ಕೆ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಹಾಗೂ ಸ್ಥಳೀಯ ಶಾಸಕ ರಮೇಶ ಬಂಡಿಸಿದ್ದೇಗೌಡ ಅವರುಗಳು ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಐತಿಹಾಸಿಕ ವೆಲ್ಲೆಸ್ಲಿ ಸೇತುವೆಗೆ ಸಂಪರ್ಕ ಕಲ್ಪಿಸುವ ರಸ್ತೆ ಬಳಿ ನದಿಗೆ ಕಟ್ಟಲಾಗಿದ್ದ ಭಾರಿ ತಡೆ ಗೋಡೆ ನೀರಿನ ರಭಸಕ್ಕೆ ಕುಸಿದು ಕೊಚ್ಚಿ ಹೋಗಿತ್ತು ಇದರ ಜೊತೆ ಸಂಪರ್ಕ ರಸ್ತೆಯೂ ಕೊಚ್ಚಿ ಹೋಗಿ ಹಳ್ಳ ಬಿದ್ದು ಅಪಾರ ಹಾನಿಯಾಗಿತ್ತು ಸ್ಥಳಕ್ಕೆ ಜಿಲ್ಲಾಧಿಕಾರಿ ಡಾ.ಕುಮಾರ್ ಮತ್ತು ಇತರ ಅಧಿಕಾರಿಗಳ ತಂಡ ಮೊದಲು ಭೇಟಿ ನೀಡಿ ಪರಿಶೀಲನೆ ನಡೆಸಿ ಉಸ್ತುವಾರಿ ಸಚಿವರ ಗಮನಕ್ಕೆ ತಂದಿದ್ದರು.

200 ವರ್ಷಗಳ ಇತಿಹಾಸವಿರುವ ಲಾರ್ಡ್ ವೆಲ್ಲೆಸ್ಲಿ ಸೇತುವೆ ಮೇಲೆ ಸಂಚರಿಸಿದ ಸಚಿವರು, ಸೇತುವೆ ವೀಕ್ಷಿಸಿದರು. ಸೇತುವೆಗೆ ಹಾನಿಯಾಗದಿರುವ ಬಗ್ಗೆ ಸಮಾಧಾನ ವ್ಯಕ್ತಪಡಿಸಿದರು. ಇದರ ಜೊತೆ ನದಿ ಪಕ್ಕದಲ್ಲೇ ಇದ್ದ ಉದ್ಯಾನವನವೂ ಸಹ ಕೊಚ್ಚಿ ಹೋಗಿ ಕಬ್ಬಿಣದ ತಂತಿ, ಬೇಲಿ ಸಹಿತ ಹಾನಿಗೊಳಗಾಗಿರುವುದನ್ನು ಪರಿಶೀಲನೆ ನಡೆಸಿದರು.

ಜಿಲ್ಲಾಧಿಕಾರಿ ಹಾಗೂ ಸಂಬಂಧಿಸಿದ ಇಲಾಖೆಯೊಂದಿಗೆ ಸ್ಥಳದಲ್ಲಿ ಚರ್ಚೆ ನಡೆಸಿ, ಪ್ರವಾಹ ನಿಂತ ಮೇಲೆ ಹಾನಿಯಾಗಿರುವ ಸಂಪರ್ಕ ರಸ್ತೆ, ತಡೆಗೋಡೆ ಸೇರಿದಂತೆ ಉದ್ಯಾನವನವನ್ನು ಸರಿಪಡಿಸಿ, ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಸೂಚನೆ ನೀಡಿದರು.

ತಹಶೀಲ್ದಾರ್ ಪರಶುರಾಮ್ ಸತ್ತಿಗೇರಿ, ತಾ.ಪಂ ಇಒ ವೇಣು, ಪಿಡಬ್ಲ್ಯೂಡಿ, ಸೆಸ್ಕ್ ಇಲಾಖೆ, ಕಂದಾಯ ಇಲಾಖೆ, ನೀರಾವರಿ ಇಲಾಖೆಯ ಅಧಿಕಾರಿಗಳು ಜೊತೆಯಲ್ಲಿದ್ದರು.

### ಸ್ಥಳ ಪರಿಶೀಲನೆ

ಮಂಡ್ಯ,ಆ.2–ಜಿಲ್ಲಾಧಿಕಾರಿ ಡಾ: ಕುಮಾರ ಅವರು ಪಾಂಡವಪುರ ತಾಲೂಕಿನ ಎಣ್ಣೆ ಹೊಳೆ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾರ್ವಜನಿಕರೊಂದಿಗೆ ನೆರೆ ಪರಿಸ್ಥಿತಿಯ ಬಗ್ಗೆ ಚರ್ಚೆ ನಡೆಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಉಪಸ್ಥಿತರಿದ್ದರು.

## ಕಾಳಜಿ ಕೇಂದ್ರಗಳಿಗೆ ಸಚಿವ ವೆಂಕಟೇಶ್ ಭೇಟಿ, ಪರಿಶೀಲನೆ



ಕೊಳ್ಳೇಗಾಲ ಕಾಳಜಿ ಕೇಂದ್ರಗಳಿಗೆ ಸಚಿವ ಕೆ.ವೆಂಕಟೇಶ್ ಭೇಟಿ ನೀಡಿ, ಸಂತ್ರಸ್ತರ ಯೋಗಕ್ಷೇಮ ವಿಚಾರಿಸಿದರು.

ಕೊಳ್ಳೇಗಾಲ, ಆ.2–ತಾಲೂಕಿನ ಪ್ರವಾಹ ಪೀಡಿತ ಗ್ರಾಮಗಳು ಹಾಗೂ ಸಂತ್ರಸ್ತರ ಕಾಳಜಿ ಕೇಂದ್ರಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಶುಕ್ರವಾರ ಭೇಟಿ ನೀಡಿ, ಪರಿಶೀಲಿಸಿದರು.

ಪಟ್ಟಣದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಸ್ಟೆಲ್‌ಗಳ ಕಾಳಜಿ ಕೇಂದ್ರಕ್ಕೆ ಸಚಿವರು, ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಎಂ.ಆರ್.ಮಂಜುನಾಥ್ ಅವರೊಂದಿಗೆ ಭೇಟಿ ನೀಡಿ, ವೀಕ್ಷಿಸಿದರು. ಕಾಳಜಿ ಕೇಂದ್ರದಲ್ಲಿ ನೀಡಲಾಗುತ್ತಿರುವ ಊಟ, ಉಪಾಹಾರ ಸೇರಿಂದ ಇನ್ನಿತರ ಸೌಲಭ್ಯ ಪರಿಶೀಲಿಸಿದರು.

ಬಳಿಕ ಡಿ.ದೇವರಾಜು ಅರಸು ಹಿಂದುಳಿದವರ್ಗಗಳ ವಿದ್ಯಾರ್ಥಿ ನಿಲಯದ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ, ನಿಮಗೆ ನೀಡುತ್ತಿರುವ ಊಟ ಚೆನ್ನಾಗಿದೆಯೇ, ಇತರೆ ಸೌಕರ್ಯ ನೀಡಲಾಗುತ್ತಿದೆಯೇ ಎಂದು ಸಂತ್ರಸ್ತರ ಯೋಗಕ್ಷೇಮ ವಿಚಾರಿಸಿದರು. ನೀರು ಕಡಿಮೆಯಾದ ನಂತರ ನಿಮ್ಮ ಗ್ರಾಮಗಳಿಗೆ ಕಳುಹಿಸಿ ಕೊಡಲಿದ್ದೇವೆ. ಅಲ್ಲಿಯವರೆಗೂ ನೀವು ಇಲ್ಲೇ ಉಳಿಯಬೇಕು. ಯಾವುದೇ ತೊಂದರೆಗಳಿದ್ದರೂ ಪರಿಹರಿಸುತ್ತೇವೆ ಎಂದರು.

ನಂತರ ಮುಳ್ಳೂರು ಗ್ರಾಮದ ಕಾಳಜಿ ಕೇಂದ್ರಕ್ಕೆ ತೆರಳಿ, ಸಂತ್ರಸ್ತರ ಅಹವಾಲು ಆಲಿಸಿದರು. ಇದೇ ವೇಳೆ ಗ್ರಾಮಸ್ಥರು, ಮಳೆ ಹೆಚ್ಚಾದಾಗ ಉಂಟಾಗುವ ಪ್ರವಾಹದಿಂದ ಸಾಕಷ್ಟು ವರ್ಷಗಳಿಂದ ತೊಂದರೆ ಅನುಭವಿ ಸುತ್ತಿದೇವೆ. ಇದಕ್ಕೆ ಶಾಶ್ವತ ಪರಿಹಾರ ಒದ ಗಿಸಬೇಕು ಎಂದು ಮನವಿ ಮಾಡಿದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತ ನಾಡಿ, ಈಗಾಗಲೇ ಅಧಿಕಾರಿಗಳಿಗೆ ಪ್ರವಾಹ ಹಾನಿ ವರದಿ ನೀಡಲು ತಿಳಿಸಲಾಗಿದೆ. ಸಮೀಕ್ಷೆ ವರದಿ ಬಂದ ಕೂಡಲೇ ಪರಿಹಾರ ಕ್ರಮಗಳಿಗೆ ಮುಂದಾಗಲಿದ್ದೇವೆ ಎಂದರು.

ಮಾಜಿ ಶಾಸಕ ಆರ್.ನರೇಂದ್ರ, ಜಿಲ್ಲಾಧಿಕಾರಿ ಶಿಲ್ಪನಾಗ್, ಜಿಪಂ ಸಿಇಓ ಮೋನಾ ರೊತ್ ಇತರರು ಇದ್ದರು.

## ಪರಿಹಾರ, ಕಾಮಗಾರಿಗಳಿಗೆ 767 ಕೋಟಿ ರೂ.

### ● ಕಂದಾಯ ಸಚಿವ ಕೃಷ್ಣ ಭೈರೇಗೌಡ ಮಾಹಿತಿ ● ಪ್ರವಾಹ ಪೀಡಿತ ದಾಸನಪುರಕ್ಕೆ ಭೇಟಿ, ಪರಿಶೀಲನೆ



ಕೊಳ್ಳೇಗಾಲ ತಾಲೂಕಿನ ಪ್ರವಾಹ ಪೀಡಿತ ದಾಸನಪುರ ಗ್ರಾಮಕ್ಕೆ ಭೇಟಿ ನೀಡಿದ ಸಚಿವ ಕೃಷ್ಣ ಭೈರೇಗೌಡ ಅಧಿಕಾರಿಗಳಿಂದ ಪ್ರವಾಹ ಪರಿಸ್ಥಿತಿ ಮಾಹಿತಿ ಪಡೆದರು.

ಕೊಳ್ಳೇಗಾಲ, ಆ.2–ಪ್ರವಾಹ, ಅತಿವೃಷ್ಟಿ ಪರಿಹಾರ ಹಾಗೂ ಕಾಮಗಾರಿ ಕೈಗೊಳ್ಳಲು ಒಟ್ಟು 767 ಕೋಟಿ ರೂ. ಒದಗಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ತಿಳಿಸಿದರು.

ತಾಲೂಕಿನ ಪ್ರವಾಹ ಪೀಡಿತ ದಾಸನಪುರ ಗ್ರಾಮಕ್ಕೆ ಶುಕ್ರವಾರ ಭೇಟಿ ನೀಡಿ ಪ್ರವಾಹ ಪರಿಸ್ಥಿತಿ ಅವಲೋಕಿಸಿ ಬಳಿಕ ಮಾತನಾಡಿದ ಅವರು, ಮಳೆಯಿಂದಾಗಿ ಸಾಕಷ್ಟು ಬೆಳೆ ಹಾನಿಯೂ ಆಗಿದೆ. 45 ಸಾವಿರ ಹೆಕ್ಟೇರ್ ಪ್ರದೇಶಗಳ ಬೆಳೆ ನಾಶವಾಗಿದ್ದು, ತಕ್ಷಣ ಪರಿಹಾರ ನೀಡಲು ಎಲ್ಲಾ ಆಯಾಯ ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ. ಪ್ರವಾಹ ಪರಿಹಾರ ಹಾಗೂ ಕಾಮಗಾರಿಗಳಿಗಾಗಿ 767 ಕೋಟಿ ರೂ. ನೀಡಲಾಗಿದೆ. ಇನ್ನೊಂದು ವಾರದಲ್ಲಿ ಬೆಳೆ ಹಾನಿ ಮತ್ತಷ್ಟು ಹೆಚ್ಚಾಗಲಿದ್ದು, ಪರಿಹಾರ ವಿತರಿಸಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ಕೊಟ್ಟಿದ್ದೇವೆ ಎಂದರು.

ರಾಜ್ಯಾದ್ಯಂತ 118 ಕಡೆ ಕಾಳಜಿ ಕೇಂದ್ರ ತೆರೆಯಲಾಗಿದೆ. ಮನೆಗಳಿಗೆ ನೀರು ನುಗ್ಗುವ ಸಾಧ್ಯತೆ ಹಾಗೂ ಗುಡ್ಡದಲ್ಲಿ ಮನೆ ಮಾಡಿಕೊಂಡಿರುವವರನ್ನು ಕಾಳಜಿ ಕೇಂದ್ರಕ್ಕೆ ಕರೆ ತರಲಾಗುತ್ತಿದೆ. ಕೆಲವರು ಸ್ವಯಂ ಪ್ರೇರಿತರಾಗಿ ಬರುತ್ತಿದ್ದಾರೆ. ಇನ್ನೂ ಕೆಲವು ಕಡೆ ಒತ್ತಾಯ ಪೂರ್ವಕವಾಗಿ ಸ್ಥಳಾಂತರಿಸುತ್ತಿದ್ದೇವೆ. ಯಾವುದೇ ಅನಾಹುತ ಆಗುವ ಮೊದಲು ಪ್ರಾಣ ಉಳಿಸಬೇಕು ಎಂಬುದು ನಮ್ಮ ಉದ್ದೇಶವಾಗಿದೆ. ಪ್ರಾಣ ಹೋದ ಮೇಲೆ ಪರಿಹಾರ ಕೊಡುವುದು ಮುಖ್ಯವಲ್ಲ. ಒಟ್ಟು 18 ಸಾವಿರ ಜನರಿಗೆ ಕಾಳಜಿ ಕೇಂದ್ರದಲ್ಲಿ ಆಶ್ರಯ, ಊಟ ಉಪಾಚಾರ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಮಳೆಗಾಲದಲ್ಲಿ ರಾಜ್ಯ ಸರ್ಕಾರ ಎಚ್ಚರಿಕೆಯಿಂದ ಕೆಲಸ ಮಾಡುತ್ತಿದೆ. ಪ್ರವಾಹ, ಮಳೆ ಸಂಬಂಧಿ ಕೆಲಸಗಳು ಹೇಗೆ ಆಗುತ್ತಿದೆ ಎಂಬುದನ್ನ ನಾನು ಖುದ್ದು ಭೇಟಿ ನೀಡಿ ಪರಿಶೀಲಿಸುತ್ತಿದ್ದೇನೆ. ಕೇರಳದ ವಯನಾಡು ದುರಂತದ ಮೇಲೆ ನಾವೆಲ್ಲಾ ಬಹಳ ಎಚ್ಚರಿಕೆಯಿಂದ ಇರಬೇಕು. ಆಗಸ್ಟ್‌ನಲ್ಲೂ ಹೆಚ್ಚು ಮಳೆ ಬೀಳುವ ಸಾಧ್ಯತೆ ಇದೆ ಎಂದರು.

ಮಳೆಯಿಂದ ಬಾಧಿತವಾದ ಪ್ರದೇಶಗಳಿಗೆ ಭೇಟಿ ನೀಡಿ ಜಿಲ್ಲಾಡಳಿತವನ್ನು ಚುರುಕುಗೊಳಿಸಿ, ಪ್ರವಾಹ ಸಂದರ್ಭದಲ್ಲಿ ಜನರ ನೆರವಿಗೆ ಬರುವುದು ಸರ್ಕಾರದ ಕರ್ತವ್ಯ. ಆಯಾಯ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಯಲ್ಲಿ ತ್ವರಿತ ಕ್ರಮ ಕೈಗೊಳ್ಳುವಲ್ಲಿ ಕೆಲಸ ಮಾಡುತ್ತಿದ್ದಾರೆ. ಈ ವರ್ಷ ಮಳೆ ಬೀಳುವ ಕುರಿತ ಮಾಹಿತಿ ಮುಂಚಿತವಾಗಿಯೇ ನೀಡುತ್ತಿದ್ದೇವೆ. ನೀರಿನ ಹರಿವು ಹಾಗೂ ಯಾವ ಪ್ರಮಾಣದಲ್ಲಿ ನೀರು ಹೊರಬಿಡಲಾಗುತ್ತದೆ. ಇದರಿಂದ ಎಷ್ಟು ಗ್ರಾಮಗಳಿಗೆ ತೊಂದರೆಯಾಗಬಹುದು ಎಂಬ ಅಂದಾಜು ಮಾಡಿ, ಮೊದಲೇ ತಿಳಿಸಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ ಎಂದು ಹೇಳಿದರು.

> 6 ಹಿಂದಿನ ವರ್ಷಗಳಿಗೆ ಹೋಲಿಸಿದರೆ ಮಳೆ ಘಟನೆಯಲ್ಲಿ ಮಡಿದವರ ಸಂಖ್ಯೆ ಈ ವರ್ಷದಲ್ಲಿ ಕಡಿಮೆಯಾಗಿದೆ. ಮುಂಜಾಗ್ರತಾ ಕ್ರಮದಿಂದ ಸಕ್ರಿಯವಾಗಿ ಕೆಲಸ ಮಾಡಿದ್ದೇವೆ. ರಾಜ್ಯದ ನಾನಾ ಭಾಗಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ಜೂನ್ ಮತ್ತು ಜುಲೈ ಸೇರಿ ವಾಡಿಕೆಗಿಂತ ಶೇ.31ರಷ್ಟು ಅಧಿಕ ಮಳೆ ಸುರಿದಿದೆ.
>
> –ಕೃಷ್ಣ ಭೈರೇಗೌಡ, ಕಂದಾಯ ಸಚಿವ

ಇದೇ ವೇಳೆ ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಎಂ.ಆರ್.ಮಂಜುನಾಥ್, ಜಿಲ್ಲಾಧಿಕಾರಿ ಶಿಲ್ಪನಾಗ್ ಪ್ರವಾಹ ಸ್ಥಿತಿ ಕುರಿತು ಸಚಿವರಿಗೆ ವಿವರಿಸಿದರು. ಸ್ಥಳೀಯ ಜನರು ತಡೆಗೋಡೆ ನಿರ್ಮಿಸಬೇಕು. ಪದೇ ಪದೆ ಪ್ರವಾಹದಿಂದ ಉಂಟಾಗುವ ಸಂಕಷ್ಟಗಳಿಗೆ ಪರಿಹಾರ ನೀಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಕೃಷ್ಣಭೈರೇಗೌಡ, ಶಾಶ್ವತ ಪರಿಹಾರ ಕ್ರಮಗಳಿಗೆ ಮುಂದಾಗುವ ನಿಟ್ಟಿನಲ್ಲಿ ಚರ್ಚಿಸಲಾಗುವುದು ಎಂದು ತಿಳಿಸಿದರು.

ಇದೇ ವೇಳೆ ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೊತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ, ಉಪವಿಭಾಗಾಧಿಕಾರಿ ಮಹೇಶ್, ತಹಸೀಲ್ದಾರ್ ಮಂಜುಳಾ, ಮತ್ತಿತರ ಅಧಿಕಾರಿಗಳು ಇದ್ದರು.

## ಉಮ್ಮತ್ತೂರು ನಿಂಗಪ್ಪ ನಿಧನ



**ಚಾಮರಾಜನಗರ:** ತಾಲೂಕಿನ ಉಮ್ಮತ್ತೂರು ಗ್ರಾಮದ ಪತ್ರಿಕಾ ವಿತರಕ ನಿಂಗಪ್ಪ(78) ಶುಕ್ರವಾರ ಮಧ್ಯಾಹ್ನ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಪುತ್ರಿ, ಅಳಿಯ ಹಾಗೂ ಅಪಾರ ಬಂಧು–ಬಳಗವನ್ನು ಆಗಲಿದ್ದಾರೆ. ಸ್ವಗ್ರಾಮದ ಮೃತರ ತೋಟದಲ್ಲಿ ಶನಿವಾರ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಾಸಕ ಎ.ಆರ್.ಕೃಷ್ಣಮೂರ್ತಿ, ಚಾಮುಲ್ ನಿರ್ದೇಶಕ ಕಮರವಾಡಿ ರೇವಣ್ಣ, ಗ್ರಾಪಂ ಮಾಜಿ ಅಧ್ಯಕ್ಷ ಶ್ರೀಕಂಠ ಸ್ವಾಮಿ, ಪತ್ರಿಕಾ ವಿತರಕರ ಸಂಘದ ಅಧ್ಯಕ್ಷ ಸಿ.ಪುರು ಷೋತ್ತಮ್, ಪ್ರಧಾನ ಕಾರ್ಯದರ್ಶಿ ಅಕ್ಷಯ್ ಹಾಗೂ ಪದಾಧಿಕಾರಿಗಳು ಸಂತಾಪ ಸೂಚಿಸಿದ್ದಾರೆ.

## ಬೆಳಕ್ಕಾಗುವಷ್ಟರಲ್ಲಿ ನಮ್ಮ ಊರೇ ಇರಲಿಲ್ಲ



**ಚಾನಗರ:** ರಾತ್ರಿ ಖುಷಿಯಿಂದ ಮಾತನಾಡಿಕೊಂಡು ಮಲಗಿದ್ದ ನಾವು, ನಡುರಾತ್ರಿಯಲ್ಲಿ ನಮ್ಮ ಜೀವಗಳನ್ನು ಉಳಿಸಿಕೊಳ್ಳಲು ಸಾಕಷ್ಟು ಹೋರಾಟ ನಡೆಸಿದ್ದೆವು. ಆ ಭಯಾನಕ ರಾತ್ರಿ ಮುಗಿದು ಬೆಳಕ್ಕಾಗುವಷ್ಟರಲ್ಲಿ ನಮ್ಮ ಊರೇ ಇರಲಿಲ್ಲ...

ಹೀಗೆಂದು ವಯನಾಡು ಭೂ ಕುಸಿತದಲ್ಲಿ ಸಿಲುಕಿಕೊಂಡು ಪಾರಾಗಿ ಬಂದ ಮಂಗಲ ಗ್ರಾಮದ ಸಿದ್ದರಾಜು, ಜಯಶ್ರೀ ಹಾಗೂ ಮಂಜುಳಾ ಆ ಕರಾಳ ರಾತ್ರಿ ಅನುಭವವನ್ನು ಎಳೆಎಳೆಯಾಗಿ ಸುದ್ದಿಗಾರರ ಮುಂದೆ ಬಿಚ್ಚಿಟ್ಟರು. ನಾವು 50 ವರ್ಷಗಳ ಹಿಂದೆಯೇ ಕೂಲಿ ಕೆಲಸಕ್ಕೆ ವಯನಾಡಿನ ಚೂರಲ್‌ಮಲಾಕ್ಕೆ ತೆರಳಿ ಅಲ್ಲೇ ವಾಸವಾಗಿದ್ದೆವು. ಜೊತೆಗೆ 12 ಹಸುಗಳನ್ನು ಸಾಕಿಕೊಂಡು ಜೀವನ ನಡೆಸುತ್ತಿದ್ದೆವು. ಆದರೆ, ಮಂಗಳವಾರ ಮುಂಜಾನೆ ಜೋರಾದ ಶಬ್ಧ ಕೇಳಿ ಬಂತು. ಕೊಟ್ಟಿಗೆಯಲ್ಲಿ ಕಟ್ಟಿ ಹಾಕಿದ್ದ ಹಸುಗಳು ಚೀರಾಡುತ್ತಿದ್ದವು. ಕೂಡಲೇ ನಾವು ಕೊಟ್ಟಿಗೆ ಬಳಿ ಹೋಗಿ ನೋಡಿದಾಗ ಕೊಟ್ಟಿಗೆ ತುಂಬಾ ನೀರು ಆವರಿಸಿತ್ತು. ಕೂಡಲೇ ಹಸುಗಳ ಹಗ್ಗ ಬಿಡಿಸಿ, ನಾವು ನಮ್ಮ ಮನೆ ಪಕ್ಕದ ಟೀ ಎಸ್ಟೇಟ್ ಆಸ್ಪತ್ರೆಯ ಕಟ್ಟಡದ ಚಾವಣಿ ಮೇಲೆ ನಿಂತುಕೊಂಡೆವು ಅಲ್ಲಿಗೂ ನೀರು ಬಂತು ಬಳಿಕ ಅಲ್ಲಿಂದ ಪಕ್ಕದಲ್ಲಿದ್ದ ಚಿಕ್ಕ ಗುಡ್ಡದಲ್ಲಿದ್ದ ಮ್ಯಾನೇಜರ್ ಬಂಗಲೆ ಬಳಿಗೆ ಬಂದು ರಕ್ಷಣೆ ಪಡೆದುಕೊಂಡೆವು ಎಂದು ತಿಳಿಸಿದರು.

ಐದನೇ ಪುಟದಿಂದ

## ಮೈಸೂರು ಚಲೋ ಪಾದಯಾತ್ರೆ

ಹೋರಾಟವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲು ಬಿಜೆಪಿ ಮತ್ತು ಎನ್‌ಡಿಎ ಮಿತ್ರ ಪಕ್ಷ ಜೆಡಿಎಸ್ ಜಂಟಿಯಾಗಿ ಪಾದಯಾತ್ರೆ ಹಮ್ಮಿಕೊಂಡಿವೆ ಎಂದರು.

ಪಾದಯಾತ್ರೆಯ ರೂಟ್ ಮ್ಯಾಪ್ ಸಿದ್ಧಗೊಂಡಿದ್ದು, ನಾಳೆ ಬೆಳಗ್ಗೆ 8.30ಕ್ಕೆ ಕೆಂಗೇರಿ ಕೆಂಪಮ್ಮ ದೇವಸ್ಥಾನದ ಬಳಿಯ ಮಂಜುನಾಥ ಕನ್ವೆನ್ಷನ್ ಹಾಲ್ ಬಳಿಯಿಂದ ಆರಂಭವಾಗಲಿರುವ ಪಾದಯಾತ್ರೆ ಮೈಸೂರಿಗೆ 8 ದಿನಗಳಲ್ಲಿ ಕ್ರಮಿಸಲಿದೆ. ಮೊದಲ ದಿನ 16 ಕಿಲೋ ಮೀಟರ್ ಪಾದಯಾತ್ರೆ ನಡೆಯಲಿದ್ದು, ಎರಡನೇ ದಿನ 22 ಕಿಲೋ ಮೀಟರ್, ಮೂರನೇ ದಿನ ಸುಮಾರು 20 ಕಿಲೋ ಮೀಟರ್ ಕ್ರಮಿಸಲಿದೆ. ಆಗಸ್ಟ್ 6ರಂದು ನಿಡಘಟ್ಟ ಸುಮಿತ್ರಾದೇವಿ ಕನ್ವೆನ್ಷನ್ ಹಾಲ್‌ನಿಂದ ಸುಮಾರು 20 ಕಿಲೋ ಮೀಟರ್ ಕ್ರಮಿಸಲಿದೆ, ಮರುದಿನ ಮಂಡ್ಯದ ಶಶಿಕಿರಣ್ ಕನ್ವೆನ್ಷನ್ ಹಾಲ್‌ನಿಂದ ಆರಂಭವಾಗಿ 16 ಕಿಲೋ ಮೀಟರ್ ಕ್ರಮಿಸಿ, ಆಗಸ್ಟ್ 8ರಂದು ತೂಬಿನಕೆರೆ ಕೈಗಾರಿಕಾ ಪ್ರದೇಶದ ಬಳಿಯಿಂದ, 9ರಂದು ಶ್ರೀರಂಗಪಟ್ಟಣ ಮಂಜುನಾಥ ಕಲ್ಯಾಣಮಂಟಪದಿಂದ, ಆಗಸ್ಟ್ 10ರಂದು ಮೈಸೂರಿನಲ್ಲಿ ಪಾದಯಾತ್ರೆ ಸಮಾರೋಪಗೊಳ್ಳಲಿದೆ.

ಪಾದಯಾತ್ರೆಯಲ್ಲಿ ಪ್ರತಿದಿನ ಕನಿಷ್ಠ 8ರಿಂದ 10 ಸಾವಿರ ಜನರು ಪಾಲ್ಗೊಳ್ಳಲಿದ್ದು, ರಾಜ್ಯದ ಮೂಲೆ ಮೂಲೆಯಿಂದ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಪಾದಯಾತ್ರೆಗೆ ಆಗಮಿಸಲಿದ್ದಾರೆ ಎಂದರು.

ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಭ್ರಷ್ಟ, ಬಡವರ, ಪರಿಶಿಷ್ಟ ಸಮುದಾಯಗಳ ವಿರೋಧಿಯಾಗಿದೆ, ಅಭಿವೃದ್ಧಿ ಶೂನ್ಯ ಕೊಡುಗೆ ನೀಡಿದ್ದು, ಅಸಮರ್ಥ ಸರ್ಕಾರ ಎಂದರು. ಅಹಿಂದ ಹೆಸರಿನಲ್ಲಿ ಅಧಿಕಾರ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಎಲ್ಲ ಸಮುದಾಯಗಳಿಗೆ ಮೋಸ ಮಾಡಿದ್ದಾರೆ, ಪರಿಶಿಷ್ಟರಿಗೆ ಮೀಸಲಿಟ್ಟ ಹಣ ಲೂಟಿ ಮಾಡಿದ್ದಾರೆ.

**ಕೆಟ್ಟ ವ್ಯವಸ್ಥೆ ವಿರುದ್ಧ ಹೋರಾಟ:** ಮುಡಾದಲ್ಲಿ ಅಕ್ರಮ ನಿವೇಶನ ಹಂಚಿಕೆ ಮೂಲಕ ಅಪಾರ ಹಣ ಲೂಟಿ ಮಾಡಲಾಗಿದೆ, ನಮ್ಮ ಹೋರಾಟ ವ್ಯಕ್ತಿ ವಿರುದ್ಧ ಅಲ್ಲ, ಕೆಟ್ಟ ವ್ಯವಸ್ಥೆಯ ವಿರುದ್ಧ.

ಸದನದ ಒಳಗೆ ಮತ್ತು ಹೊರಗೆ ಬಿಜೆಪಿ–ಜೆಡಿಎಸ್ ಜೊತೆಗೂಡಿ ಹೋರಾಟ ಮಾಡಿದ್ದು, ಹಗರಣಗಳು ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದ ನಮ್ಮ ಪ್ರಶ್ನೆಗಳಿಗೆ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಮೊದಲು ಉತ್ತರಿಸಲಿ ಎಂದರು.

ನಿನ್ನೆ ಮುಖ್ಯಮಂತ್ರಿಗಳಿಲ್ಲದೇ ಸಚಿವ ಸಂಪುಟ ಸಭೆ ನಡೆಸುವ ಮೂಲಕ ಕಾಂಗ್ರೆಸ್ ಸರ್ಕಾರ ಹೊಸ ಇತಿಹಾಸ ಸೃಷ್ಟಿಸಿದೆ, ಸಭೆ ರಾಜ್ಯಪಾಲರ ನೋಟಿಸ್ ಪ್ರಶ್ನಿಸುವ ಕೆಲಸ ಮಾಡಿದೆ.

ನಿನ್ನೆ ನಡೆದ ಸಂಪುಟ ಸಭೆಯಲ್ಲಿ ಹಲವು ಸಚಿವರ ಮುಖದಲ್ಲಿ ಮಂದಹಾಸ ಇತ್ತು ಎಂಬ ವರದಿ ಇದೆ, ಮುಖ್ಯಮಂತ್ರಿಗಳ ಹಿಂದೆ ಯಾರಿದ್ದಾರೆ ಎಂಬುದಕ್ಕಿಂತ ವಿರುದ್ಧ ಯಾರಿದ್ದಾರೆ ಎಂಬುದು ಇಲ್ಲಿ ಗಮನಿಸಬೇಕಿರುವ ವಿಚಾರ ಎಂದು ಮಾರ್ಮಿಕವಾಗಿ ನುಡಿದರು. ಕಾಂಗ್ರೆಸ್ಸಿಗರದು ಪಶ್ಚಾತ್ತಾಪದ ಯಾತ್ರೆ, ಭ್ರಷ್ಟಾಚಾರ ರಹಿತ ಆಡಳಿತದ ಭರವಸೆ ನೀಡಿ, ಜನರ ಕಿವಿಗೆ ಹೂವನ್ನು ಇಟ್ಟವರು ಪಶ್ಚಾತ್ತಾಪದ ಯಾತ್ರೆ ಮಾಡುತ್ತಿದ್ದಾರೆ.

**ಡಿಕೆಶಿ ಭ್ರಷ್ಟಾಚಾರದ ಪಿತಾಮಹ:** ಬಿಜೆಪಿ–ಜೆಡಿಎಸ್ ಯಾತ್ರೆ ಯಶಸ್ಸಿಗಾಗಿ ಕಾಂಗ್ರೆಸ್ ಒಂದು ದಿನ ಮುಂಚಿತವಾಗಿ ಆಂದೋಲನ ಹಮ್ಮಿಕೊಂಡಿದೆ.

ಡಿ.ಕೆ.ಶಿವಕುಮಾರ್ ಭ್ರಷ್ಟಾಚಾರದ ಪಿತಾಮಹ, ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳು ಹಗರಣಗಳಿಗೆ ಉತ್ತರ ಕೊಡಬೇಕು, ಕಾಂಗ್ರೆಸ್ ಸರ್ಕಾರ ರಾಜ್ಯದ ಜನರಿಗೆ ಶಾಪವಾಗಿ ಪರಿಣಮಿಸಿದೆ, ಶಿವಕುಮಾರ್ ಬಾಯಲ್ಲಿ ಭ್ರಷ್ಟಾಚಾರ ಕುರಿತು ಮಾತು ಬರದಿರುವುದೇ ಒಳ್ಳೆಯದು ಎಂದರು. ಸುಪ್ರೀಂಕೋರ್ಟ್ ನಿನ್ನೆ ಎಸ್‌ಸಿ, ಎಸ್‌ಟಿ ಒಳ ಮೀಸಲಾತಿ ವಿಚಾರದಲ್ಲಿ ನೀಡಿರುವ ತೀರ್ಪಿನ ಬಗ್ಗೆ ಪ್ರತಿಕ್ರಿಯಿಸಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮೀಸಲಾತಿ ವರ್ಗೀಕರಣಕ್ಕೆ ರಾಜ್ಯಕ್ಕೆ ಅವಕಾಶ ನೀಡಿದೆ, 3 ದಶಕಗಳ ಹೋರಾಟಕ್ಕೆ ಜಯ ಸಿಕ್ಕಿದೆ ಎಂದು ವಿಶ್ಲೇಷಿಸಿದರು. ಇದರಲ್ಲಿ ಬಿಜೆಪಿ ಪರಿಶ್ರಮವಿದೆ, ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆಗಿದ್ದಾಗ ಮೀಸಲಾತಿ ಹೆಚ್ಚಿಸಿದ್ದರು, ಪ್ರಧಾನಿ ನರೇಂದ್ರ ಮೋದಿ ಅವರು ಯಾವಾಗಲೂ ಸಾಮಾಜಿಕ ನ್ಯಾಯದ ಪರ ನಿಂತವರು, ಒಳ ಮೀಸಲಾತಿ ಪರವಾಗಿ ಕೇಂದ್ರ ಸರ್ಕಾರ ವಕಾಲತ್ತು ವಹಿಸಿತ್ತು. ಸುಪ್ರೀಂಕೋರ್ಟ್ ತೀರ್ಪನ್ನು ತುರ್ತಾಗಿ ಅನುಷ್ಠಾನಗೊಳಿಸಿ, ಎಲ್ಲ 101 ಜಾತಿಗಳಿಗೆ ನ್ಯಾಯ ಸಿಗುವಂತೆ ಮಾಡಬೇಕು ಎಂದು ರಾಜ್ಯದ ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದರು.

## ಪಾದಯಾತ್ರೆಗೆ ಸರ್ಕಾರದ ಅನುಮತಿ

ಮೈಸೂರು ಚಲೋ ಪಾದಯಾತ್ರೆಗೆ ಅನುಮತಿ ನೀಡಲು ಸರ್ಕಾರ ಕೊನೆಗೂ ಸಮ್ಮತಿಸಿದೆ. ಈ ಮೊದಲು ಬಿಜೆಪಿ–ಜೆಡಿಎಸ್ ಪಾದಯಾತ್ರೆಗೆ ಅನುಮತಿ ಕೊಡದಿರಲು ಸರ್ಕಾರ ತೀರ್ಮಾನಿಸಿತ್ತು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿನ ಅಕ್ರಮ ನಿವೇಶನ ಹಂಚಿಕೆ ಆರೋಪಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಡಾ.ಪರಮೇಶ್ವರ್, ಆತುರಾತುರವಾಗಿ ರಾಜ್ಯಪಾಲರು ಶೋಕಾಸ್ ನೋಟಿಸ್ ಕೊಟ್ಟಿದ್ದಾರೆ ಎಂಬ ಅನುಮಾನವಿದೆ, ಏಕೆಂದರೆ ಜುಲೈ 26ರಂದು ಟಿ.ಜೆ.ಅಬ್ರಹಾಂ ರಾಜ್ಯಪಾಲರಿಗೆ ಮನವಿ ಕೊಟ್ಟಿದ್ದರು, ದೂರು ಪಡೆದ ದಿನವೇ ನೋಟಿಸ್ ಕಳುಹಿಸಿದ್ದಾರೆ. ಬಹುಶಃ ಒತ್ತಡದಲ್ಲಿ ನೋಟೀಸ್ ಕೊಟ್ಟಿರಬಹುದು ಎನ್ನಿಸುತ್ತದೆ ಎಂದರು. ನೋಟಿಸ್ ಹಿಂಪಡೆಯುವಂತೆ ರಾಜ್ಯಪಾಲರಿಗೆ ಮನವಿ ಮಾಡಿಕೊಳ್ಳುವ ಸಂಪುಟದ ನಿರ್ಣಯವನ್ನು ನಿನ್ನೆ ರಾತ್ರಿಯೇ ರಾಜಭವನಕ್ಕೆ ಕಳುಹಿಸಲು ತೀರ್ಮಾನಿಸಲಾಗಿತ್ತು, ಆದರೆ, ರಾಜ್ಯಪಾಲರು ರಾಜ್ಯದಲ್ಲಿ ಇಲ್ಲದಿರುವ ಹಿನ್ನೆಲೆಯಲ್ಲಿ ರಾಜಭವನದ ಕಚೇರಿಗೆ ತಲುಪಿಸಿರಬಹುದು. ರಾಜ್ಯಪಾಲರ ಪ್ರಶ್ನೆಗಳಿಗೆ ಲಿಖಿತ ರೂಪದಲ್ಲಿ ಸರ್ಕಾರದ ಮುಖ್ಯಕಾರ್ಯದರ್ಶಿಗಳು ಈ ಮೊದಲೇ ಉತ್ತರ ನೀಡಿದ್ದಾರೆ, ಈ ಬೆಳವಣಿಗೆ ನಂತರ ರಾಜ್ಯಪಾಲರಿಂದ ಶೋಕಾಸ್ ನೋಟಿಸ್ ಬಂದಿದೆ.

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುವುದಿಲ್ಲವೆಂಬ ವಿಶ್ವಾಸವಿದೆ, ಒಂದು ವೇಳೆ ಕೊಟ್ಟರೂ ಅದನ್ನು ಕಾನೂನು ಪ್ರಕಾರ ಎದುರಿಸುತ್ತೇವೆ, ರಾಜ್ಯಪಾಲರು ಏನೇ ನಿರ್ಧಾರ ಕೈಗೊಂಡರೂ ನಾವು ಎದುರಿಸುತ್ತೇವೆ, ಕಾನೂನಾತ್ಮಕ ಹೋರಾಟ ಮಾಡುತ್ತೇವೆ ಎಂದರು.

## ಪಾದಯಾತ್ರೆ ರೂಟ್ ಮ್ಯಾಪ್

ಅಂದು 22 ಕಿ.ಮೀ. ಕ್ರಮಿಸುವ ಪಾದಯಾತ್ರೆಯು ಕೆಂಗಲ್‌ನ ಕೆವಿಕೆ ಕನ್ವೆನ್ಷನ್ ಹಾಲ್‌ನಲ್ಲಿ ವಾಸ್ತವ್ಯ ಹೂಡಲಿದೆ.

ಆಗಸ್ಟ್ 5ರಂದು ಬೆಳಗ್ಗೆ ಕೆಂಗಲ್ ಹನುಮಂತಯ್ಯನವರ ಸಮಾಧಿಗೆ ಭೇಟಿ ನೀಡಿದ ನಂತರ ಪಾದಯಾತ್ರೆ ಆರಂಭವಾಗಲಿದ್ದು, ಅಂದು 22 ಕಿ.ಮೀ. ಕ್ರಮಿಸಿ ನಿಡಘಟ್ಟದ ಸುಮಿತ್ರಾದೇವಿ ಕನ್ವೆನ್ಷನ್‌ನಲ್ಲಿ ವಾಸ್ತವ್ಯ, ಆಗಸ್ಟ್ 6ರಂದು ನಿಡಘಟ್ಟದ ಸುಮಿತ್ರಾದೇವಿ ಕನ್ವೆನ್ಷನ್ ಹಾಲ್ ಬಳಿ ಬಾಣ ಬಿಡುವ ಮೂಲಕ ಆರಂಭವಾಗಲಿರುವ ಪಾದಯಾತ್ರೆಯು 20 ಕಿ.ಮೀ. ಕ್ರಮಿಸಿ ಮಂಡ್ಯದ ಶಶಿಕಿರಣ್ ಕನ್ವೆನ್ಷನ್ ಹಾಲ್‌ನಲ್ಲಿ ವಾಸ್ತವ್ಯ ಹೂಡಲಿದೆ. ಆಗಸ್ಟ್ 7ರಂದು ಬೆಳಗ್ಗೆ ಮಂಡ್ಯ ಶಶಿಕಿರಣ್ ಕನ್ವೆನ್ಷನ್ ಹಾಲ್ ಬಳಿ ಬಾರುಕೋಲು ಬೀಸುವ ಮೂಲಕ ಪಾದಯಾತ್ರೆಗೆ ಚಾಲನೆ ದೊರೆಯಲಿದ್ದು 16 ಕಿ.ಮೀ. ಕ್ರಮಿಸಿ ತೂಬಿನಕೆರೆಯ ಕೈಗಾರಿಕಾ ಪ್ರದೇಶದ ರೈಟ್ ಓ ಕಾಫಿ ಕೆಫೆಯಲ್ಲಿ ವಾಸ್ತವ್ಯ, ಆಗಸ್ಟ್ 8ರಂದು ಅಲ್ಲಿಂದ ಶಂಖ ಊದುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತಿದ್ದು, ಶ್ರೀರಂಗಪಟ್ಟಣದ ಮಂಜುನಾಥ ಕಲ್ಯಾಣ ಮಂಟಪಕ್ಕೆ ತಲುಪಲಿದೆ. ಆಗಸ್ಟ್ 9ರಂದು ಅಲ್ಲಿ ಮಹಿಳೆಯರು ಒನಕೆ ಹಿಡಿದು ಪಾದಯಾತ್ರೆ ತಂಡಕ್ಕೆ ಸ್ವಾಗತ ನೀಡಲಿದ್ದರೆ. ಆಗಸ್ಟ್ 10ರಂದು ಮೈಸೂರಿನಲ್ಲಿ ಬೃಹತ್ ಸಮಾರೋಪ ಸಮಾವೇಶ ಏರ್ಪಡಿಸಲಾಗಿದೆ.

## ಮನೆ ನಿರ್ಮಿಸಿಕೊಡುವ ಭರವಸೆ

ಜಂಟಿ ಸಮೀಕ್ಷೆ ನಡೆಸಲು ಸೂಚಿಸಲಾಗಿದೆ. 2708 ವಿದ್ಯುತ್ ಕಂಬಗಳು ಬಿದ್ದು ಹೋಗಿದ್ದು, 150 ಕಂಬಗಳನ್ನು ಹೊರತುಪಡಿಸಿ ಎಲ್ಲಾ ಕಂಬಗಳನ್ನು ಬದಲಾಯಿಸಲಾಗಿದೆ. ಹಾಳಾಗಿದ್ದ 47 ಟ್ರಾನ್ಸ್‌ಫಾರ್ಮರ್‌ಗಳನ್ನೂ ದುರಸ್ತಿಪಡಿಸಲಾಗಿದೆ ಎಂದು ಹೇಳಿದರು.

344 ಕಿ.ಮಿ. ಉದ್ದದ ಲೋಕೋಪಯೋಗಿ, ಜಿಲ್ಲಾ ಪಂಚಾಯಿತಿ ರಸ್ತೆಗಳು ಹಾನಿಗೀಡಾಗಿವೆ. ಇವೆಲ್ಲವನ್ನೂ ಆದ್ಯತೆ ಮೇಲೆ ಸರಿಪಡಿಸಲು ಸೂಚಿಸಲಾಗಿದೆ. ಈ ಬಾರಿ ವಾಡಿಕೆಗಿಂತ ಶೇ.50ರಷ್ಟು ಹೆಚ್ಚು ಮಳೆಯಾಗಿದೆ. ಮುಂಜಾಗ್ರತಾ ಕ್ರಮಗಳ ಜೊತೆಗೆ ಪರಿಹಾರ ಕಾರ್ಯಗಳನ್ನು ತುರ್ತಾಗಿ ನಡೆಸಲಾಗುತ್ತಿದೆ. ಜಿಲ್ಲಾಧಿಕಾರಿ ಕಚೇರಿಯ ಭೂ ಕುಸಿತದ ದುರಸ್ತಿ ಕಾರ್ಯವನ್ನು ಡಿಸೆಂಬರ್ ಒಳಗೆ ಪೂರ್ಣಗೊಳಿಸಲು ಲೋಕೋಪಯೋಗಿ ಇಲಾಖೆ ಹಿರಿಯ ಇಂಜಿನಿಯರ್‌ಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಸುದ್ದಿಗಾರರ ಪ್ರಶ್ನೆ ಒಂದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಶಿರಾಡಿ ಘಾಟಿಗೆ ಭೇಟಿ ನೀಡಿ, ಅನಾಹುತ ಪರಿಶೀಲನೆ ನಡೆಸುತ್ತೇನೆ. ಬಳಿ ಈ ಕುರಿತು ಕೇಂದ್ರ ಸರ್ಕಾರದ ಜೊತೆಯಲ್ಲೂ ಚರ್ಚಿಸುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು, ಶಾಸಕರಾದ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ಡಾ.ಮಂತರ್ ಗೌಡ, ಮಾಜಿ ಸಚಿವ ಎಂ.ಸಿ.ನಾಣಯ್ಯ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪ ಅಮರನಾಥ್, ವಿಧಾನ ಪರಿಷತ್ ಮಾಜಿ ಸದಸ್ಯೆ ವೀಣಾ ಅಚ್ಚಯ್ಯ, ಕಾಂಗ್ರೆಸ್ ಮುಖಂಡ ಹೆಚ್.ಎಸ್.ಚಂದ್ರಮೌಳಿ ಮತ್ತಿತರರು ಉಪಸ್ಥಿತರಿದ್ದರು.

## ಬಿಜೆಪಿ, ಜೆಡಿಎಸ್ ಕೈಗೊಂಬೆ

ಮುಡಾ ಹಗರಣದಲ್ಲಿ ನನ್ನ ಯಾವುದೇ ಪಾತ್ರವಿಲ್ಲದಿದ್ದರೂ ಅನಗತ್ಯವಾಗಿ ಶೋಕಾಸ್ ನೋಟಿಸ್ ಜಾರಿ ಮಾಡಿದ್ದಾರೆ ಎಂದು ಆಪಾದಿಸಿದರು. ಮುಡಾ ಹಗರಣದ ಬಗ್ಗೆ ಜುಲೈ 14 ರಂದೇ ನ್ಯಾಯಾಂಗ ತನಿಖೆಗೆ ಆದೇಶಿಸಲಾಗಿದೆ. ಕಾನೂನು ಬಾಹಿರ ಕ್ರಮಗಳಾಗಿದೆಯೇ, ತಪ್ಪುಗಳಾಗಿದೆಯೇ ಎಂದು ಆಯೋಗ ವರದಿ ನೀಡಬೇಕಲ್ಲವೆ. ವರದಿ ಬರುವ ಮುಂಚೆಯೇ ತರಾತುರಿಯಲ್ಲಿ ಶೋಕಾಸ್ ನೋಟಿಸ್ ಜಾರಿ ಮಾಡುವ ಉದ್ದೇಶವೇನಿತ್ತು ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

## ಮುಡಾ, ವಾಲ್ಮೀಕಿ ಹಗರಣ ತಾರ್ಕಿಕ ಅಂತ್ಯಕ್ಕಾಗಿ ಪಾದಯಾತ್ರೆ
### ನಿಖಿಲ್ ಕುಮಾರಸ್ವಾಮಿ

ಮೈಸೂರು,ಆ.2(ಎಂಟಿವೈ)– ಮುಡಾ ಮತ್ತು ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಬಿಜೆಪಿಯೊಂದಿಗೆ ಜೆಡಿಎಸ್ ಬೆಂಗಳೂರಿಂದ ಮೈಸೂರಿಗೆ ಪಾದಯಾತ್ರೆಯಲ್ಲಿ ಪಾಲ್ಗೊಳ್ಳಲಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ.



ಆಷಾಡ ಮಾಸದ ಶುಕ್ರವಾರದ ಅಂಗವಾಗಿ ಚಾಮುಂಡಿಬೆಟ್ಟಕ್ಕೆ ಆಗಮಿಸಿ ದೇವಿ ದರ್ಶನ ಪಡೆದ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ರೈತರು ಕೃಷಿ ಚಟುವಟಿಕೆಯಲ್ಲಿ ತೊಡಗಿದ್ದರಿಂದ ಪಾದಯಾತ್ರೆ ಮುಂದೂಡಲು ಮನವಿ ಮಾಡಲಾಗಿತ್ತು. ಆದರೆ ಬಿಜೆಪಿ ವರಿಷ್ಠರು ಪಾದಯಾತ್ರೆ ಮುಂದೂಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಪಾದಯಾತ್ರೆಯಲ್ಲಿ ಪಾಲ್ಗೊಳ್ಳಲು ನಾವು ಒಪ್ಪಿದ್ದೇವೆ. ನಮ್ಮ ಪಾದಯಾತ್ರೆ ಡೈವರ್ಟ್ ಮಾಡಲು ಕಾಂಗ್ರೆಸ್‌ನಿಂದ ಪರ್ಯಾಯ ಸಮಾವೇಶಗಳನ್ನು ಮಾಡುತ್ತಿದ್ದಾರೆ ಎಂದರು.

ರಾಮನಗರದಲ್ಲಿ ಹೆಚ್‌ಡಿಕೆ ಆಸ್ತಿ ಕುರಿತು ಡಿಸಿಎಂ ಡಿ.ಕೆ.ಶಿವಕುಮಾರ್ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ನಿಖಿಲ್, ರಾಮನಗರದಲ್ಲಿ ನಮ್ಮ ಆಸ್ತಿ ಎಷ್ಟಿದೆ ಎನ್ನುವುದು ಜಗಜ್ಜಾಹೀರಾಗಿದೆ. 1985ರಲ್ಲಿ ಕುಮಾರ ಸ್ವಾಮಿ ಕೇತಗನಹಳ್ಳಿ ಬಳಿ ಜಮೀನು ಖರೀದಿಸಿದ್ದಾರೆ. ಸಿನಿಮಾ ವಿತರಣೆಯಲ್ಲಿ ಬಂದಿದ್ದ ಹಣದಲ್ಲಿ ಜಮೀನು ಖರೀದಿ ಮಾಡಿದ್ದಾರೆ. ಇದನ್ನು ಹೊರತು ಪಡಿಸಿ ರಾಮನಗರದಲ್ಲಿ ಬೇರೆ ಯಾವುದೇ ಆಸ್ತಿ ಹೊಂದಿಲ್ಲ. ಮೈತ್ರಿಗೆ ಜನರ ಬೆಂಬಲ ಸಿಕ್ಕಿದೆ. ಅದೇ ಕಾರಣಕ್ಕೆ ಲೋಕಸಭಾ ಚುನಾವಣೆಯಲ್ಲಿ ನಮಗೆ ಹೆಚ್ಚು ಸ್ಥಾನ ನೀಡಿದ್ದಾರೆ. ಕಾಂಗ್ರೆಸ್ ಸರ್ಕಾರ ಕಿತ್ತೊಗೆಯಲು ಮೈತ್ರಿ ಹೋರಾಟ ನಿರಂತರವಾಗಿರುತ್ತದೆ.

### ಪರಿಶಿಷ್ಟರಿಗೆ ಒಳ ಮೀಸಲಾತಿ: ಸುಪ್ರೀಂಕೋರ್ಟ್ ಆದೇಶಕ್ಕೆ ಸಾಮಾಜಿಕ ನ್ಯಾಯಪರ ವೇದಿಕೆ ಸ್ವಾಗತ
## ತುರ್ತು ಸಂಪುಟ ಸಭೆ ಕರೆದು ಒಳಮೀಸಲಾತಿ ಜಾರಿಗೆ ವಕೀಲ ಅರುಣ್‌ಕುಮಾರ್ ಒತ್ತಾಯ

ಮೈಸೂರು, ಆ.2(ಜಿಎ)–ಆಂಧ್ರ ಪ್ರದೇಶ ಸರ್ಕಾರ ಪರಿಶಿಷ್ಟ ಜಾತಿಗಳನ್ನು ಒಳ ವರ್ಗೀಕರಿಸಿ(ಒಳ ಮೀಸಲಾತಿ) ನೀಡಲಾಗಿದ್ದ ಮೀಸಲಾತಿ ಪ್ರಶ್ನಿಸಿದ್ದ ಪ್ರಕರಣವನ್ನು ಸರ್ವೋಚ್ಚ ನ್ಯಾಯಾಲಯದ ಏಳು ನ್ಯಾಯಾಮೂರ್ತಿಗಳ ಪೀಠ ವಜಾಗೊಳಿಸಿ, ಒಳ ಮೀಸಲಾತಿ ಜಾರಿಗೊಳಿಸಬಹುದು ಎಂದು ನೀಡಿರುವ ಐತಿಹಾಸಿಕ ತೀರ್ಪನ್ನು ಸಾಮಾಜಿಕ ನ್ಯಾಯಪರ ವೇದಿಕೆ ಸ್ವಾಗತಿಸುತ್ತದೆ ಎಂದು ವೇದಿಕೆಯ ಹಿರಿಯ ವಕೀಲ ಎಸ್.ಅರುಣ್‌ಕುಮಾರ್ ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಹಿರಿಯ ವಕೀಲ ಅರುಣ್ ಕುಮಾರ್ ಮಾತನಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮತ್ತು ಸಿದ್ದರಾಮಯ್ಯ ಅವರ ಸರ್ಕಾರ ಸಂಪುಟದಲ್ಲಿ ನಿರ್ಧಾರ ಕೈಗೊಂಡು ಒಳ ಮೀಸಲಾತಿ ನೀಡಬಹುದೆಂದು ಕೇಂದ್ರಕ್ಕೆ ಶಿಫಾರಸು ಮಾಡಿವೆ. ಹೀಗಾಗಿ ಸಿಎಂ ಸಿದ್ದರಾಮಯ್ಯ ಅವರು ತುರ್ತಾಗಿ ಸಂಪುಟ ಸಭೆ ಕರೆದು ಒಳ ಮೀಸಲಾತಿ ಜಾರಿಗೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಆಂಧ್ರಪ್ರದೇಶ ಸರ್ಕಾರ ಒಳ ವರ್ಗೀಕರಣ ಕ್ರಮ ಕೈಗೊಳ್ಳಲು ಸಾಕಷ್ಟು ಹಿನ್ನೆಲೆಯೂ ಇದ್ದು, 1975ರಲ್ಲಿ ಪಂಜಾಬ್ ಹಾಗೂ 1994ರಲ್ಲಿ ಹರಿಯಾಣ ರಾಜ್ಯಗಳು ಈ ದಿಸೆಯಲ್ಲಿ ಪ್ರಯತ್ನಿಸಿ ವಿಫಲವಾಗಿವೆ. ತದನಂತರ ಆಂಧ್ರ ಪ್ರದೇಶದಲ್ಲಿ ಮಾದಿಗ ಸಮುದಾಯ ಮಂದಕೃಷ್ಣ ಅವರ ನೇತೃತ್ವದಲ್ಲಿ ಪರಿಶಿಷ್ಟ ಜಾತಿಗಳನ್ನು ಒಳ ವರ್ಗೀಕರಣಕ್ಕೆ ಒಳಪಡಿಸಿ, ಪ್ರತ್ಯೇಕವಾಗಿ ಮೀಸಲಾತಿ ಕೋಟಾ ನೀಡಬೇಕೆಂದೂ ಹಮ್ಮಿಕೊಂಡ ಪ್ರಬಲ ಹೋರಾಟದ ನಿಮಿತ್ತ, ಅಂದು ಅಧಿಕಾರದಲ್ಲಿದ್ದ ಚಂದ್ರಬಾಬು ನಾಯ್ಡು ಸರ್ಕಾರವು ನ್ಯಾ.ರಾಮಚಂದ್ರರಾಜು ಆಯೋಗ ನೇಮಿಸುತ್ತದೆ(1996), ಆಯೋಗ ಪರಿಶಿಷ್ಟ ಜಾತಿಗಳಲ್ಲಿಯೇ ಇರುವ ಉಪಜಾತಿಗಳು, ಶಿಕ್ಷಣ ಮತ್ತು ಉದ್ಯೋಗ ಪಡೆಯುವುದರಲ್ಲಿ ಚಾರಿತ್ರಿಕವಾಗಿ ಹಿನ್ನಡೆ ಅನುಭವಿಸಿವೆ. ಶಿಕ್ಷಣದಲ್ಲಿ ಮತ್ತು ಸರ್ಕಾರಿ ಉದ್ಯೋಗದಲ್ಲಿ ಸಾಕಷ್ಟ ಮತ್ತು ಸಮಾನ ಪ್ರಾತಿನಿಧ್ಯ ಗಳಿಸಲು ಶಕ್ತವಾಗುವ ನಿಟ್ಟಿನಲ್ಲಿ, ಅವುಗಳನ್ನು 1. ಮಾದಿಗ, 2. ಮಾಲ, 3. ಆದಿ ಆಂಧ್ರ ಹಾಗೂ 4. ರಲ್ಲಿ (ಮೆಹತಾರ್) ಎಂದು 4 ಭಾಗಗಳಾಗಿ ವಿಂಗಡಿಸಿ, ಕ್ರಮವಾಗಿ ಶೇ.6, 6, 1 ಮತ್ತು 1 ರಷ್ಟು ಮೀಸಲಾತಿ ಕೋಟಾ ನಿಗದಿ ಮಾಡಿ, ವರದಿಯನ್ನು ಸರಕಾರಕ್ಕೆ 1997ರಲ್ಲಿ ಸಲ್ಲಿಸುತ್ತದೆ.

ಆಂಧ್ರಪ್ರದೇಶ ಸರ್ಕಾರ ವರದಿ ಪಡೆದ ಕೆಲವು ದಿನಗಳಲ್ಲೇ ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ಕಲ್ಪಿಸಿ ಆದೇಶವನ್ನೇನೋ ಹೊರಡಿಸುತ್ತದೆ. ಆದರೇ, ಉಚ್ಚ ನ್ಯಾಯಾಲಯದಲ್ಲಿ ಆದೇಶವನ್ನು ಪ್ರಶ್ನಿಸಿದಾಗ ನ್ಯಾಯಾಲಯ ಒಳ ಮೀಸಲಾತಿಯ ಆದೇಶವನ್ನು ಜಾರಿಗೆ ಕೊಡುವ ಮುನ್ನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರಾಷ್ಟ್ರೀಯ ಆಯೋಗದೊಡನೆ ಸಮಾಲೋಚಿಸಿರುವುದಿಲ್ಲ ಎಂದು ಆದೇಶವನ್ನು ರದ್ದು ಗೊಳಿಸುತ್ತದೆ.

ಸರ್ಕಾರ ಈ ಮಧ್ಯೆ ಒಳ ಮೀಸಲಾತಿಗೆ ಸಂಬಂಧಿಸಿದಂತೆ ರಾಷ್ಟ್ರಪತಿಗಳಿಂದ ಸುಗ್ರೀವಾಜ್ಞೆಯೊಂದಕ್ಕೆ ಒಪ್ಪಿಗೆ ಪಡೆದುಕೊಳ್ಳುತ್ತದೆ. ಅದನ್ನೂ ಕೂಡ 'ಮಾಲಾ ಮಹಾನಾಡು' ಎಂಬ ಒಳ ಮೀಸಲಾತಿ ವಿರೋಧಿ ಸಂಸ್ಥೆಯೊಂದು ನ್ಯಾಯಾಲಯದಲ್ಲಿ ರಿಟ್ ದಾಖಲಿಸುತ್ತದೆ. ಈ ನಡುವೆ ಸರ್ಕಾರ ರಿಟ್ ವಿಚಾರಣೆಗೆ ಬಾಕಿ ಇರುವಾಗಲೇ, ಕಾಯ್ದೆಯೊಂದನ್ನು (ANDRA PRADESH SCHEDULED CASTES, rationalization of reservation, Act 3000) ಜಾರಿಗೆ ತರುತ್ತದೆ. ಉಚ್ಚ ನ್ಯಾಯಾಲಯದಲ್ಲಿ ಅದೂ ಸಹ ಪ್ರಶ್ನಿತವಾಗುತ್ತದೆ. ಆಂಧ್ರಪ್ರದೇಶದ ಉಚ್ಚ ನ್ಯಾಯಾಲಯದ ನ್ಯಾಯಾಪೀಠ 'ಮಾಲಾ ಮಹಾನಾಡು' ಸಂಸ್ಥೆ ಸಲ್ಲಿಸಿದ್ದ ರಿಟ್‌ನ್ನು ವಜಾಗೊಳಿಸಿ ಆದೇಶ ನೀಡುತ್ತದೆ.

ಹೀಗೆ ಸುದೀರ್ಘ 50 ವರ್ಷಗಳ ಹೋರಾಟಗಳ ನಂತರ ಆ.1ರಂದು ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರಾದ ಡಿ.ವೈ. ಚಂದ್ರಚೂಡ ಅವರ ನೇತೃತ್ವದ ಏಳು ಮಂದಿ ನ್ಯಾಯಾಮೂರ್ತಿಗಳ ಒಳಗೊಂಡ ಸಂವಿಧಾನ ಪೀಠ ಒಳ ಮೀಸಲಾತಿ ನೀಡಬಹುದಾಗಿದೆ ಎಂದು ರಾಜ್ಯಗಳಿಗೆ ಆದೇಶಿಸಿ, ಪರಮಾಧಿಕಾರಿ ನೀಡಿದೆ. ಇದೇ ವೇಳೆ ರಾಜ್ಯದಲ್ಲಿ ಈ ಕುರಿತ ವೈಜ್ಞಾನಿಕ ಅಧ್ಯಯನದ ವರದಿ ಇದ್ದು, ಸರ್ಕಾರ ಕೂಡಲೇ ಜಾರಿಗೊಳಿಸಬೇಕೆಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಹಿರಿಯ ವಕೀಲರಾದ ದಾಸಯ್ಯ, ಶಿವಕುಮಾರ್, ರಾಜೇಂದ್ರ, ರಾಜು, ಮಧು ಉಪಸ್ಥಿತರಿದ್ದರು.

## ಸಿದ್ದರಾಮಯ್ಯ ಅಭಿಮಾನಿಗಳು, ಶೋಷಿತ ಸಮುದಾಯಗಳ ಮುಖಂಡರ ಸಭೆ ಇಂದು

ಮೈಸೂರು, ಆ.2– ಹಿಂದುಳಿದ ದೀನ ದಲಿತರ ಮತ್ತು ಅಲ್ಪಸಂಖ್ಯಾತರ ನಾಯಕ ಮುಖ್ಯಮಂತ್ರಿ ಸಿದ್ದ ರಾಮಯ್ಯರವರ ವಿರುದ್ಧ ಕುತಂತ್ರ ಮತ್ತು ಸುಳ್ಳು ಆರೋಪ ಮಾಡುತ್ತಿರುವ ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ಮೈಸೂರು ನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳುವ ಸಲುವಾಗಿ ಆ.3 ರಂದು ಮಧ್ಯಾಹ್ನ 3 ಗಂಟೆಗೆ ಮೈಸೂರಿನ ಸಿದ್ಧಾರ್ಥ ನಗರದಲ್ಲಿರುವ ಕನಕ ಭವನದಲ್ಲಿ ಮೈಸೂರಿನ ಶೋಷಿತ ಸಮುದಾಯಗಳ ಮುಖಂಡರು ಮತ್ತು ಸಿದ್ದರಾಮಯ್ಯ ಅವರ ಅಭಿಮಾನಿಗಳ ಸಭೆ ಕರೆಯಲಾಗಿದ್ದು ಈ ಸಭೆಗೆ ಮೈಸೂರು ಜಿಲ್ಲೆಯ ಶೋಷಿತ ಸಮು ದಾಯದ ಮುಖಂಡರುಗಳು ಮತ್ತು ಸಿದ್ದರಾಮಯ್ಯರವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅಮೂಲ್ಯವಾದ ಸಲಹೆ ಸೂಚನೆ ನೀಡಬೇಕೆಂದು ಶೋಷಿತ ಸಮುದಾಯದ ಮುಖಂಡ ಬಿ.ಸುಬ್ರಹ್ಮಣ್ಯ ಕೋರಿದ್ದಾರೆ.

### ಗಾಂಧಿ ಶಿಲ್ಪ ಬಜಾರ್‌ಗೆ ಶಾಸಕ ಜಿ.ಟಿ.ದೇವೇಗೌಡ ಚಾಲನೆ




ಮೈಸೂರು ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ ಹಸ್ತಶಿಲ್ಪ ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡರು ಚಾಲನೆ ನೀಡಿದರು. ಈ ವೇಳೆ ಶಂಕರಪ್ಪ, ಬಿ.ಕೆ. ಶಿವಕುಮಾರ್, ಮೊರಬದ ಮಲ್ಲಿಕಾರ್ಜುನ, ಕೆಎಲ್ ರೇವಣ್ಣ ಸ್ವಾಮಿ, ರಾಜಶೇಖರ್, ಕೆ.ಎಸ್. ಸುನಿಲ್‌ಕುಮಾರ್ ಉಪಸ್ಥಿತರಿದ್ದರು.

## ಎಸ್‌ಸಿ, ಎಸ್‌ಟಿ ಒಳ ಮೀಸಲಾತಿ ತೀರ್ಪು ಸ್ವಾಗತಾರ್ಹ: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಆ.2– ಪರಿಶಿಷ್ಟ ಜಾತಿ ಮತ್ತು ಪಂಗಡಗಳಲ್ಲಿ ಅತೀ ಹಿಂದುಳಿದವರನ್ನು ಗುರುತಿಸಿ ಒಳಮೀಸಲಾತಿ ನೀಡುವ ರಾಜ್ಯ ಸರ್ಕಾರಗಳ ಅಧಿಕಾರವನ್ನು ಎತ್ತಿ ಹಿಡಿದು ಸುಪ್ರೀಂಕೋರ್ಟ್ ನೀಡಿರುವ ತೀರ್ಪು ಐತಿಹಾಸಿಕವಾದುದ್ದಾಗಿದ್ದು, ನ್ಯಾಯಾಲಯದ ಈ ತೀರ್ಪನ್ನು ಮುಕ್ತವಾಗಿ ಸ್ವಾಗತಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಮುಖ್ಯಮಂತ್ರಿ, ಸುಪ್ರೀಂ ಕೋರ್ಟ್ ತೀರ್ಪಿನಿಂದಾಗಿ ಒಳಮೀಸಲಾತಿ ಅನುಷ್ಠಾನದ ಹಾದಿಯಲ್ಲಿನ ಮುಖ್ಯ ಅಡ್ಡಿಯೊಂದು ನಿವಾರಣೆಯಾಗಿದೆ. ತೀರ್ಪಿನಲ್ಲಿರುವ ವಿವಾದಾತ್ಮಕ ಕೆನೆಪದರದ ಬಗೆಗಿನ ಅಂಶವೂ ಸೇರಿದಂತೆ ಇತರ ವಿಷಯಗಳ ಬಗ್ಗೆ ಪರಿಶಿಷ್ಟ ಜಾತಿಯ ನಾಯಕರು ಮತ್ತು ಕಾನೂನು ತಜ್ಞರ ಜೊತೆ ಸಮಾಲೋಚನೆ ನಡೆಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.



ಪರಿಶಿಷ್ಟ ಜಾತಿಯೊಳಗೆ ಒಳಮೀಸಲಾತಿ ಕಲ್ಪಿಸುವ ಬಗ್ಗೆ ಕಾಂಗ್ರೆಸ್ ಪಕ್ಷ ಬದ್ಧವಾಗಿದೆ. ಹಿಂದೆ ಕಾಂಗ್ರೆಸ್ ಪಕ್ಷದ ಸರ್ಕಾರವೇ ರಚಿಸಿದ್ದ ನ್ಯಾ.ಎ.ಜೆ.ಸದಾಶಿವ ಅವರ ಅಧ್ಯಕ್ಷತೆಯ ಆಯೋಗದ ವರದಿಯನ್ನು ಅನುಷ್ಠಾನಗೊಳಿಸುವುದಾಗಿ ನಾವು ಕಳೆದ ವಿಧಾನಸಭಾ ಚುನಾವಣೆಯಲ್ಲಿನ ಪಕ್ಷದ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಗೆ ಸರ್ಕಾರ ಬದ್ಧವಾಗಿದೆ ಎಂದಿದ್ದಾರೆ. ಈ ನಡುವೆ ಕಳೆದ ವಿಧಾನಸಭಾ ಚುನಾವಣೆಯ ಪೂರ್ವದಲ್ಲಿ ರಾಜ್ಯದ ಬಿಜೆಪಿ ಸರ್ಕಾರ ಒಳಮೀಸಲಾತಿ ಬಗ್ಗೆ ಅವಸರದಲ್ಲಿ ತೀರ್ಮಾನ ಕೈಗೊಂಡು ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಟ್ಟಿತ್ತು. ಪರಿಶಿಷ್ಟ ಜಾತಿಯೊಳಗಿನ ಮೀಸಲಾತಿಯನ್ನು ಸಂವಿಧಾನ ತಿದ್ದುಪಡಿಯ ಮೂಲಕ ಅನುಷ್ಠಾನಗೊಳಿಸಬಹುದು ಎಂದು ಕೇಂದ್ರ ಸರ್ಕಾರವೇ ರಚಿಸಿದ್ದ ಉಷಾ ಮೆಹ್ರಾ ಸಮಿತಿ ಸ್ಪಷ್ಟವಾಗಿ ತಿಳಿಸಿದ್ದರೂ ಕೇಂದ್ರ ಸರ್ಕಾರ ಇಲ್ಲಿಯವರೆಗೆ ತೀರ್ಮಾನ ಕೈಗೊಳ್ಳದೆ ಮೂಲೆಗೆ ಸರಿಸಿತ್ತು ಎಂದು ಟೀಕಿಸಿದ್ದಾರೆ.

ಈಗಿನ ಸುಪ್ರೀಂಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ನ್ಯಾ.ಎ.ಜೆ.ಸದಾಶಿವ ಆಯೋಗದ ಶಿಫಾರಸುಗಳನ್ನು ಕೂಲಂಕುಷವಾಗಿ ಅಧ್ಯಯನ ನಡೆಸಿ, ಅಗತ್ಯ ಬಿದ್ದರೆ ಇದಕ್ಕೆ ಸಂಬಂಧಿಸಿದಂತೆ ಇತ್ತೀಚಿನ ಬೆಳವಣಿಗೆಗಳನ್ನು ಪರಿಗಣನೆಗೆ ತೆಗೆದುಕೊಂಡು ಸಮಾಲೋಚನೆ–ಸಂಧಾನದ ಮೂಲಕ ಒಳಮೀಸಲಾತಿ ಬಗ್ಗೆ ಸ್ಪಷ್ಟವಾದ ನಿರ್ಧಾರವನ್ನು ರಾಜ್ಯ ಸರ್ಕಾರ ಕೈಗೊಳ್ಳಲಿದೆ.

## ಮೈಸೂರು ರಿಂಗ್ ರಸ್ತೆಗೆ ಬಸ್ ಸೌಕರ್ಯ

ಮೈಸೂರು, ಆ.2(ಆರ್‌ಕೆ)–ಮೈಸೂರು ನಗರ ದಾದ್ಯಂತ ಎಲ್ಲಾ ಬಡಾವಣೆ ಹಾಗೂ ಸುತ್ತಲಿನ ಗ್ರಾಮಗಳಿಗೆ ಸಂಪರ್ಕ ಸೇವೆ ಒದಗಿಸುತ್ತಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್ ಆರ್‌ಟಿಸಿ) ಮೈಸೂರು ನಗರ ವಿಭಾಗವು ಸೇವೆಯನ್ನು ಹೊರ ವರ್ತುಲ ರಸ್ತೆಗೂ ವಿಸ್ತರಿಸಲು ಮುಂದಾಗಿದೆ.

ಸಾರ್ವಜನಿಕರ ಬೇಡಿಕೆಗಳನ್ನು ಖಾಸಗಿ ಟ್ಯಾಕ್ಸಿಗಳು ಪೂರೈಸುತ್ತಿರುವುದನ್ನು ಮನಗಂಡು ಕೆಎಸ್‌ಆರ್‌ಟಿಸಿ ನಗರ ಘಟಕವು ರಿಂಗ್ ರಸ್ತೆಯಲ್ಲಿ ಸಂಚರಿಸಲು 16 ಬಸ್‌ಗಳನ್ನು ಒದಗಿಸಲು ಸಿದ್ಧತೆ ನಡೆಸುತ್ತಿದೆ. 42 ಕಿ.ಮೀ. ದೂರ ವಿರುವ ಹೊರ ವರ್ತುಲ ರಸ್ತೆಯ ಮಣಿಪಾಲ್ ಆಸ್ಪತ್ರೆ ಜಂಕ್ಷನ್, ಕೆಆರ್‌ಎಸ್ ರಸ್ತೆಯ ರಾಯಲ್ ಇನ್ ಹೋಟೆಲ್ ಜಂಕ್ಷನ್, ಹೆಬ್ಬಾಳಿನ ಭಾರತ್ ಕ್ಯಾನ್ಸರ್ ಆಸ್ಪತ್ರೆ ಸರ್ಕಲ್, ಶೇಷಾದ್ರಿಪುರಂ ಕಾಲೇಜು, ಹಿನಕಲ್ ಫ್ಲೈ ಓವರ್, ವಿಜಯನಗರ 4ನೇ ಹಂತಕ್ಕೆ ಸಂಪರ್ಕ ಕಲ್ಪಿಸುವ ಜಂಕ್ಷನ್, ರಾಜರಾಜೇಶ್ವರಿ ನಗರ, ದಟ್ಟಗಳ್ಳಿ, ಆರ್.ಟಿ.ನಗರ ಜಂಕ್ಷನ್, ಶ್ರೀರಾಂಪುರ ರಿಂಗ್ ರೋಡ್ ಜಂಕ್ಷನ್, ಜೆ.ಪಿ.ನಗರ, ನಂಜನ ಗೂಡು ರಸ್ತೆ, ಎಪಿಎಂಸಿ ಮಾರುಕಟ್ಟೆ, ಉತ್ತನಹಳ್ಳಿ ಜಂಕ್ಷನ್, ತಿ.ನರಸೀಪುರ ರಸ್ತೆ, ವಿಟಿಯು ಕಾಲೇಜು, ದೇವೇಗೌಡ ಸರ್ಕಲ್, ಹಂಚ್ಯಾ–ಸಾತಗಳ್ಳಿ, ಮಹ ದೇವಪುರ ರಸ್ತೆ, ಕಾಮನಕೆರೆ ಹುಂಡಿಗೆ ಹೋಗುವ ರಸ್ತೆ ಜಂಕ್ಷನ್, ನಾರಾಯಣ ಹೃದಯಾಲಯ, ಆರ್‌ಟಿಓ ಪೂರ್ವ ಕಚೇರಿ ಹಾಗೂ ಹಳೇ ಕೆಸರೆಗೆ ಸಂಪರ್ಕ ಕಲ್ಪಿಸುವ ಸರ್ಕಲ್‌ಗಳಿಗೆ ನಗರ ಸಾರಿಗೆ ಬಸ್‌ಗಳ ಸೇವೆ ಒದಗಿಸಲು ಸಾರಿಗೆ ಸಂಸ್ಥೆಯು ಮಾರ್ಗ (ರೂಟ್) ಗಳನ್ನು ಸಿದ್ಧಪಡಿಸುತ್ತಿದೆ. 16 ಬಸ್‌ಗಳು ಬೆಳಗ್ಗೆ 6ರಿಂದ ರಾತ್ರಿ 10 ಗಂಟೆವರೆಗೂ ರಿಂಗ್ ರಸ್ತೆ ಹಾಗೂ ಒಳ ಭಾಗದ ಬಡಾವಣೆಗಳಿಗೆ ಸಂಚರಿಸಿ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಸೇವೆಗಳನ್ನು ಒದಗಿಸಲಿವೆ.

## 25 ಮೀ ಪಿಸ್ತೂಲ್ ಸ್ಪರ್ಧೆ: ಮನು ಭಾಕರ್ ಫೈನಲ್‌ಗೆ




**ಪ್ಯಾರೀಸ್:** ಭಾರತದ ಶೂಟರ್ ಮನು ಭಾಕರ್ 25 ಮೀಟರ್ ಮಹಿಳೆಯರ ಪಿಸ್ತೂಲ್ ಸ್ಪರ್ಧೆಯಲ್ಲಿ ಅಮೋಘ ಪ್ರದರ್ಶನ ನೀಡುವ ಮೂಲಕ 590 ಅಂಕಗಳೊಂದಿಗೆ 2ನೇ ಸ್ಥಾನ ಪಡೆದು ಫೈನಲ್ ಪ್ರವೇಶಿಸಿದ್ದಾರೆ.

ಮನು ಭಾಕರ್ ಈಗಾಗಲೇ 2 ಕಂಚಿನ ಪದಕ ಗೆದ್ದಿದ್ದಾರೆ. ನಾಳೆ ಫೈನಲ್ ನಡೆಯಲಿದ್ದು, ಅಗ್ರ ಮೂರು ಸ್ಪರ್ಧಿಗಳಲ್ಲಿ ಸ್ಥಾನ ಪಡೆದರೆ ಮನು ಸತತ ಮೂರನೇ ಪದಕ ಸಾಧನೆ ಮಾಡುವರು. 25 ಮೀಟರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಭಾರತದ ಮತ್ತೋರ್ವ ಸ್ಪರ್ಧಿ ಇಶಾ ಸಿಂಗ್ ಒಟ್ಟು 581 ಅಂಕಗಳೊಂದಿಗೆ 18ನೇ ಸ್ಥಾನ ಗಿಟ್ಟಿಸಿಕೊಂಡರು.

ಮನು ಭಾಕರ್ ಈಗಾಗಲೇ 10 ಮೀಟರ್ ಏರ್ ಪಿಸ್ತೂಲ್ ವೈಯಕ್ತಿಕ ಮತ್ತು 10 ಮೀಟರ್ ಏರ್ ಪಿಸ್ತೂಲ್ ಮಿಕ್ಸೆಡ್ ತಂಡದಲ್ಲಿ 2 ಕಂಚಿನ ಪದಕ ಜಯಿಸಿದ್ದಾರೆ. ಒಂದೇ ಒಲಿಂಪಿಕ್‌ನಲ್ಲಿ 2 ಪದಕ ಪಡೆದ ದೇಶದ ಏಕೈಕ ಕ್ರೀಡಾಪಟು ಎಂಬ ಹೆಗ್ಗಳಿಕೆಗೆ ಮನು ಭಾಕರ್ ಭಾಜನರಾಗಿದ್ದಾರೆ.

## ಹಾಕಿ: 52 ವರ್ಷಗಳ ನಂತರ ಆಸೀಸ್ ವಿರುದ್ಧ ಭಾರತಕ್ಕೆ ಗೆಲುವು

**ಪ್ಯಾರಿಸ್:** ನಾಯಕ ಹರ್ಮನ್‌ಪ್ರೀತ್ ಸಿಂಗ್ ಅವರ ಡಬಲ್ ಗೋಲ್‌ಗಳಿಂದ ಭಾರತ ಪುರುಷರ ಹಾಕಿ ತಂಡ ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದ 'ಬಿ' ಗುಂಪಿನ ತನ್ನ ಅಂತಿಮ ಪಂದ್ಯದಲ್ಲಿ ಬಲಿಷ್ಠ ಆಸ್ಟ್ರೇಲಿಯಾ ವಿರುದ್ಧ 3–2 ಗೋಲ್‌ಗಳ ರೋಚಕ ಗೆಲುವು ದಾಖಲಿಸಿದೆ.




ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದಿರುವ ಭಾರತ ಈ ಬಾರಿ ಪದಕದ ಬಣ್ಣ ಬದಲಾಯಿಸುವ ಹಠದೊಂದಿಗೆ ನಾಕ್‌ಔಟ್ ಹಂತಕ್ಕೆ ತೇರ್ಗಡೆಯಾಗಿದೆ.

ಶುಕ್ರವಾರದ ಪಂದ್ಯಕ್ಕೂ ಮುನ್ನ ಕ್ವಾರ್ಟರ್ ಫೈನಲ್ ಸ್ಥಾನ ಖಚಿತಪಡಿಸಿಕೊಂಡಿದ್ದ ಭಾರತ, ಪಂದ್ಯದ ಬಹುತೇಕ ಸಮಯ ಪ್ರಾಬಲ್ಯ ಮೆರೆಯುವ ಮೂಲಕ ಕೂಕಬುರಾಸ್ ಖ್ಯಾತಿಯ ಆಸೀಸ್ ತಂಡವನ್ನು ಹಣಿಯಿತು. 1972ರ ಮ್ಯೂನಿಚ್ ಒಲಿಂಪಿಕ್ಸ್‌ನಲ್ಲಿ 3–1ರಲ್ಲಿ ಆಸ್ಟ್ರೇಲಿಯಾ ತಂಡವನ್ನು ಸೋಲಿಸಿದ್ದ ನಂತರ ಇದೇ ಮೊದಲ ಬಾರಿ ಜಯಭೇರಿ ಬಾರಿಸಿದೆ. ಪಂದ್ಯದ 4 ಕ್ವಾರ್ಟರ್‌ಗಳ ಪ್ರದರ್ಶನ ಭಾರತೀಯ ಆಟಗಾರರು ಸಂಘಟಿತ ಹೋರಾಟಕ್ಕೆ ಸಾಕ್ಷಿಯಂತಿತ್ತು. ಅದರಲ್ಲೂ ಇದು ಗುಂಪು ಹಂತದಲ್ಲೇ ಶ್ರೇಷ್ಠ ಪ್ರದರ್ಶನ ಎನಿಸಿತು.

ಭಾರತದ ಪರ ಅಭಿಷೇಕ್ (12ನೇ ನಿಮಿಷ) ಒಂದು ಗೋಲ್ ಗಳಿಸಿದರೆ, ನಾಯಕ ಹರ್ಮನ್‌ಪ್ರೀತ್ ಸಿಂಹ್ (13, 33ನೇ ನಿ.) ಎರಡು ಗೋಲ್ ದಾಖಲಿಸಿದರು. ಅಂತೆಯೇ ಆಸ್ಟ್ರೇಲಿಯಾ ಪರ ಟಾಮ್ ಕ್ರೇಗ್ (25ನೇ ನಿ.) ಮತ್ತು ಬ್ಲೇಕ್ ಗೋವರ್ಸ್ (55ನೇ ನಿ.)ತಲಾ ಒಂದೊಂದು ಗೋಲ್ ಸಿಡಿಸಿದರು. ಆಡಿದ 5 ಪಂದ್ಯಗಳ ಪೈಕಿ ಮೂರು ಗೆಲುವು, ತಲಾ 1 ಸೋಲು ಹಾಗೂ ಡ್ರಾ ಕಂಡಿರುವ ಭಾರತ ಒಟ್ಟಾರೆ 10 ಅಂಕಗಳನ್ನು ಹೊಂದಿದ್ದು, ಗುಂಪಿನ ಎರಡನೇ ತಂಡವಾಗಿ ಮುಂದಿನ ಹಂತಕ್ಕೆ ಮುನ್ನಡೆಯುವ ನಿರೀಕ್ಷೆಯಿದೆ. 4 ಪಂದ್ಯಗಳಿಂದ 12 ಅಂಕ ಹೊಂದಿರುವ ಕಳೆದ ಬಾರಿಯ ಚಾಂಪಿಯನ್ ಬೆಲ್ಜಿಯಂ ಪ್ರಸ್ತುತ ಗುಂಪಿನಲ್ಲಿ ಅಗ್ರಸ್ಥಾನ ಹೊಂದಿದೆ.

ಪಂದ್ಯದಲ್ಲಿ ಆಕ್ರಮಣಕಾರಿ ಆಟಕ್ಕೆ ಒತ್ತು ನೀಡಿದ ಭಾರತೀಯ ಆಟಗಾರರು ಎದುರಾಳಿ ತಂಡದ ರಕ್ಷಣಾ ವಿಭಾಗವನ್ನು ಕಾಡಿದರು. ಅಂತೆಯೇ ಕೂಕಬುರಿಸ್‌ನ ಗೋಲ್‌ಗಳಿಕೆಯ ಯತ್ನಗಳನ್ನು ತಡೆಯುವಲ್ಲಿ ಕೊನೆ ಒಲಿಂಪಿಕ್ಸ್ ಆಡುತ್ತಿರುವ ಅನುಭವಿ ಗೋಲ್ ಕೀಪರ್ ಪಿ.ಆರ್ ಶ್ರೀಜೇಶ್ ನಿರ್ಣಾಯಕ ಪಾತ್ರ ವಹಿಸಿದರು. 11ನೇ ನಿಮಿಷದಲ್ಲಿ ಟಾಮ್ ವಿಕ್ಹಾಮ್ ಅವರ ಗೋಲಿನ ಯತ್ನ ತಡೆದ ಶ್ರೀಜೇಶ್, ಎದುರಾಳಿ ಮುನ್ನಡೆಯ ಯತ್ನಕ್ಕೆ ಅಡ್ಡಿಯಾದರು. ಆದರೆ ಮರು ನಿಮಿಷದಲ್ಲೇ ಅಭಿಷೇಕ್, ಗೋಲ್ ಬಾರಿಸಿ ತಂಡಕ್ಕೆ ಆತ್ಮಸ್ಥೈರ್ಯ ತುಂಬಿದರು. ಈ ಸಂಭ್ರಮ ಮಾಸುವ ಮುನ್ನವೇ ನಾಯಕ ಹರ್ಮನ್‌ಪ್ರೀತ್ ತಂಡದ 2ನೇ ಗೋಲ್ ಗಳಿಸಿ ಸಂಪೂರ್ಣ ಮೇಲುಗೈಗೆ ಕಾರಣರಾದರು.

ದ್ವಿತೀಯ ಕ್ವಾರ್ಟರ್‌ನಲ್ಲಿ ಗೋಲ್ ಬಿಟ್ಟು ಕೊಟ್ಟರೂ 3ನೇ ಕ್ವಾರ್ಟರ್‌ನಲ್ಲಿ ಹರ್ಮನ್‌ಪ್ರೀತ್ ವೈಯಕ್ತಿಕ 2ನೇ ಗೋಲ್ ಗಳಿಸಿದ ಪರಿಣಾಮ ಭಾರತ 3–1ರಲ್ಲಿ ಹಿಡಿತ ಸಾಧಿಸಿತು. ಕೊನೆಯ ಕ್ವಾರ್ಟರ್‌ನಲ್ಲಿ ಆಸೀಸ್ 1 ಗೋಲ್ ಗಳಿಸಿ ಹಿನ್ನಡೆ ತಗ್ಗಿಸಿತಾದರೂ 5 ದಶಕಗಳ ನಂತರ ಭಾರತದ ವಿರುದ್ಧ ಸೋಲಿನಿಂದ ಪಾರಾಗಲು ಸಾಧ್ಯವಾಗಲಿಲ್ಲ. ಆಸೀಸ್ ಸೋತರೂ ಒಟ್ಟು 9 ಅಂಕಗಳೊಂದಿಗೆ ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಗಳಿಸಿದೆ.

## ಭಾರತ–ಶ್ರೀಲಂಕಾ ಪಂದ್ಯ ಡ್ರಾ



ಕೊಲಂಬೊ, ಆ.2– ಇಲ್ಲಿನ ಆರ್.ಪ್ರೇಮದಾಸ ಸ್ಟೇಡಿಯಂನಲ್ಲಿ ಕಡೇ ಹಂತದವರೆಗೂ ರೋಚಕತೆಯಿಂದ ಕೂಡಿದ್ದ ಭಾರತ ಮತ್ತು ಶ್ರೀಲಂಕಾ ನಡುವಿನ ಮೊದಲ ಏಕದಿನ ಪಂದ್ಯ 'ಟೈ'ನಲ್ಲಿ ಅಂತ್ಯ ಕಂಡಿತು. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ನಿಗಧಿತ 50 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 230 ರನ್ ಗಳಿಸಿತು. ಆರಂಭಿಕ ಆಟಗಾರ ಪಾತುಂ ನಿಸ್ಸಾಂಕ(56 ರನ್), ಯುವ ಆಲ್‌ರೌಂಡರ್ ದುನಿತ್ ವೆಲ್ಲಲಾಗೆ (67 ರನ್) ಅರ್ಧ ಶತಕ ದಾಖಲಿಸಿದರೆ, ಭಾರತ ಪರ ಅರ್ಷದೀಪ್ ಸಿಂಗ್, ಅಕ್ಷರ್ ಪಟೇಲ್ ತಲಾ 2 ವಿಕೆಟ್ ಪಡೆದರು.

231 ರನ್‌ಗಳ ಗುರಿ ಬೆನ್ನಟ್ಟಿದ ಭಾರತ 47.5 ಓವರ್‌ಗಳಲ್ಲಿ 230ಕ್ಕೆ ಆಲೌಟ್ ಆಯಿತು. ಭಾರತದ ಪರ ನಾಯಕ ರೋಹಿತ್ ಶರ್ಮಾ ಅರ್ಧಶತಕ (58) ಗಳಿಸಿದರೆ, ಶುಭಮನ ಗಿಲ್ 16, ವಿರಾಟ್ ಕೊಹ್ಲಿ 24, ಶ್ರೇಯಸ್ ಅಯ್ಯರ್ 23, ಕೆ.ಎಲ್. ರಾಹುಲ್ 31, ಅಕ್ಷರ್ ಪಟೇಲ್ 33 ಹಾಗೂ ಶಿವಂ ದುಬೆ 25 ರನ್ ಗಳಿಸಿದರು. ಲಂಕಾ ಪರ ನಾಯಕ ಚರಿತ್ ಅಸಲಂಕಾ, ವನಿಂದು ಹಸರಂಗ ತಲಾ 3 ವಿಕೆಟ್ ಪಡೆದರೆ, 2 ವಿಕೆಟ್ ಪಡೆದು ಬೌಲಿಂಗ್‌ನಲ್ಲೂ ಕಮಾಲ್ ಮಾಡಿದ ಆಲ್‌ರೌಂಡರ್ ದುನಿತ್ ವೆಲ್ಲಲಾಗೆ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಮೈಸೂರು ಮಿತ್ರ



# ಪ್ರವಾಹ ಸಮಸ್ಯೆಗಳ ಶಾಶ್ವತ ಪರಿಹಾರಕ್ಕೆ ಕ್ರಮ

## ಹೆದ್ದಾರಿಯಲ್ಲಿ ನೀರು ನಿಲ್ಲದಂತೆ ತಡೆಯಲು ಅಧಿಕಾರಿಗಳಿಗೆ ಸೂಚಿಸುವೆ: ಸಚಿವ ಕೃಷ್ಣ ಭೈರೇಗೌಡ

ನಂಜನಗೂಡು, ಆ.2– ಕಪಿಲಾ ನದಿ ಪ್ರಾವಹದಿಂದ ಮಲ್ಲನಮೂಲೆ ಮಠದ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ನೀರು ನಿಲ್ಲುವುದನ್ನು ತಪ್ಪಿಸಲು ಹೆದ್ದಾರಿ ಎತ್ತರಗೊಳಿಸುವಂತೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ತಿಳಿಸಿದರು.

ಕಪಿಲಾ ನದಿ ಪ್ರವಾಹದಿಂದ ಜಲಾವೃತವಾಗಿರುವ ತಗ್ಗು ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿ, ನಂತರ ನಗರದ ಸೀತಾರಾಮ ಕಲ್ಯಾಣ ಮಂಟಪದಲ್ಲಿ ತೆರೆದಿರುವ ಕಾಳಜಿ ಕೇಂದ್ರದಲ್ಲಿ ನಿರಾಶ್ರಿತರೊಂದಿಗೆ ಚರ್ಚೆ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿ ಅವರು ಮಾತನಾಡಿದರು.

ತಾಲೂಕಿನ ಮಲ್ಲನಮೂಲೆ ಮಠದ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ನೀರು ನಿಲ್ಲುವುದರಿಂದ ನಂಜನಗೂಡು, ಚಾಮರಾಜನಗರ, ತಮಿಳುನಾಡು ಹಾಗೂ ಕೇರಳ ಸಂಪರ್ಕ ಕಡಿತಗೊಳ್ಳಲಿದೆ. ಹೀಗಾಗಿ ಸ್ಥಳಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದ್ದೇನೆ. ಹೆದ್ದಾರಿಯಲ್ಲಿ ನೀರು ನಿಲ್ಲುವುದನ್ನು ತಪ್ಪಿಸುವ ಸಲುವಾಗಿ ಹೆದ್ದಾರಿ ಎತ್ತರಗೊಳಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಪತ್ರ ಬರೆಯಲಿದ್ದೇನೆ. ಅಲ್ಲದೇ ಕಪಿಲಾ ನದಿ ನೀರು ಚರಂಡಿ ಮೂಲಕ ತಗ್ಗು ಪ್ರದೇಶಗಳಿಗೆ ಹರಿಯುವುದನ್ನು ತಪ್ಪಿಸಲು ಗೇಟ್‌ವಾಲ್ ನಿರ್ಮಿಸಿ ಸಮಸ್ಯೆ ಪರಿಹರಿಸುವಂತೆ ನಗರಸಭೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಕಪಿಲಾ ನದಿ ಪ್ರವಾಹದಿಂದ ಉಂಟಾಗುವ ಸಮಸ್ಯೆಗಳ ಶಾಶ್ವತ ಪರಿಹಾರಕ್ಕೆ ಕ್ರಮ ವಹಿಸುತ್ತೇನೆ ಎಂದರು.

ಇದೇ ಸಂದರ್ಭ ಮುಡಿಕಟ್ಟೆ ಸಮೀಪ ನದಿ ನೀರು ಚರಂಡಿ ಮೂಲಕ ವಾಪಸ್ಸಾಗುವುದನ್ನು ಪರಿಶೀಲಿಸಿದರು. ಬಳಿಕ ತೋಪಿನ ಬೀದಿಯಲ್ಲಿ ನೀರು ತುಂಬಿಕೊಂಡು ಉಂಟಾಗುವ ಸಮಸ್ಯೆಗಳನ್ನು ಸ್ವತಃ ವೀಕ್ಷಣೆ ನಡೆಸಿ ಪರಿಸ್ಥಿತಿ ಅವಲೋಕಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ, ಆಶ್ರಯ ಪಡೆದಿರುವ ನಿವಾಸಿಗಳ ಸಮಸ್ಯೆ ಆಲಿಸಿ ಅವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕಾಳಜಿ ಕೇಂದ್ರದಲ್ಲಿ ಸಚಿವ ಕೃಷ್ಣ ಭೈರೇಗೌಡ ನಿರಾಶ್ರಿತರ ಸಮಸ್ಯೆ ಆಲಿಸಿದರು.

ಶಾಸಕ ದರ್ಶನ್ ಮಾತನಾಡಿ, ಕಪಿಲಾ ನದಿ ಪ್ರವಾಹ ಪ್ರದೇಶಗಳಿಗೆ ಕಂದಾಯ ಸಚಿವ ಕೃಷ್ಣ ಭೈರೇಗೌಡ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಪ್ರಾಕೃತಿಕ ವೈಪರಿತ್ಯದ ಜೊತೆಗೆ ನಾವು ಹೊಂದಿಕೊಂಡು ಹೋಗಬೇಕಿರುವುದರಿಂದ ಪ್ರವಾಹ ಸಂದರ್ಭ ಆಗುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಕ್ರಮ ವಹಿಸಲಾಗುವುದು ಎಂದರು.

ಈ ವೇಳೆ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ನಗರಸಭಾ ಆಯುಕ್ತ ನಂಜುಂಡಸ್ವಾಮಿ, ನಗರಸಭಾ ಎಇಇ ಮಹೇಶ್, ಶಿರಸ್ತೇದಾರ್ ಹರೀಶ್, ಸರ್ವೇಶ್, ಗ್ರಾಮ ಲೆಕ್ಕಿಗ ವರುಣ್, ಎಇ ಕುಮಾರ್, ಮಾಜಿ ಶಾಸಕ ಕೇಶವಮೂರ್ತಿ, ವಾಲ್ಮೀಕಿ ನಿಗಮ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಕೆಪಿಸಿಸಿ ಸದಸ್ಯ ಅಕ್ಬರ್ ಅಲಿಂ, ನಗರಸಭಾ ಸದಸ್ಯರಾದ ಎಸ್.ಪಿ.ಮಹೇಶ್, ಗಂಗಾಧರ್, ಗಾಯತ್ರಿ, ಯೋಗೀಶ್, ಸಿದ್ದಿಖ್, ಮುಖಂಡರಾದ ಎನ್.ಎಂ.ಮಂಜುನಾಥ್, ವಾಲೆ ನಾಗರಾಜು, ಸೇರಿದಂತೆ ಹಲವರಿದ್ದರು.

# ವಾಹನ ಚಾಲಕರ ಸಂಘದಿಂದ ಶ್ರೀಚಾಮುಂಡೇಶ್ವರಿ ಹಬ್ಬ



ವಾಹನ ಚಾಲಕರ ಸಂಘದಿಂದ ಶ್ರೀಚಾಮುಂಡೇಶ್ವರಿ ಹಬ್ಬ ಆಚರಿಸಲಾಯಿತು.

ಸರಗೂರು, ಆ.2– ಕಡೇ ಆಷಾಢ ಶುಕ್ರವಾರದಂದು ಪಟ್ಟಣದ ವಾಹನ ಚಾಲಕರ ಸಂಘದಿಂದ ಶ್ರೀಚಾಮುಂಡೇಶ್ವರಿ ಹಬ್ಬ ಆಚರಿಸಲಾಯಿತು.

ಪಟ್ಟಣದ ಗೂಡ್ಸ್ ವಾಹನ ನಿಲುಗಡೆ ನಿಲ್ದಾಣದ ಎದುರು ಶಾಮಿಯಾನ ಹಾಕಿ ತಳಿರು ತೋರಣ ಕಟ್ಟಿ ಶ್ರೀಚಾಮುಂಡೇಶ್ವರಿ ಅಮ್ಮನವರ ಭಾವಚಿತ್ರವನ್ನು ಪ್ರತಿಷ್ಠಾಪಿಸಿ ಅಲಂಕಾರ ಮಾಡಿ ವಿಶೇಷ ಪೂಜೆ ಸಲ್ಲಿಸಲಾಯಿತು. ಇದೇ ವೇಳೆ ಭಕ್ತರಿಗೆ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು.

ಪೂಜಾ ಕಾರ್ಯಕ್ರಮದಲ್ಲಿ ವಾಹನ ಚಾಲಕರ ಸಂಘದ ಅಧ್ಯಕ್ಷ ಚಿಕ್ಕಣ್ಣ, ಗೌರವಾಧ್ಯಕ್ಷ ಎಸ್.ಹೆಚ್.ಲಿಂಗರಾಜು, ಉಪಾಧ್ಯಕ್ಷ ಕಾಳನಾಯಕ, ಕಾರ್ಯದರ್ಶಿ ಚಾಮರಾಜು, ಚಾಲಕರಾದ ಎಂ.ನಾಗರಾಜು, ಗೋವಿಂದರಾಜು, ನಾಗರಾಜು, ಜಯೇಂದ್ರ, ಮಾಯಿ, ಭೈರನಾಯಕ ಇನ್ನಿತರರಿದ್ದರು.

# ಪಾದಯಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ

## ತಾಲೂಕು ಬಿಜೆಪಿ ಅಧ್ಯಕ್ಷ ರಾಜೇಂದ್ರ ಕರೆ




ಪಿರಿಯಾಪಟ್ಟಣದಲ್ಲಿ ನಡೆದ ಬಿಜೆಪಿ ಕಾರ್ಯಕಾರಣಿಯಲ್ಲಿ ತಾಲೂಕು ಅಧ್ಯಕ್ಷ ವಿ.ರಾಜೇಂದ್ರ ಮಾತನಾಡಿದರು.

ಪಿರಿಯಾಪಟ್ಟಣ, ಆ.2– ರಾಜ್ಯ ಕಾಂಗ್ರೆಸ್ ಸರ್ಕಾರದ ಹಗರಣಗಳ ವಿರುದ್ಧ ಆ.3ರಂದು ಬೆಂಗಳೂರಿನಿಂದ ಮೈಸೂರಿನವರೆಗೆ ಕೈಗೊಂಡಿರುವ ಪಾದ ಯಾತ್ರೆಯಲ್ಲಿ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ತಾಲೂಕು ಬಿಜೆಪಿ ಅಧ್ಯಕ್ಷ ವಿ.ರಾಜೇಂದ್ರ ಕರೆ ನೀಡಿದರು.

ಪಟ್ಟಣದ ಕನ್ನಂಬಾಡಿಯಮ್ಮ ಸಮುದಾಯ ಭವನದಲ್ಲಿ ನಡೆದ ಬಿಜೆಪಿ ಕಾರ್ಯಕಾರಿಣಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಉಚಿತ ಯೋಜನೆಗಳ ಮೂಲಕ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಯೋಜನೆಗಳ ಅನುಷ್ಠಾನಕ್ಕಾಗಿ ಸರ್ಕಾರದ ವಿವಿಧ ಇಲಾಖೆಯಲ್ಲಿ ಮೀಸಲಿಟ್ಟ ಹಣ ದುರ್ಬಳಕೆ ಮಾಡಿಕೊಂಡಿದೆ. ಈ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರದ ನಿರ್ದೇಶನದಂತೆ ರಾಜ್ಯ ನಾಯಕರು ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ ಹಮ್ಮಿಕೊಂಡಿದ್ದು, ಅಂತಿಮವಾಗಿ ಮೈಸೂರಿನಲ್ಲಿ ನಡೆಯುವ ಬೃಹತ್ ಸಮಾವೇಶ ನಡೆಸಲಿದ್ದಾರೆ. ರಾಜ್ಯ ಸರ್ಕಾರದ ವೈಫಲ್ಯವನ್ನು ರಾಜ್ಯದ ಜನತೆಗೆ ತಿಳಿಸುವುದೇ ಈ ಪಾದಯಾತ್ರೆ ಉದ್ದೇಶವಾಗಿದ್ದು, ತಾಲೂಕಿನ ಬಿಜೆಪಿ ಕಾರ್ಯಕರ್ತರು ಪಾದಯಾತ್ರೆಯಲ್ಲಿ ಭಾಗವಹಿಸುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಪಿರಿಯಾಪಟ್ಟಣ ಉಸ್ತುವಾರಿ ಮಹೇಶ್ ಮಾತನಾಡಿ ಪ್ರಧಾನಿ ಮೋದಿ ನೇತೃತ್ವದ ಸರ್ಕಾರದ ಕೊಡುಗೆಗಳನ್ನು ಜನತೆಗೆ ತಿಳಿಸುವ ನಿಟ್ಟಿನಲ್ಲಿ ವಿವಿಧ ಮೋರ್ಚಾ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಕಾರ್ಯ ನಿರ್ವಹಿಸಬೇಕು. ಯಾವುದೇ ಸಂಘಟನೆಗೆ ನಿರಾಸಕ್ತಿ ತೋರುವ ಪದಾಧಿಕಾರಿಗಳನ್ನು ತಕ್ಷಣ ಬದಲಾಯಿಸಿ ಆಸಕ್ತ ಕಾರ್ಯಕರ್ತರನ್ನು ನೇಮಿಸುವಂತೆ ತಿಳಿಸಿದರು.

ಈ ವೇಳೆ ಜಿಲ್ಲಾ ಖಜಾಂಚಿ ಚಂದ್ರಶೇಖರ್, ಜಿಲ್ಲಾ ಉಪಾಧ್ಯಕ್ಷ ರಮೇಶ್ ಮಾತನಾಡಿದರು, ಮುಖಂಡರಾದ ಹೆಚ್.ಸಿ.ಬಸವರಾಜ್, ಸೋಮಶೇಖರ್, ರಾಜೇಗೌಡ, ಸತೀಶ್, ವಿಕ್ರಂ ರಾಜ್, ನಳಿನಿ ಗೌಡ, ಲೋಕಪಾಲಯ್ಯ, ರವಿ, ಚನ್ನಬಸವರಾಜು ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

# ಒಳ ಮೀಸಲಾತಿ: ಸುಪ್ರೀಂಕೋರ್ಟ್ ತೀರ್ಪಿಗೆ ಸ್ವಾಗತ

ತಿ.ನರಸೀಪುರ, ಆ.2– ಒಳ ಮೀಸಲಾತಿ ಜಾರಿಗೊಳಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ ಎಂಬ ಸುಪ್ರೀಂಕೋರ್ಟ್ ತೀರ್ಪನ್ನು ತಾಲೂಕಿನ ಡಾ.ಬಾಬು ಜಗಜೀವನ್‌ರಾಂ ಜನ ಕಲ್ಯಾಣ ಸಂಘ ಸ್ವಾಗತಿಸಿದೆ.

ತೀರ್ಪಿನ ಹಿನ್ನೆಲೆಯಲ್ಲಿ ಪಟ್ಟಣದ ಭೈರಾಪುರ ವೃತ್ತದ ಡಾ.ಬಾಬು ಜಗಜೀವನ್ ರಾಂ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಸಂಘದ ಅಧ್ಯಕ್ಷ ಮಲಿಯೂರು ಡಿ.ಶಂಕರ್, ಸಮುದಾಯದ ಒಳ ಮೀಸಲಾತಿಗಾಗಿ ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿ ಜಾರಿಗಳಿಸುವಂತೆ ಹಲವು ವರ್ಷಗಳಿಂದ ಹೋರಾಟ ಮಾಡಿದ್ದೇವೆ. ತಾಲೂಕು, ಜಿಲ್ಲಾ, ರಾಜ್ಯ ಮಟ್ಟಗಳಲ್ಲಿ ಹೋರಾಟ ಮಾಡಿದ್ದೇವೆ. ಸಮಾವೇಶಗಳನ್ನು ನಡೆಸಿದ್ದೇವೆ. ಹೀಗಾಗಿ ಒಳ ಮೀಸಲಾತಿ ಕಲ್ಪಿಸಿದರೆ ನಮ್ಮ ಮುಂದಿನ ಪೀಳಿಗೆಗೆ ಅನುಕೂಲವಾಗುತ್ತದೆ ಎಂದರು.

ಇದೀಗ ಸುಪ್ರೀಂಕೋರ್ಟ್ ರಾಜ್ಯ ಸರ್ಕಾರಕ್ಕೆ ಒಳ ಮೀಸಲಾತಿ ಜಾರಿಗೊಳಿಸುವ ಅಧಿಕಾರ ನೀಡಿರುವುದರಿಂದ ಸರ್ಕಾರ ಸದಾಶಿವ ಆಯೋಗದ ವರದಿ ಜಾರಿಗೊಳಿಸ ಬಹುದಾಗಿದೆ. ಅದರನ್ವಯ ನಮ್ಮ ಸಮುದಾಯಕ್ಕೆ ಒಳಮೀಸಲಾತಿ ನೀಡುವಂತೆ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

ಕಳೆದ ವಿಧಾನಸಭೆ ಚುನಾವಣೆ ವೇಳೆ ರಾಜ್ಯದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಸದಾಶಿವ ಆಯೋಗದ ವರದಿ ಜಾರಿಗೊಳಿಸುತ್ತೇವೆ ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದ್ದರು. ಈಗ ಸುಪ್ರೀಂ ಕೋರ್ಟ್ ಕೂಡ ರಾಜ್ಯ ಸರ್ಕಾರಕ್ಕೆ ಅಧಿಕಾರ ಇದೆ ಎಂದು ಸ್ಪಷ್ಟವಾಗಿ ತಿಳಿಸಿದೆ. ಸರ್ಕಾರ ಇದನ್ನು ಪರಿಗಣಿಸಿ ಸುಪ್ರೀಂ ತೀರ್ಪಿನಂತೆ ಶೇ.6ರಷ್ಟು ಒಳ ಮೀಸಲಾತಿ ಕಲ್ಪಿಸಿದರೆ ಸುಪ್ರೀಂಕೋರ್ಟ್ ತೀರ್ಪು ನೀಡಿದ ದಿನವೇ ನಮಗೆ ಸ್ವಾತಂತ್ರ್ಯ ಸಿಕ್ಕಿದಂತೆ ಎಂದು ಭಾವಿಸುತ್ತೇವೆ ಎಂದರು.



ಹೈಕೋರ್ಟ್ ತೀರ್ಪು ಸ್ವಾಗತಿಸಿ ವಿಜಯೋತ್ಸವ ಆಚರಿಸಲಾಯಿತು.

ಈ ವಾರ ತಾಲೂಕಿನಿಂದ 2 ಬಸ್‌ಗಳಲ್ಲಿ ನೂರು ಜನರ ತಂಡದ ನಿಯೋಗ ತೆರಳಿ ಒಳ ಮೀಸಲಾತಿ ಕಲ್ಪಿಸುವ ಸದಾಶಿವ ಆಯೋಗದ ವರದಿ ಜಾರಿಗೊಳಿಸುವಂತೆ ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ಮಾಡುವುದಾಗಿ ತಿಳಿಸಿದರು.

ಪುರಸಭಾ ಸದಸ್ಯ ಭೈರಾಪುರ ಎಲ್.ಮಂಜುನಾಥ್ ಮಾತನಾಡಿದರು. ಈ ವೇಳೆ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಎನ್.ಪುಟ್ಟಸ್ವಾಮಿ, ಕಾರ್ಯದರ್ಶಿ ಮಾದೇಶ್, ಖಜಾಂಚಿ ಶಿವಣ್ಣ, ಗ್ರಾಪಂ ಸದಸ್ಯರಾದ ಶಿವಪ್ರಸಾದ್, ನಿಂಗರಾಜು, ಶಿವರಾಜು, ಲಿಂಗರಾಜು, ರಾಜಣ್ಣ, ಮಹದೇವ, ಕೆ.ಸಿ.ಲಿಂಗರಾಜು, ವಿಜಾಪುರ ಲಿಂಗರಾಜು, ಮಹದೇವಸ್ವಾಮಿ, ಬಿ.ಮಹದೇವ, ರಜಿನಿ, ಶಿವು ಮತ್ತಿತರರಿದ್ದರು.

# ಧ್ರುವನಾರಾಯಣ್ ಹುಟ್ಟುಹಬ್ಬ: ರೋಗಿಗಳಿಗೆ ಹಣ್ಣು, ಬ್ರೆಡ್ ವಿತರಣೆ



ರೋಗಿಗಳಿಗೆ ಹಣ್ಣು, ಬ್ರೇಡ್ ವಿತರಿಸಲಾಯಿತು.

ನಂಜನಗೂಡು, ಆ.2– ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಹುಟ್ಟುಹಬ್ಬದ ಪ್ರಯುಕ್ತ ಧ್ರುವನಾರಾಯಣ್ ಅಭಿಮಾನಿ ಬಳಗದಿಂದ ತಾಲೂಕಿನ ಹೆಡಿಯಾಲ, ಮಡುವಿನಹಳ್ಳಿ, ಹುರ, ಹಲ್ಲರೆ ಗ್ರಾಮಗಳ ಪ್ರಾಥಮಿಕ ಆರೋಗ್ಯ ಕೇಂದ್ರದ ರೋಗಿಗಳಿಗೆ ಹಣ್ಣು, ಬ್ರೆಡ್, ಬಿಸ್ಕತ್ ಸೇರಿದಂತೆ ಅಗತ್ಯ ವಸ್ತುಗಳನ್ನು ವಿತರಿಸಲಾಯಿತು.

ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್ ಮಾತನಾಡಿ, ಧ್ರುವನಾರಾಯಣ್ ಅವರು ತಮ್ಮನ್ನು ತಾವು ಜನಸೇವೆಗಾಗಿ ಮೀಸಲಿಟ್ಟಿದ್ದ ಅಪರೂಪದ ರಾಜಕಾರಣಿ. ಜನರ ಕಷ್ಟ ಸುಖಗಳಿಗೆ ಸ್ಪಂದಿಸುತ್ತಿದ್ದ ಅವರ ಆಶಯ, ಆದರ್ಶ ಗುಣಗಳು ಯುವ ರಾಜಕಾರಣಿಗಳಿಗೆ ಪ್ರೇರಣೆ. ಧ್ರುವನಾರಾಯಣ್ ಅವರು ಪ್ರಸ್ತುತ ನಮ್ಮೊಂದಿಗಿಲ್ಲ ಎಂಬುದನ್ನು ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಅವರ ಕನಸು, ಆಶಯಗಳ ಮೂಲಕ ನಮ್ಮೊಂದಿಗಿದ್ದಾರೆ. ಶಾಸಕ ದರ್ಶನ್ ಅವರು ಕೂಡ ಜನರೊಂದಿಗೆ ಸಂಪರ್ಕವನ್ನಿಟ್ಟುಕೊಂಡು ತಂದೆ ಹಾದಿಯಲ್ಲೇ ಸಾಗುತ್ತಿದ್ದಾರೆ ಎಂದರು.

ಜಿಪಂ ಮಾಜಿ ಸದಸ್ಯ ಕೆ.ಮಾರುತಿ ಮಾತನಾಡಿದರು. ಈ ವೇಳೆ ಹಾಡ್ಯ ಗ್ರಾಪಂ ಅಧ್ಯಕ್ಷ ಹರೀಶ್, ಮಹದೇವ್, ಜಯರಾವ್, ಕಾಳಸ್ವಾಮಿ, ಕೃಷ್ಣಮೂರ್ತಿ, ಗೋವಿಂದರಾಜು, ಅನ್ವರ್, ರಾಘು, ಬಸವರಾಜು ಇದ್ದರು.

## ದೇವಾಲಯ ದೇಣಿಗೆದಾರರಿಗೆ ಸನ್ಮಾನ



ಹೆಚ್.ಡಿ.ಕೋಟೆ ತಾಲೂಕಿನ ಭೀಮನಕೊಲ್ಲಿ ಶ್ರೀಮಹದೇಶ್ವರಸ್ವಾಮಿ ದೇವಾಲಯದ ಅಭಿವೃದ್ಧಿಗೆ 5 ಲಕ್ಷ ರೂ. ದೇಣಿಗೆ ನೀಡಿದ ಬೆಂಗಳೂರಿನ ನಿವಾಸಿ ಶೈಲಜಾ ಡಿ.ಜೆ.ರಾಜು ಹಾಗೂ ಕುಟುಂಬದವರನ್ನು ದೇವಾಲಯದಿಂದ ಸನ್ಮಾನಿಸಲಾಯಿತು. ಈ ವೇಳೆ ದೇವಾಲಯದ ಕಾರ್ಯದರ್ಶಿ ಜಗದೀಶ್ ಸೇರಿದಂತೆ ಇನ್ನಿತರರಿದ್ದರು.

## ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷರಾಗಿ ನೇಮಕ



ಹೆಚ್.ಡಿ.ಕೋಟೆ, ಆ.2– ಬಿಜೆಪಿ ರೈತ ಮೋರ್ಚಾ ತಾಲೂಕು ಉಪಾಧ್ಯಕ್ಷರಾಗಿ ಶಾಂತಿಪುರ ಎನ್.ಟಿ.ಜವರೇಗೌಡ ನೇಮಕ ಮಾಡಲಾಗಿದೆ. ಪಟ್ಟಣದ ಬಿಜೆಪಿ ಕಚೇರಿಯಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ಶಂಬೇಗೌಡರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಜವರೇಗೌಡರನ್ನು ಸರ್ವಾನುಮತದಿಂದ ನೇಮಕ ಮಾಡಲಾಯಿತು. ಈ ವೇಳೆ ಜಿಲ್ಲಾ ಪ್ರಧಾನ ಕಾರ್ಯ ವೆಂಕಟೇಶ್, ಜಿಪಂ ಮಾಜಿ ಸದಸ್ಯ ವೆಂಕಟಸ್ವಾಮಿ, ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಕೆಂಡಗಣ್ಣ ಇನ್ನಿತರರಿದ್ದರು.

## ವಿದ್ಯುತ್ ಸ್ಪರ್ಶ: ಮಹಿಳೆ ಸಾವು



ಹಂಪಾಪುರ, ಆ.2– ವಿದ್ಯುತ್ ಸ್ಪರ್ಶದಿಂದ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಇಲ್ಲಿಗೆ ಸಮೀಪದ ಮಾರ್ಚಹಳ್ಳಿಯಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಚೆನ್ನಾಜಮ್ಮ (65) ಸಾವನ್ನಪ್ಪಿದವರು. ಈಕೆ ಶುಕ್ರವಾರ ಮಧ್ಯಾಹ್ನ ಹೂ ಕೀಳಲು ಹೋದ ವೇಳೆ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ತುಳಿದು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹೆಚ್.ಡಿ.ಕೋಟೆ ಠಾಣೆ ಎಸ್ಐ ಪ್ರಕಾಶ್ ಪರಿಶೀಲಿಸಿ ಶವವನ್ನು ಮರಣೋತ್ತರ ಪರೀಕ್ಷೆಗೆ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ರವಾನಿಸಿದರು. ಈ ಸಂಬಂಧ ಹೆಚ್.ಡಿ.ಕೋಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನದಿ ಪಾತ್ರದ ಜನತೆ ಸುರಕ್ಷಿತ ಸ್ಥಳಕ್ಕೆ ತೆರಳಿ

## ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್ ಮನವಿ

ತಿ.ನರಸೀಪುರ, ಆ.2– ಕೆಆರ್‌ಎಸ್ ಮತ್ತು ಕಬಿನಿ ಜಲಾಶಯದಿಂದ ಲಕ್ಷಾಂತರ ಕ್ಯೂಸೆಕ್ ನೀರನ್ನು ನದಿಗೆ ಹರಿಸುತ್ತಿರುವುದರಿಂದ ನದಿ ಪಾತ್ರದ ಜನತೆ ಮುಂಜಾಗ್ರತಾ ಕ್ರಮವಾಗಿ ಸುರಕ್ಷಿತ ಸ್ಥಳಕ್ಕೆ ತೆರಳುವಂತೆ ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್ ಮನವಿ ಮಾಡಿದರು.

ತಾಲೂಕಿನಲ್ಲಿ ಪ್ರವಾಹದಿಂದ ಹಾನಿಗೊಳಗಾಗಿರುವ ಪ್ರದೇಶಗಳಿಗೆ ಭೇಟಿ ನೀಡಿ, ನಿರಾಶ್ರಿತರಿಗೆ ಸಾಂತ್ವನ ಹೇಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೆರೆಹಾವಳಿ ಹಾಗೂ ಅತಿವೃಷ್ಟಿಯಿಂದಾಗಿ ಹಾನಿಗೊಳಗಾದ ವಸತಿ ಹಾಗೂ ಕೃಷಿ ಭೂಮಿಗಳ ಪರಿಹಾರಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಾಲೂಕು ಆಡಳಿತವನ್ನು ಒತ್ತಾಯಿಸಿದರು.

ನದಿ ಪಾತ್ರದ ತಾಲೂಕಿನ ಎಸ್.ಮೇಗಡಹಳ್ಳಿ, ಕೆಂಡನಕೊಪ್ಪಲು, ಕೃಷ್ಣಾಪುರ, ದೊಡ್ಡಬಾಗಿಲು ಮೊಳೆ, ಆಚಾರಯ್ಯನ ಹುಂಡಿ, ಅಕ್ಕೂರು, ಕಟ್ಟೇಪುರ, ಹೆಮ್ಮಿಗೆ ಹಾಗೂ ತಡಿ ಮಾಲಂಗಿ ಗ್ರಾಮಗಳಿಗೆ ನೀರು ನುಗ್ಗಿದ್ದು, ತಲಕಾಡು ಅರಣ್ಯ ಪ್ರದೇಶ ಜಲಾವೃತವಾಗಿದೆ ಎಂದರು.



ಪ್ರವಾಹದಿಂದ ಹಾನಿಗೊಳಗಾದ ಪ್ರದೇಶಗಳಿಗೆ ಎಂ.ಅಶ್ವಿನ್ ಕುಮಾರ್ ಭೇಟಿ ನೀಡಿದರು.

ತಲಕಾಡಿನ ಅಸ್ತಿಕೇರಿ ಮಠ ಹಾಗೂ ತಡಿ ಮಾಲಂಗಿ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಜಿಲ್ಲಾಡಳಿತದಿಂದ ಕಾಳಜಿ ಕೇಂದ್ರ ತೆರೆಯಲಾಗಿದ್ದು, ಮಾಲಂಗಿ ಗ್ರಾಮದಲ್ಲಿ 20ಕ್ಕೂ ಹೆಚ್ಚು ಮನೆಗಳು ಪ್ರವಾಹಕ್ಕೆ ಸಿಲುಕಿದೆ ಎಂದರು.

ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಮಳೆ ಹಾನಿ ಬಗ್ಗೆ ಸಂಪೂರ್ಣ ವರದಿ ತಯಾರಿಸಿ ಸರ್ಕಾರದಿಂದ ಹೆಚ್ಚಿನ ಪರಿಹಾರ ಕೊಡಿಸಲು ಮುಂದಾಗಬೇಕು ಎಂದು ತಿಳಿಸಿದರು. ಈ ವೇಳೆ ಜೆಡಿಎಸ್ ಕ್ಷೇತ್ರಾಧ್ಯಕ್ಷ ಸಿ.ಬಿ.ಹುಂಡಿ ಚಿನ್ನಸ್ವಾಮಿ ಮತ್ತಿತರರಿದ್ದರು.

## ಆಷಾಢ ಶುಕ್ರವಾರ: ಮುತ್ತುಮಾರಮ್ಮನಿಗೆ ವಿಶೇಷ ಪೂಜೆ

ಹುಣಸೂರು, ಆ.2– ಕೊನೆ ಆಷಾಢ ಶುಕ್ರವಾರ ಅಂಗವಾಗಿ ಮುತ್ತುಮಾರಮ್ಮನವರಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ಮುಂಜಾನೆ ದೇವರಿಗೆ ಅಭಿಷೇಕ ನೆರವೇರಿಸಿ ತೆಂಗಿನ ಕಾಯಿ ಹಾಗೂ ಹೂವಿನಿಂದ ಅಲಂಕಾರ ಮಾಡಿ ವಿಶೇಷ ಪೂಜೆ ನೆರವೇರಿಸಲಾಯಿತು. ಇದೇ ವೇಳೆ ಭಕ್ತರಿಗೆ ರೈಸ್ ಬಾತ್, ಕೇಸರಿ ಬಾತ್ ವಿತರಿಸಲಾಯಿತು. ಮಹಿಳಾ ಭಕ್ತರು ದೇವರಿಗೆ ತುಪ್ಪದ ದೀಪ ಹಚ್ಚಿ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು. ಈ ವೇಳೆ ದೇವಸ್ಥಾನ ಸಮಿತಿ ಅಧ್ಯಕ್ಷ ಹೆಚ್.ವೈ.ಮಹದೇವ್, ಕಾರ್ಯದರ್ಶಿ ಈಶ್ವರ್, ಜಂಟಿ ಕಾರ್ಯದರ್ಶಿ ಅಶೋಕ್ ರಾಜಲಿಂಗಯ್ಯ, ಖಜಾಂಚಿ ಗುಂಡುಮಣಿ, ನಿರ್ದೇಶಕರಾದ ನರಸಿಂಹಯ್ಯ, ಪ್ರಕಾಶ್, ಶ್ರೀನಿವಾಸ್, ಗಿರೀಶ್ ಕುಮಾರ್, ಶ್ಯಾಮ್, ಕುಮಾರ್ ಹಾಗೂ ಇನ್ನಿತರರಿದ್ದರು.



## ನೂತನ ಉಪಾಧ್ಯಕ್ಷರಿಗೆ ಸನ್ಮಾನ



ಹುಣಸೂರು ತಾಲೂಕಿನ ಹನಗೋಡು ಹೋಬಳಿ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಂಜುನಾಥ್ ಅವರು ಹಾರಂಗಿ ನೀರು ಬಳಕೆದಾರರ ಸಹಕಾರ ಸಂಘದ ಉಪಾಧ್ಯಕ್ಷರಾಗಿ ಆಯ್ಕೆಯಾದ ಹಿನ್ನಲೆಯಲ್ಲಿ ಹನಗೋಡು ಗುತ್ತಿಗೆದಾರರ ಸಂಘದಿಂದ ಗೌರವಿಸಲಾಯಿತು. ಈ ವೇಳೆ ಸಂಘದ ಗೌರವಾಧ್ಯಕ್ಷ ಕಸ್ತೂರಿಗೌಡ, ಉಪಾಧ್ಯಕ್ಷ ಹೆಚ್.ವಿ.ಗಣೇಶ್, ಕಾರ್ಯದರ್ಶಿ ಕರ್ಣೇಗೌಡ, ಪದಾಧಿಕಾರಿಗಳಾದ ಅಶೋಕ್, ಮಾದೇಗೌಡ, ಮಂಜು, ದೇವರಾಜ್, ಶ್ರೀನಿವಾಸ್, ಗವಿಮಾಧು, ಶಿವರಾಜ್, ಪಿ.ವಿ.ಕೃಷ್ಣ ಸೇರಿದಂತೆ ಇತರರಿದ್ದರು.

# ಚುಂಚನಕಟ್ಟೆಯಲ್ಲಿ ಕಾವೇರಿಗೆ ಬಾಗಿನ ಅರ್ಪಣೆ

## ನಿರಾಣಿ ಶುಗರ್ಸ್‌ನವರು ಗುತ್ತಿಗೆ ಮೂಲಕ ಕಾರ್ಖಾನೆ ಆರಂಭಿಸಲಿ: ಶಾಸಕ ರವಿಶಂಕರ್

ಚುಂಚನಕಟ್ಟೆ ಆ.2– ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆ ಗುತ್ತಿಗೆ ಪಡೆದಿರುವ ನಿರಾಣಿ ಶುಗರ್ಸ್‌ನವರು ಗುತ್ತಿಗೆ ನೋಂದಣಿ ಮಾಡಿಕೊಂಡು ಕಾರ್ಖಾನೆ ಆರಂಭಿಸಲಿದ್ದಾರೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆಯಲ್ಲಿ ಕಾವೇರಿ ನದಿಗೆ ಬಾಗಿನ ಅರ್ಪಿಸಿ ಮಾತನಾಡಿದ ಅವರು, ಈಗಾಗಲೇ ಕಾರ್ಖಾನೆ ಆರಂಭಕ್ಕೆ ನಿರಾಣಿ ಶುಗರ್ಸ್‌ನವರು ನೋಂದಣಿ ಮಾಡಿಕೊಳ್ಳುವಂತೆ ಸಕ್ಕರೆ ಸಚಿವರಿಗೆ ಮನವಿ ಮಾಡಲಾಗಿದ್ದು, ಸದ್ಯದಲ್ಲೇ ಕಾರ್ಖಾನೆ ಆರಂಭದ ಬಗ್ಗೆ ಸಿಹಿ ಸುದ್ದಿ ನೀಡುತ್ತೇನೆ ಎಂದರು.

ಈ ಬಾರಿ ಜಲಪಾತೋತ್ಸವ ಆಚರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಪ್ಪಿಗೆ ಸೂಚಿಸಿದ್ದು, ಶೀಘ್ರ ಕಾರ್ಯಕ್ರಮ ಆಯೋಜಿಸಲು ಅಧಿಕಾರಿಗಳೊಂದಿಗೆ ಚರ್ಚಿಸಿ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದರು.

ಚುಂಚನಕಟ್ಟೆಯನ್ನು ಪ್ರವಾಸಿ ತಾಣವಾಗಿ ಮಾಡಲು ಬೇಕಾಗಿರುವ ಅನುದಾನ ಬಿಡುಗಡೆ ಮಾಡಿಸಲು ಬದ್ಧನಾಗಿದ್ದೇನೆ. ಅಲ್ಲದೇ ರೈತರಿಗೆ ಭತ್ತ ಸೇರಿದಂತೆ ಇನ್ನಿತರ ಬಿತ್ತನೆ ಕಾರ್ಯ ಕೈಗೊಳ್ಳಲು ಅಗತ್ಯವಿರುವ ಬಿತ್ತನೆ ಬೀಜ ವಿತರಣೆಗೆ ಕ್ರಮ ಕೈಗೊಳ್ಳುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದರು.

ಇದೇ ವೇಳೆ ಸಾರ್ವಜನಿಕರಿಂದ ಶಾಸಕರು ಅಹವಾಲು ಸ್ವೀಕರಿಸಿದರು. ಇದಕ್ಕೂ ಮುನ್ನಾ ಶಾಸಕರು ತಮ್ಮ ಪತ್ನಿ ಸುನೀತಾ ಅವರೊಂದಿಗೆ ಇಲ್ಲಿನ ಬಸವನ ವೃತ್ತದಿಂದ ಆಂಜನೇಯಸ್ವಾಮಿ ದೇವಾಲಯವರೆಗೆ ಮೆರವಣಿಗೆಯಲ್ಲಿ ಆಗಮಿಸಿ ಕಾವೇರಿ ನದಿಗೆ ಪೂಜೆ ಸಲ್ಲಿಸಿ ಬಾಗಿನ ಅರ್ಪಿಸಿ ಶ್ರೀರಾಮ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭ ತಹಸೀಲ್ದಾರ್‌ಗಳಾದ ಸುರೇಂದ್ರ ಮೂರ್ತಿ, ನರಗುಂದ, ಸಣ್ಣರಾಮಪ್ಪ ದೇವಾಲಯದ ಇಓ ರಘು, ಶಿರಸೇದಾರ್ ಶಿವಕುಮಾರ್, ಉಪ ತಹಸೀಲ್ದಾರ್ ಕೆ.ಜೆ.ಶರತ್ ಕುಮಾರ್, ವಿ.ಎ.ಮೌನೇಶ್, ಚುನಾವಣೆ ಶಾಖೆ ಗುಮಾಸ್ತ ಯಶವಂತ್, ಎಇಇ ವಿನುತ್, ರಾಜರಾಮ್, ಈಶ್ವರ್, ಗುರುರಾಜ್, ಇಂಜಿನಿಯರ್ ಆಯಾಜ್, ತೋಟಗಾರಿಕೆ ಅಧಿಕಾರಿ ನವೀನ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಮಹೇಶ್, ಜಿಪಂ ಮಾಜಿ ಸದಸ್ಯರಾದ ಜಿ.ಆರ್.ರಾಮೇಗೌಡ, ಶಿವರಾಮ್, ಎಪಿಎಂಸಿ ಮಾಜಿ ಅಧ್ಯಕ್ಷ ರಮೇಶ್, ತಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಮಾಜಿ ಸದಸ್ಯ ಗೋವಿಂದೇಗೌಡ, ಪುರಸಭೆ ಸದಸ್ಯರಾದ ನವೀದ್, ಶಂಕರ್, ಮಾಜಿ ಸದಸ್ಯ ವಿನಯ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್, ಪಿ.ಎಲ್.ಡಿ.ಬ್ಯಾಂಕ್ ಮಾಜಿ ಅಧ್ಯಕ್ಷ ಎನ್.ಸಿ.ಪ್ರಸಾದ್, ಮುಖಂಡರಾದ ಬಸವರಾಜು, ಮಾದು, ಹೆಚ್.ಜೆ.ರಮೇಶ್, ಜಗದೀಶ್, ಶಾಸಕರ ಆಪ್ತ ಕಾರ್ಯದರ್ಶಿ ಮಹದೇವ್, ಪುನೀತ್, ನವೀನ್ ಇದ್ದರು.



ಚುಂಚನಕಟ್ಟೆಯಲ್ಲಿ ಶಾಸಕ ಡಿ.ರವಿಶಂಕರ್ ಕಾವೇರಿ ನದಿಗೆ ಬಾಗಿನ ಅರ್ಪಿಸಿದರು.

### ಸಿಎಂ ಸ್ಥಾನದಿಂದ ಇಳಿಸುವುದು ಅಸಾಧ್ಯ

ಚುಂಚನಕಟ್ಟೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಪದಚ್ಯುತಗೊಳಿಸುವುದು ಅಸಾಧ್ಯ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಕಾವೇರಿಗೆ ಬಾಗಿನ ಅರ್ಪಿಸಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಉತ್ತಮವಾಗಿ ಆಡಳಿತ ನಡೆಸುತ್ತಿದ್ದು, ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಲು ಜೆಡಿಎಸ್, ಬಿಜೆಪಿ ಪಕ್ಷಗಳು ಮಾಡಿರುವ ಹುನ್ನಾರಕ್ಕೆ ರಾಜ್ಯಪಾಲರು ಸಹಕಾರ ಕೊಡಬಾರದು ಎಂದು ಒತ್ತಾಯಿಸಿದ ಅವರು ಈ ಸಂಬಂಧ ಕಾಂಗ್ರೆಸ್ ಪಕ್ಷ ಹೋರಾಟ ನಡೆಸಲಿದ್ದು, ತಾವೂ ಕೂಡ ಸಕ್ರೀಯವಾಗಿ ಭಾಗವಹಿಸುವುದಾಗಿ ತಿಳಿಸಿದರು.

# ಆಕಸ್ಮಿಕ ಬೆಂಕಿಗೆ ಬ್ಯಾರನ್ ಭಸ್ಮ

ಹಿರೀಕ್ಯಾತನಹಳ್ಳಿ, ಆ.2– ಆಕಸ್ಮಿಕ ಬೆಂಕಿಗೆ ತಂಬಾಕು ಹದಗೊಳಿಸುವ ಬ್ಯಾರೆನ್ ಸುಟ್ಟು ಹೋಗಿರುವ ಘಟನೆ ಸಮೀಪದ ಹೊನ್ನೇನಹಳ್ಳಿ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ನಿವಾಸಿ ಶ್ರೀನಿವಾಸ್ ಎಂಬವರಿಗೆ ಸೇರಿದ ಬ್ಯಾರನ್ ಸುಟ್ಟು ಹೋಗಿರುವುದು. ಗುರುವಾರ ಮಧ್ಯರಾತ್ರಿ ತಂಬಾಕು ಹದಗೊಳಿಸುತ್ತಿದ್ದ ವೇಳೆ ಆಕಸ್ಮಿಕ ಬೆಂಕಿ ತಗುಲಿ ಬ್ಯಾರನ್ ಸಂಪೂರ್ಣ ಸುಟ್ಟು ಹೋಗಿದೆ. ಶ್ರೀನಿವಾಸ್ ಅವರು ಕಟ್ಟೆಮಳಲವಾಡಿ ಐಓಬಿ ಬ್ಯಾಂಕ್‌ನಲ್ಲಿ 5 ಲಕ್ಷ ಹಾಗೂ 2 ಲಕ್ಷ ಕೈಸಾಲ ಮಾಡಿದ್ದು, ಇದೀಗ ಬ್ಯಾರನ್ ಸಂಪೂರ್ಣ ಸುಟ್ಟು ಹೋಗಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸಬೇಕು ಎಂದು ಶ್ರೀನಿವಾಸ್ ಒತ್ತಾಯಿಸಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹುಣಸೂರು ಅಗ್ನಿಶಾಮಕ ಠಾಣೆ ಸಿಬ್ಬಂದಿ ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ.

## ಆರ್.ವಿಪುಲ್ ನಿಧನ



ಮೈಸೂರು, ಆ.2– ಮೈಸೂರಿನ ವಿದ್ಯಾರಣ್ಯಪುರಂ ನಿವಾಸಿ, ಪೊಲೀಸ್ ಹೆಡ್ ಕಾನ್ಸ್‌ಟೇಬಲ್ ರಂಗಸ್ವಾಮಿ ಅವರ ಪುತ್ರ ಆರ್.ವಿಪುಲ್(16) ಶುಕ್ರವಾರ ಬೆಳಗ್ಗೆ ನಿಧನರಾದರು. ಮೃತರು ತಂದೆ, ತಾಯಿ, ಸಹೋದರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಮಧ್ಯಾಹ್ನ 12 ಗಂಟೆಗೆ ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿದೆ.

# ಕೊನೆ ಆಷಾಢ ಶುಕ್ರವಾರ ಚಾಮುಂಡಿಬೆಟ್ಟಕ್ಕೆ ಭಕ್ತರ ದಂಡು



ಆಷಾಢ ಮಾಸದ ಕೊನೆಯ ಶುಕ್ರವಾರದ ಪೂಜಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಚಾಮುಂಡಿಬೆಟ್ಟಕ್ಕೆ ಆಗಮಿಸಿರುವ ಭಕ್ತ ಸಮೂಹ.

ಮೈಸೂರು,ಆ.2(ಎಂಟಿವೈ)- ಆಷಾಡ ಮಾಸದ ಕೊನೆ ಶುಕ್ರವಾರವಾದ ಇಂದು ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಾಲಯದಲ್ಲಿ ನಡೆದ ವಿಶೇಷ ಪೂಜಾ ಮಹೋತ್ಸವದಲ್ಲಿ ರಾಜ್ಯದ ವಿವಿಧೆಡೆಯಿಂದ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ದೇವಿ ದರ್ಶನ ಪಡೆದು ಸಂಭ್ರಮಿಸಿದರು.

ಮುಂಜಾನೆ 3 ಗಂಟೆಯಿಂದಲೇ ಬೆಟ್ಟಕ್ಕೆ ಭಕ್ತರು ಆಗಮಿಸಿ, ಸರದಿ ಸಾಲಿನಲ್ಲಿ ನಿಂತಿದ್ದರು. ಇಂದು ಮಳೆ ಬಿಡುವು ನೀಡಿದ್ದರಿಂದ ಭಕ್ತರು ಸರಾಗವಾಗಿ ಸರದಿ ಸಾಲಿನಲ್ಲಿ ನಿಂತು, ಬೆಳಗ್ಗೆ 6 ಗಂಟೆಗೆ ದೇವಾಲಯದ ದ್ವಾರ ತೆಗೆಯುತ್ತಿದ್ದಂತೆಯೇ ದರ್ಶನ ಪಡೆದು ಇಷ್ಟಾರ್ಥಕ್ಕಾಗಿ ಪ್ರಾರ್ಥಿಸಿದರು. ವಿಶೇಷ ಪೂಜಾ ಮಹೋತ್ಸದ ಹಿನ್ನೆಲೆಯಲ್ಲಿ ವಿವಿಧ ಬಗೆಯ ಬಣ್ಣ ಬಣ್ಣದ ಹೂವುಗಳಿಂದ ಅಲಂಕರಿಸಲಾಗಿತ್ತು.

**ವಿಶೇಷ ಪೂಜೆ:** ಪ್ರಧಾನ ಆಗಮಿಕ ಡಾ.ಎನ್.ಶಶಿಶೇಖರ ದೀಕ್ಷಿತ್ ನೇತೃತ್ವದಲ್ಲಿ ಅರ್ಚಕರು ಮುಂಜಾನೆ 3 ಗಂಟೆಗೆ ದೇವಿ ಕೆರೆಯಿಂದ ಪವಿತ್ರ ಜಲ ತಂದು ಚಾಮುಂಡೇಶ್ವರಿ ದೇವಿಗೆ ಮಹನ್ಯಾಸಪೂರ್ವಕ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ಕುಂಕುಮಾರ್ಚನೆ, ಸಹಸ್ರನಾಮಾರ್ಚನೆ ಮಾಡಲಾಯಿತು. ಬಳಿಕ ಆಭರಣಗಳಿಂದ ದೇವಿಗೆ ಅಲಂಕಾರ ನೆರವೇರಿಸಲಾಯಿತು. ಬಳಿಕ ಷೋಡಶೋಪಚಾರ ಪೂಜೆ ಹಾಗೂ ಮಂಗಳಾರತಿ ಜರುಗಿತು. ಬೆಳಗ್ಗೆ 6 ಗಂಟೆಗೆ ದೇವಾಲಯದ ಬಾಗಿಲು ತೆರೆದು ಭಕ್ತರ ದರ್ಶನಕ್ಕೆ ಮುಕ್ತಗೊಳಿಸಲಾಯಿತು. ಬೆಳಗ್ಗೆ 9.30ಕ್ಕೆ ದೇವಿಗೆ ಮಹಾ ಮಂಗಳಾರತಿ ಮತ್ತು ಸಂಜೆ 6 ರಿಂದ 7.30ರವರೆಗೆ ಅಭಿಷೇಕ ನೆರವೇರಿಸಲಾಯಿತು. ಬೆಳಗ್ಗೆ 6ರಿಂದ ರಾತ್ರಿ 10ರವರೆಗೂ ಸಹಸ್ರಾರು ಭಕ್ತರು ತಾಯಿಯ ದರ್ಶನ ಪಡೆದು ಪುನೀತರಾದರು.

**ಮೆಟ್ಟಿಲು ಮಾರ್ಗದಲ್ಲಿ :** ಕೊನೆ ಶುಕ್ರವಾರದ ಇಂದು ಹರಕೆ ಹೊತ್ತು ಮೆಟ್ಟಿಲು ಮೂಲಕ ಬೆಟ್ಟದ ಹತ್ತು ಭಕ್ತರ ಸಂಖ್ಯೆ ಹೆಚ್ಚಾಗಿತ್ತು. ಸಂಕಲ್ಪ ಮಾಡಿಕೊಂಡಿದ್ದ ಮಹಿಳೆಯರು, ಯುವತಿಯರು, ನವವಿವಾಹಿತೆಯರು ಪ್ರತಿಯೊಂದು ಮೆಟ್ಟಿಲುಗಳಿಗೆ ಹರಿಶಿನ-ಕುಂಕುಮ ಹಚ್ಚಿ, ಆರತಿ ಬೆಳಗುತ್ತಾ ಬೆಟ್ಟ ಹತ್ತುತ್ತಿದ್ದ ದೃಶ್ಯ ಕಂಡು ಬಂದಿತು.

ಇಂದು ಚಾಮುಂಡಿಬೆಟ್ಟಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಶಾಸಕ ಜಿ.ಡಿ.ಹರೀಶ್‌ಗೌಡ, ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಾಜಿ ಶಾಸಕ ಎಲ್.ನಾಗೇಂದ್ರ ಸೇರಿದಂತೆ ಇನ್ನಿತರರು ಆಗಮಿಸಿದ ದರ್ಶನ ಪಡೆದರು.

**ಬೆಟ್ಟದ ತಪ್ಪಲಿನಲ್ಲಿ:** ಕೊನೆ ಶುಕ್ರವಾರವಾದ ಹಿನ್ನೆಲೆಯಲ್ಲಿ ಮೆಟ್ಟಿಲುಗಳ ಮೂಲಕ ಬೆಟ್ಟ ಹತ್ತಲು ಬರುವ ಭಕ್ತರ ಸಂಖ್ಯೆ ಹೆಚ್ಚಾಗಿತ್ತು. ಈ ಹಿನ್ನೆಲೆಯಲ್ಲಿ ಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಮಠದಲ್ಲಿ ಭಕ್ತರಿಗಾಗಿ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಬೆಟ್ಟಕ್ಕೆ ಬರುವ ಹಾಗೂ ದರ್ಶನ ಮುಗಿಸಿ ವಾಪಸ್ಸಾಗುವ ಭಕ್ತರಿಗೆ ಪ್ರಸಾದ ಬಡಿಸುವ ಮೂಲಕ ಶುಭಕೋರಿದರು.

## ಸಿಎಂ ಪತ್ನಿಗೆ ಭಾರಿ ಭದ್ರತೆ

ಪ್ರತಿ ವರ್ಷವೂ ಆಷಾಡ ಮಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರು ಚಾಮುಂಡಿಬೆಟ್ಟಕ್ಕೆ ಬಂದು ದೇವಿಯ ದರ್ಶನ ಪಡೆಯುವುದು ವಾಡಿಕೆಯಾಗಿದ್ದು, ಇಂದು ಬೆಂಗಳೂರಿಂದ ಚಾಮುಂಡಿಬೆಟ್ಟಕ್ಕೆ ಆಗಮಿಸಿ ಪೊಲೀಸ್ ಸಿಬ್ಬಂದಿ ಹಾಗೂ ಹಿತೈಷಿಗಳ ಭದ್ರ ಕೋಟೆಯಲ್ಲಿ ದೇವಾಲಯಕ್ಕೆ ಬಂದು ದರ್ಶನ ಪಡೆದು ಹಿಂದಿರುಗಿದರು. ಈ ವೇಳೆ ಪತ್ರಿಕಾ ಛಾಯಾಗ್ರಾಹಕರು ಫೋಟೊ ತೆಗೆಯುವುದಕ್ಕೂ ಅವಕಾಶ ನೀಡದೆ, ಕ್ಯಾಮರಾ ಆಫ್ ಮಾಡುವಂತೆ ಸೂಚನೆ ನೀಡಲಾಗುತ್ತಿತ್ತು.

## ಮೈಸೂರು ಚಲೋ ಪಾದಯಾತ್ರೆಯಲ್ಲಿ ಭಾಗವಹಿಸುತ್ತೇವೆ: ಜಿ.ಟಿ.ದೇವೇಗೌಡ




ಮೈಸೂರು, ಆ.2(ಎಂಕೆ)- ರಾಜ್ಯ ಕಾಂಗ್ರೆಸ್ ಸರ್ಕಾರದ ಹಗರಣಗಳ ಖಂಡಿಸಿ ಬಿಜೆಪಿ-ಜೆಡಿಎಸ್ ಹಮ್ಮಿಕೊಂಡಿರುವ ಬೆಂಗಳೂರು-ಮೈಸೂರು ಚಲೋ ಪಾದಯಾತ್ರೆಯಲ್ಲಿ ಭಾಗವಹಿಸುವುದಾಗಿ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡ ಹೇಳಿದರು.

ಮೈಸೂರು ಹೆಬ್ಬಾಳಿನ ಅರ್ಬನ್ ಹಾತ್‌ನಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ಮಳೆ ಬೀಳುತ್ತಿದೆ. ರೈತರು ಕೃಷಿಯಲ್ಲಿ ತೊಡಗಿದ್ದಾರೆ. ಹಲವೆಡೆ ಸಾವು-ನೋವುಗಳಾಗುತ್ತಿವೆ. ಆದ್ದರಿಂದ ಪಾದಯಾತ್ರೆಯನ್ನು ಸ್ವಲ್ಪ ದಿನಗಳ ಕಾಲ ಮುಂದೂಡಬೇಕು ಎಂದು ಮನವಿ ಮಾಡಿದ್ದೆವು. ಆದರೆ ಬಿಜೆಪಿಯವರು ಈಗಾಗಲೇ ಎಲ್ಲಾ ಸಿದ್ದತೆಗಳನ್ನು ಮಾಡಿಕೊಂಡಿದ್ದೇವೆ ಎಂದಿರುವುದರಿಂದ ಕೇಂದ್ರ ಸಚಿವ ರಾದ ಹೆಚ್.ಡಿ.ಕುಮಾರಸ್ವಾಮಿ ಅವರ ಸೂಚನೆ ಮೇರೆಗೆ ನಾವೆಲ್ಲರೂ ಪಾದಯಾತ್ರೆಯಲ್ಲಿ ಭಾಗವಹಿಸುತ್ತೇವೆ ಎಂದು ತಿಳಿಸಿದರು.

ಸಿಎಂಗೆ ರಾಜ್ಯಪಾಲರ ನೋಟಿಸ್ ಕುರಿತು ಪ್ರತಿಕ್ರಿಯಿಸಿ, ಸಂವಿಧಾನಕ್ಕೆ ಬದ್ಧವಾಗಿ ರಾಜ್ಯಪಾಲರು ನೋಟಿಸ್ ನೀಡಿದ್ದಾರೆ. ಆದರೆ ದೂರನ್ನು ಸರಿಯಾಗಿ ಗಮನಿಸದೆ ನೋಟಿಸ್ ನೀಡಿದ್ದು, ಕೂಡಲೇ ವಿತ್‌ಡ್ರಾ ಮಾಡಬೇಕು ಎಂದು ಕಾಂಗ್ರೆಸ್‌ನವರು ಕ್ಯಾಬಿನೆಟ್‌ನಲ್ಲಿ ತೀರ್ಮಾನ ಮಾಡಿದ್ದಾರೆ. ನ್ಯಾಯಾಲಯದಲ್ಲಿ ತನಿಖೆಯಾಗಿ ಎಲವೂ ಪರಿಶೀಲನೆಯಾಗಲಿದೆ ಎಂದರು.

## ಶಾಸಕ ಹರೀಶ್‌ಗೌಡರಿಗೆ ಹುಟ್ಟು ಹಬ್ಬದ ಅಭಿನಂದನೆ



ಮೈಸೂರಿನ ದೇವರಾಜ ಮಾರುಕಟ್ಟೆ ಯುವ ಬ್ರಿಗೇಡ್ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಶ್ರೀ ಚಾಮುಂಡೇಶ್ವರಿ ಅಮ್ಮನವರ ವಿಶೇಷ ಪೂಜೆ ಸಂದರ್ಭದಲ್ಲಿ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡರನ್ನು ಅವರ ಹುಟ್ಟು ಹಬ್ಬದ ಅಂಗವಾಗಿ ಪೂರ್ವಭಾವಿಯಾಗಿ ಅಭಿನಂದಿಸಲಾಯಿತು. ಯುವ ಬ್ರಿಗೇಡ್ ಅಧ್ಯಕ್ಷ ಬಿ.ಸಂದೀಪ್, ಸದಸ್ಯರಾದ ರಂಗಸ್ವಾಮಿ, ಮಹೇಶ್, ಗಗನ್ ದೀಪ್, ನಾಗರಾಜ್, ಕಾರ್ತಿಕ್, ಸಂದೇಶ್, ಮೋಹನ್, ರಕ್ಷಿತ್, ಅಕ್ಷಯ್, ಆಟೋ ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

## ಮೈಸೂರಿನ ವಿವಿಧೆಡೆ ಕೊನೆ ಆಷಾಢ ಶುಕ್ರವಾರದ ಪೂಜೆ



ಕೆ.ಜಿ.ಕೊಪ್ಪಲಿನ ಬಂದಂತಮ್ಮ ಕಾಳಮ್ಮ ದೇವಾಲಯ ದೇವಿಗೆ ಬೆಲ್ಲದಲ್ಲಿ ಅಲಂಕಾರ ಮಾಡಿರುವುದು.



ತೊಗರಿ ಬೀದಿಯ ಶ್ರೀಮಹಾಲಕ್ಷ್ಮೀ ಕೊಲ್ಲಾಪುರದಮ್ಮ ದೇವಾಲಯದಲ್ಲಿ ದೇವಿಗೆ ಬುಗುರಿಯಿಂದ ಅಲಂಕರಿಸಿರುವುದು.



ಶೃಂಗೇರಿ ಮಠದ ಶಾರದಾದೇವಿ ದೇವಾಲಯದಲ್ಲಿ ಕಣ್ಮನ ಸೆಳೆಯುತ್ತಿರುವ ಶಾರದಾದೇವಿ.

ಮೈಸೂರು, ಆ.2(ಎಂಟಿವೈ)- ಸಾಂಸ್ಕೃತಿಕ ನಗರಿ ಮೈಸೂರಿನ ವಿವಿಧೆಡೆ ಆಷಾಡ ಮಾಸದ ಕೊನೆ ಶುಕ್ರವಾರದ ಅಂಗವಾಗಿ ಚಾಮುಂಡಿ ಪೂಜೆ ನೆರವೇರಿಸಿ, ಭಕ್ತರಿಗೆ ಪ್ರಸಾದ ವಿನಿಯೋಗಿಸಲಾಯಿತು.

ಮೈಸೂರಿನ ಬಹುತೇಕ ರಸ್ತೆಗಳಲ್ಲಿ ಚಾಮುಂಡೇಶ್ವರಿ ದೇವಿಯ ಭಾವಚಿತ್ರವನ್ನು ಪೂಜಿಸಿ, ಭಕ್ತರಿಗೆ ಕೇಸರಿ ಬಾತ್, ಪೊಂಗಲ್, ರೈಸ್ ಬಾತ್, ವಾಂಗಿಬಾತ್ ಸೇರಿದಂತೆ ಇನ್ನಿತರ ತಿನಿಸನ್ನು ಪ್ರಸಾದವಾಗಿ ವಿತರಿಸಲಾಯಿತು.

**ವಿವಿಧ ದೇವಾಲಯಗಳಲ್ಲೂ ಪೂಜೆ:** ಮೈಸೂರಿನ ಕೆ.ಜಿ.ಕೊಪ್ಪಲ್, ಚಾಮುಂಡಿಪುರಂ, ವಿದ್ಯಾರಣ್ಯಪುರಂ, ಪಡುವಾರಹಳ್ಳಿ ಸೇರಿದಂತೆ ವಿವಿಧೆಡೆಯಿರುವ ಚಾಮುಂಡೇಶ್ವರಿ ದೇವಾಲಯದಲ್ಲಿ ವಿಶೇಷ ಪೂಜೆ ನೆರವೇರಿಸಲಾಯಿತು. ಅಲ್ಲದೆ, ಕುರುಬಾರಹಳ್ಳಿಯಲ್ಲಿರುವ ಬನ್ನಿಮಹಾಕಾಳೇಶ್ವರಿ, ಮಾಕಮ್ಮ, ಕೆ.ಜಿ.ಕೊಪ್ಪಲಿನ ಬಂದಂತಮ್ಮ ಕಾಳಮ್ಮ ದೇವಾಲಯ, ತೊಗರಿ ಬೀದಿಯ ಶ್ರೀಮಹಾಲಕ್ಷ್ಮೀ ಕೊಲ್ಲಾಪುರದಮ್ಮ ದೇವಾಲಯ, ಶೃಂಗೇರಿ ಮಠದ ಶಾರದಾದೇವಿ ದೇವಾಲಯ, ಉತ್ತನಹಳ್ಳಿಯ ಶ್ರೀ ಜ್ವಾಲಾಮುಖಿ ತ್ರಿಪುರಸುಂದರಿ ದೇವಿ ದೇವಾಲಯ, ನಜರ್‌ಬಾದ್‌ನಲ್ಲಿರುವ ನಿಂಬುಜಾದೇವಿ ದೇವಾಲಯ, ಇಟ್ಟಿಗೆಗೂಡಿನ ದುರ್ಗಾಪರಮೇಶ್ವರಿ ದೇವಾಲಯ, ಶ್ರೀರಂಗಪಟ್ಟಣದ ನಿಮಿಷಾಂಬ ದೇವಾಲಯ ಸೇರಿದಂತೆ ವಿವಿಧ ಶಕ್ತಿದೇವತೆಗಳ ದೇವಾಲಯಗಳಲ್ಲೂ ವಿಶೇಷ ಪೂಜಾ ಮಹೋತ್ಸವ ಜರುಗಿತು.

# ಮೈಸೂರು ವಾರಿಯರ್ಸ್ ನಾಯಕರಾಗಿ ಕರುಣ್ ನಾಯರ್ ಆಯ್ಕೆ



ಮೈಸೂರು, ಆ.2(ಎಂಕೆ)- ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 ಪಂದ್ಯಾವಳಿಯ 3ನೇ ಆವೃತ್ತಿಯಲ್ಲಿ ಮೈಸೂರು ವಾರಿಯರ್ಸ್ ಕ್ರಿಕೆಟ್ ತಂಡದ ನಾಯಕರಾಗಿ ಭಾರತದ ಸ್ಟಾರ್ ಬ್ಯಾಟ್ಸ್‌ಮನ್ ಕರುಣ್ ನಾಯರ್ ಆಯ್ಕೆಯಾಗಿದ್ದು, ಸತತ ಮೂರನೇ ಬಾರಿಗೆ ತಂಡವನ್ನು ಮುನ್ನಡೆಸಲಿದ್ದಾರೆ.

ಭಾರತದ ಸ್ಟಾರ್ ಆಟಗಾರರಲ್ಲಿ ಒಬ್ಬರಾದ 31 ವರ್ಷದ ಕರುಣ್ ನಾಯರ್, 2012 ರಿಂದ ಐಪಿಎಲ್‌ನಲ್ಲಿ ಗಮನಾರ್ಹ ಪ್ರದರ್ಶನ ನೀಡಿದ್ದಾರೆ. 2016ರಲ್ಲಿ ಜಿಂಬಾಬ್ವೆಯಲ್ಲಿ ನಡೆದ ಏಕದಿನ ಪಂದ್ಯದಲ್ಲಿ ಭಾರತ ತಂಡದ ಪರವಾಗಿ ಆಡುವ ಮೂಲಕ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಪದಾರ್ಪಣೆ ಮಾಡಿದ ಅವರು, 2016ರಲ್ಲಿ ಇಂಗ್ಲೆಂಡ್ ವಿರುದ್ಧದ ಟೆಸ್ಟ್‌ನಲ್ಲಿ ತ್ರಿಶತಕ ದಾಖಲಿಸುವ ಮೂಲಕ ವೀರೇಂದ್ರ ಸೆಹ್ವಾಗ್ ಬಳಿಕ ತ್ರಿಶತಕ ಬಾರಿಸಿದ ಎರಡನೇ ಭಾರತೀಯ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ನಡೆಸುವ ಮಹಾರಾಜ ಟ್ರೋಫಿ ಟಿ20 ಪಂದ್ಯಾವಳಿಯಲ್ಲಿ ಎನ್.ಆರ್.ಗ್ರೂಪ್ ಮಾಲೀಕತ್ವದ ಮೈಸೂರು ವಾರಿಯರ್ಸ್ ತಂಡದ ನಾಯಕರಾಗಿ ಮೂರನೇ ಬಾರಿಗೆ ಆಯ್ಕೆಯಾಗಿರುವ ಕರುಣ್ ನಾಯರ್, 2023ರ ಆವೃತ್ತಿಯಲ್ಲಿ ಅತ್ಯುತ್ತಮ ಪ್ರದರ್ಶನದ ಮೂಲಕ ತಂಡವನ್ನು ಫೈನಲ್‌ವರೆಗೆ ಕೊಂಡೊಯ್ದಿದ್ದರು. ಅಲ್ಲದೆ ಕಳೆದ ಮೂರು ಆವೃತ್ತಿಯಲ್ಲೂ ಗಮನಾರ್ಹ ಪ್ರದರ್ಶನ ನೀಡುತ್ತಿರುವ ಕರುಣ್, ಈ ಬಾರಿ ಚಾಂಪಿಯನ್ ಪಟ್ಟ ಧರಿಸುವ ವಿಶ್ವಾಸದಲ್ಲಿದ್ದಾರೆ.

**ಅಸಾಧಾರಣ ಸಾಮರ್ಥ್ಯ:** ಕರುಣ್ ನಾಯರ್ ನಾಯಕರಾಗಿ ಆಯ್ಕೆಯಾಗಿರುವ ಕುರಿತು ಪ್ರತಿಕ್ರಿಯಿಸಿರುವ ಮೈಸೂರು ವಾರಿಯರ್ಸ್ ತಂಡದ ಮಾಲೀಕರೂ ಆದ ಸೈಕಲ್ ಪ್ಯೂರ್ ಅಗರಬತ್ತಿಯ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ, ಕರುಣ್ ನಾಯರ್ ಅಸಾಧಾರಣ ಕ್ರಿಕೆಟ್ ಸಾಮರ್ಥ್ಯ ಮತ್ತು ಜ್ಞಾನ ಹೊಂದಿದ ಆಟಗಾರ. ಅವರು ನಮ್ಮ ತಂಡವನ್ನು ಯಶಸ್ಸಿನ ಕಡೆಗೆ ಕರೆದೊಯ್ಯುತ್ತಾರೆ ಎಂಬ ನಂಬಿಕೆ ಇದೆ. ಪ್ರಸ್ತುತ ಪಂದ್ಯಾವಳಿಯ ಗೆಲುವನ್ನು ಎದುರು ನೋಡುತ್ತಿದ್ದೇವೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

**ಆ.15 ರಿಂದ ಆರಂಭ:** ಮಹಾರಾಜ ಟ್ರೋಫಿ ಪಂದ್ಯಾವಳಿಯು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆ.15 ರಿಂದ ಸೆ.1ರವರೆಗೆ ನಡೆಯಲಿದ್ದು, ಪಂದ್ಯಾವಳಿಯಲ್ಲಿ ಮೈಸೂರು ವಾರಿಯರ್ಸ್, ಹುಬ್ಬಳ್ಳಿ ಟೈಗರ್ಸ್, ಬೆಂಗಳೂರು ಬ್ಲಾಸ್ಟರ್ಸ್, ಮಂಗಳೂರು ಡ್ರಾಗನ್ಸ್, ಗುಲ್ಬರ್ಗಾ ಮಿಸ್ಟಿಕ್ಸ್, ಶಿವಮೊಗ್ಗ ಲಯನ್ಸ್ ಸೇರಿದಂತೆ ಒಟ್ಟು ಆರು ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ.

### ಶ್ರೇಷ್ಠ ಪ್ರದರ್ಶನ ನೀಡುವ ವಿಶ್ವಾಸದಲ್ಲಿದ್ದೇನೆ...

ಭಾರತ ತಂಡವನ್ನು ಪ್ರತಿನಿಧಿಸಿರುವ ನಾನು, ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 ಪಂದ್ಯಾವಳಿಯಲ್ಲಿ ಯುವ ಹಾಗೂ ಪ್ರತಿಭಾನ್ವಿತ ಆಟಗಾರರಿಗೆ ಮಾರ್ಗದರ್ಶನ ನೀಡಲು ಎದುರು ನೋಡುತ್ತಿದ್ದೇನೆ. ಆಫ್ ಫೀಲ್ಡ್ ಮತ್ತು ಆನ್ ಫೀಲ್ಡ್ ನಲ್ಲಿ ಶ್ರೇಷ್ಠ ಪ್ರದರ್ಶನ ನೀಡುವ ವಿಶ್ವಾಸ ಹೊಂದಿದ್ದೇನೆ.

- ಕರುಣ್ ನಾಯರ್, ಕಾಪ್ಟನ್, ಮೈಸೂರು ವಾರಿಯರ್ಸ್

## ಮೈಸೂರು ಚಿತ್ರಮಂದಿರಗಳಲ್ಲಿ

| | |
|---|---|
| **ಪದ್ಮ ಚಿತ್ರಮಂದಿರ** | (ದೂ: 2521923) |
| ಪೇಚಿ (ತ) | 4 ಪ್ರದರ್ಶನಗಳು |
| **ವುಡ್‌ಲ್ಯಾಂಡ್ಸ್ ಚಿತ್ರಮಂದಿರ** | (ದೂ: 2422871) |
| ರಾಯನ್ (ತ) | 4 ಪ್ರದರ್ಶನಗಳು |
| **ಬಾಲಾಜಿ ಚಿತ್ರಮಂದಿರ** | (ದೂ: 2497199) |
| ಔರಾನ್ ಮೇ ಕಹಾನ್ ದಮ್ ಥಾ (ಹಿಂ) | 4 ಪ್ರದರ್ಶನಗಳು |
| **ಮಹದೇಶ್ವರ ಚಿತ್ರಮಂದಿರ** | (ಮೊ:9900820093) |
| ಕಲ್ಕಿ (ಕ) | 4 ಪ್ರದರ್ಶನಗಳು |
| **ಗಾಯಿತ್ರಿ** | |
| ಫ್ಯಾಮಿಲಿ ಡ್ರಾಮಾ (ಕ) | 4 ಪ್ರದರ್ಶನಗಳು |
| **ರಾಜಕಮಲ್** | |
| ಬೋಟ್ (ತ) | 4 ಪ್ರದರ್ಶನಗಳು |
| **ಸಂಗಂ** | |
| ಪೇಚಿ (ತ) | 4 ಪ್ರದರ್ಶನಗಳು |
| **ಲಿಡೋ** | |
| ಹೆಬ್ಬುಲಿ (ಕ) | 4 ಪ್ರದರ್ಶನಗಳು |
| **ತಿಬ್ಬಾದೇವಿ** | |
| ಪೇಚಿ (ತ) | 4 ಪ್ರದರ್ಶನಗಳು |
| **ಪ್ರಭಾ** | |
| ಅಡವಿಕಟ್ಟೆ (ಕ) | 2 ಪ್ರದರ್ಶನಗಳು |
| ಇಷ್ಕ್ (ಕ) | 2 ಪ್ರದರ್ಶನಗಳು |

### ಡಿಆರ್‌ಸಿ ಸಿನಿಮಾಸ್
ದೂ : 4240422/4241800

| | |
|---|---|
| ಸ್ಕ್ರೀನ್ 1 | ರಾಯನ್ (ತ): ಬೆ.10.40ಕ್ಕೆ, ಮ.1.30ಕ್ಕೆ, ರಾ.10ಕ್ಕೆ, ಔರಾನ್ ಮೇ ಕಹಾನ್ ದಮ್ ಥಾ (ಹಿಂ): ಸಂ.4.20ಕ್ಕೆ, ರಾ.7.10ಕ್ಕೆ |
| ಸ್ಕ್ರೀನ್ 2 | ಮರ್ಸ್ಯು ಪಿಡಿಕಥಾ ಮನಿಥನ್ (ತ): ಮ.1ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.35ಕ್ಕೆ, ಕಲ್ಕಿ 2898 ಎಡಿ (ಕ): ರಾ.7ಕ್ಕೆ, ಔರಾನ್ ಮೇ ಕಹಾನ್ ದಮ್ ಥಾ (ಹಿಂ): ಬೆ.10.25ಕ್ಕೆ. |
| ಸ್ಕ್ರೀನ್ 3 | ಇಷ್ಕ್ (ಕ): ಬೆ.10.45ಕ್ಕೆ, ಹೆಬ್ಬುಲಿ (ಕ): ಮ.1.40ಕ್ಕೆ, ಬಡ್ಡಿ (ತೆ): ಸಂ.4.30ಕ್ಕೆ, ಶಿವಂ ಭಜೆ (ತೆ): ರಾ.7.20ಕ್ಕೆ, ರೂಪಾಂತರ (ಕ): ರಾ.9.55ಕ್ಕೆ |
| ಸ್ಕ್ರೀನ್ 4 | ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.45ಕ್ಕೆ, ಮ.1.30ಕ್ಕೆ, ಸಂ.4.15ಕ್ಕೆ, ರಾ.7ಕ್ಕೆ, ರಾ.9.45ಕ್ಕೆ. |

### ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

| | |
|---|---|
| ಸ್ಕ್ರೀನ್ 1 | ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ. |
| ಸ್ಕ್ರೀನ್ 2 | ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ. |
| ಸ್ಕ್ರೀನ್ 3 | ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ. |
| ಸ್ಕ್ರೀನ್ 4 | ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ. |

### ಮೈಸೂರು ವಿಷನ್ ಸಿನಿಮಾ
ದೂ : 0821-2973519

| | |
|---|---|
| ಸ್ಕ್ರೀನ್ 1 | ರೂಪಾಂತರ (ಕ): ಬೆ.10.35ಕ್ಕೆ, ಲವ್ ಲಿ (ಕ): ಮ.1ಕ್ಕೆ, ಕೆಂಡ (ಕ): ಮ.3.50ಕ್ಕೆ, ಫ್ಯಾಮಿಲಿ ಡ್ರಾಮ (ಕ): ಸಂ.6.25ಕ್ಕೆ, ವಿದ್ಯಾರ್ಥಿ ವಿದ್ಯಾರ್ಥಿನಿಯರೆ (ಕ): ರಾ.9.15ಕ್ಕೆ. |
| ಸ್ಕ್ರೀನ್ 2 | ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.30ಕ್ಕೆ, ರಾ.7ಕ್ಕೆ, ರಾಯನ್ (ತೆ): ಮ.1.15ಕ್ಕೆ, ಸಂ.4.10ಕ್ಕೆ, ರಾ.9.30ಕ್ಕೆ. |
| ಸ್ಕ್ರೀನ್ 3 | ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಮ.1.25ಕ್ಕೆ, ಸಂ.4ಕ್ಕೆ, ರಾ.9.20ಕ್ಕೆ, ರಾಯನ್ (ತ): ಸಂ.6.30ಕ್ಕೆ. |
| ಸ್ಕ್ರೀನ್ 4 | ರಾಯನ್ (ತ): ಬೆ.10.30ಕ್ಕೆ, ಕಲ್ಕಿ 2898 ಎಡಿ (ಕ): ಮ.1.15ಕ್ಕೆ, ರೂಪಾಂತರ (ಕ): ಸಂ.4.35ಕ್ಕೆ, ರಾ.9ಕ್ಕೆ, ರುದ್ರವೀಣ (ತೆ): ರಾ.7ಕ್ಕೆ. |

### ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

## ಮಗುವಿನ ಪ್ರಾಣ ತೆಗೆದ ಮೊಬೈಲ್ ಚಾರ್ಜರ್; ಪೋಷಕರೇ ಎಚ್ಚರ ಎಚ್ಚರ

**ತೆಲಂಗಾಣ:** ಕೇವಲ ಮೊಬೈಲ್ ಚಾರ್ಜರ್ ಮಗುವಿನ ಪ್ರಾಣವನ್ನೇ ತೆಗೆದಿದೆ. ಒಂದೂವರೆ ವರ್ಷದ ಬಾಲಕಿ ಕರೆಂಟ್‌ಗೆ ಕನೆಕ್ಟ್ ಆಗಿದ್ದ ಮೊಬೈಲ್ ಚಾರ್ಜರ್ ಕೇಬಲ್ ಅನ್ನು ಬಾಯೊಳಗೆ ಹಾಕಿದ್ದಾಳೆ. ತೆಲಂಗಾಣದ ನಿರ್ಮಲ್ ಜಿಲ್ಲೆಯ ಕಡಂ ಮಂಡಲದ ಕೋಟ ಮಡ್ಡಿಪಡಗ ಗ್ರಾಮದಲ್ಲಿ ಈ ದುರಂತ ನಡೆದಿದೆ. ಮನೆಯಲ್ಲಿ ಸ್ವಿಚ್ ಬೋರ್ಡ್‌ಗೆ ಮೊಬೈಲ್ ಚಾರ್ಜರ್ ಅನ್ನು ಸಿಕ್ಕಿಸಿ ಹಾಗೇ ಬಿಟ್ಟಿದ್ದರು. ಇದನ್ನು ನೋಡಿ ಮಗು ಬಾಯಿಗೆ ಹಾಕಿಕೊಂಡಿದ್ದಾಳೆ. ಇದರಿಂದ ತಕ್ಷಣ ಮಗುವಿಗೆ ಶಾಕ್ ಹೊಡೆದು ಪ್ರಜ್ಞೆ ತಪ್ಪಿ ಬಿದ್ದಿದ್ದಾಳೆ. ಇದನ್ನು ನೋಡಿ ಪೋಷಕರು ಆ ಕ್ಷಣವೇ ಮಗುವನ್ನು ಖಾನಾಪುರ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ. ಆದರೆ ಮಗು ಅದಾಗಲೇ ಮೃತಪಟ್ಟಿರುವುದಾಗಿ ವೈದ್ಯರು ಖಚಿತಪಡಿಸಿದ್ದಾರೆ.

# ದೇಶ - ವಿದೇಶ

## ಕೇವಲ ಸ್ಮಾರ್ಟ್‌ಫೋನ್ ಬಳಕೆಯಿಂದ 80 ಕೋಟಿ ಜನರಿಗೆ ಬಡತನದಿಂದ ವಿಮುಕ್ತಿ



**ವಿಶ್ವಸಂಸ್ಥೆ:** ಭಾರತದ ಡಿಜಿಟಲ್ ಕ್ರಾಂತಿ ಹಾಗೂ ದೇಶದ ಗ್ರಾಮೀಣ ಭಾಗಗಳಲ್ಲಿ ಬ್ಯಾಂಕಿಂಗ್ ಸೇವೆಯ ವಿಸ್ತರಣೆಯನ್ನು ಶ್ಲಾಘಿಸಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ (ಯುಎನ್‌ಜಿಎ) ಅಧ್ಯಕ್ಷ ಡೆನ್ನಿಸ್ ಫ್ರಾನ್ಸಿಸ್, ಕೇವಲ ಸ್ಮಾರ್ಟ್‌ಫೋನ್ ಬಳಕೆಯಿಂದಲೇ ಕಳೆದ 5-6 ವರ್ಷಗಳಲ್ಲಿ 80 ಕೋಟಿ ಭಾರತೀಯರನ್ನು ಬಡತನದಿಂದ ಮೇಲೆತ್ತಲಾಗಿದೆ ಎಂದು ಹೇಳಿದ್ದಾರೆ.

'ವರ್ತಮಾನದ ಹಾಗೂ ಭವಿಷ್ಯದ ಪೀಳಿಗೆಗಳಿಗೆ ಶೂನ್ಯ ಹಸಿವನ್ನು ಸಾಧಿಸುವ ನಿಟ್ಟಿನಲ್ಲಿ ಪ್ರಗತಿಯನ್ನು ಚುರುಕುಗೊಳಿಸುವಿಕೆ' ವಿಷಯ ಕುರಿತಾಗಿ ಆಹಾರ ಹಾಗೂ ಕೃಷಿ ಸಂಘಟನೆ (ಎಫ್‌ಎಒ) ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಿಜಿಟಲೀಕರಣವು ದೇಶವೊಂದರ ತ್ವರಿತ ಅಭಿವೃದ್ಧಿಗೆ ಮೂಲ ಶಕ್ತಿಯನ್ನು ಒದಗಿಸುತ್ತದೆ. ಉದಾಹರಣೆಗೆ ಭಾರತ ಸಂಗತಿಯನ್ನು ತೆಗೆದುಕೊಳ್ಳಿ. ಭಾರತವು ಕೇವಲ ಸ್ಮಾರ್ಟ್‌ಫೋನ್‌ಗಳ ಬಳಕೆಯಿಂದಲೇ ಕಳೆದ ಐದರಿಂದ ಆರು ವರ್ಷಗಳಲ್ಲಿ 80 ಕೋಟಿ ಜನರನ್ನು ಬಡತನದಿಂದ ಮೇಲೆತ್ತುವಲ್ಲಿ ಯಶಸ್ವಿಯಾಗಿದೆ ಎಂದು ಹೊಗಳಿದರು.

## ವಿಮಾನದಲ್ಲಿ ಯುವತಿಯರಿಗೆ ಲೈಂಗಿಕ ದೌರ್ಜನ್ಯ: ಅಮೆರಿಕದಲ್ಲಿ ಭಾರತೀಯ ಸೇರಿದಂತೆ ಇಬ್ಬರಿಗೆ ಜೈಲು



**ನ್ಯೂಯಾರ್ಕ್ (ಅಮೆರಿಕ):** ವಿಮಾನದಲ್ಲಿ ಬಾಲಕಿ ಹಾಗೂ ಯುವತಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಓರ್ವ ಭಾರತೀಯ ಸೇರಿ ಇಬ್ಬರು ಆರೋಪಿಗಳನ್ನು ಅಮೆರಿಕ ಪೊಲೀಸರು ಜೈಲಿಗೆ ಅಟ್ಟಿದ್ದಾರೆ.

ಭಾರತ ಮೂಲದ 39 ವರ್ಷ ವಯಸ್ಸಿನ ಅಭಿನವ್ ಕುಮಾರ್‌ಗೆ ಅಮೆರಿಕ ನ್ಯಾಯಾಲಯ 15 ತಿಂಗಳು ಕಾರಾಗೃಹ ಶಿಕ್ಷೆ ವಿಧಿಸಿದೆ. ಆತನ ವಿರುದ್ಧ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಇದೆ. ಬಂಧಿತ ಅಭಿನವ್ ಕುಮಾರ್ ವಿರುದ್ಧ ಮೇ ತಿಂಗಳಲ್ಲಿ ಮೂರು ದಿನಗಳ ಕಾಲ ವಿಚಾರಣೆ ನಡೆಸಿದ ನ್ಯಾಯಾಲಯ ತೀರ್ಪು ನೀಡಿದೆ.

2024ರ ಫೆಬ್ರವರಿಯಲ್ಲಿ ಅಭಿನವ್ ಕುಮಾರ್ ವಿಮಾನದಲ್ಲಿ ದುಬೈನಿಂದ ಅಮೆರಿಕದ ಸಿಯಾಟಲ್‌ಗೆ ಹೊರಟಿದ್ದ. ಈ ವೇಳೆ ಎಮಿರೇಟ್ಸ್ ವಿಮಾನದಲ್ಲಿ ಮಲಗಿ ನಿದ್ರಿಸುತ್ತಿದ್ದ ಬಾಲಕಿ ಮೇಲೆ ಈತ ಲೈಂಗಿಕ ದೌರ್ಜನ್ಯ ಎಸಗಿದ್ದ. ವಿಮಾನವು ಅಮೆರಿಕದ ಸಿಯಾಟಲ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಆದ ಕೂಡಲೇ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದಿದ್ದರು.

## 31 ವರ್ಷಗಳಿಂದ ರೇಪ್: ಪ್ರಕರಣವನ್ನೇ ರದ್ದುಗೊಳಿಸಿದ ಕೋರ್ಟ್



**ಮುಂಬೈ:** 1987 ರಿಂದ ಅಂದರೆ ಬರೋಬ್ಬರಿ 31 ವರ್ಷಗಳ ಕಾಲ ತನ್ನ ಮೇಲೆ ಅತ್ಯಾಚಾರ ನಡೆಸಿದ್ದಾರೆ ಎಂದು 73 ವರ್ಷದ ಪುರುಷನ ವಿರುದ್ಧ ಮಹಿಳೆ ದಾಖಲಿಸಿದ್ದ ಪ್ರಕರಣವನ್ನು ಬಾಂಬೆ ಹೈಕೋರ್ಟ್ ರದ್ದುಗೊಳಿಸಿದೆ. ಜೊತೆಗೆ ಅವರ ಸಂಬಂಧವು ಸಹಮತದಿಂದ ಕೂಡಿದೆ ಎಂದು ಕೋರ್ಟ್ ಹೇಳಿದೆ.

ನ್ಯಾಯಮೂರ್ತಿಗಳಾದ ಎ ಎಸ್ ಗಡ್ಕರಿ ಮತ್ತು ನೀಲಾ ಗೋಖಲೆ ಅವರ ವಿಭಾಗೀಯ ಪೀಠವು ಈ ಪ್ರಕರಣವು ಒಮ್ಮತದ ಸಂಬಂಧವನ್ನು ಸ್ಪಷ್ಟವಾಗಿ ಸೂಚಿಸುತ್ತದೆ ಎಂದು ಹೇಳಿದೆ. ಎಫ್‌ಐಆರ್ ಅನ್ನು 2018 ರಲ್ಲಿ ದಾಖಲಿಸಲಾಗಿದೆ, ವಿಳಂಬಕ್ಕೆ ಯಾವುದೇ ವಿವರಣೆಯಿಲ್ಲ ಎಂದು ಪೀಠವು ಗಮನಿಸಿದೆ. ಕಕ್ಷಿದಾರರು ಸುಮಾರು 31 ವರ್ಷಗಳಿಂದ ಲೈಂಗಿಕ ಸಂಬಂಧದಲ್ಲಿ ತೊಡಗಿದ್ದರು. ದೂರುದಾರರು ಸಂಬಂಧಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಬಗ್ಗೆ ಒಂದು ಮಾತನ್ನೂ ಹೇಳಲಿಲ್ಲ. ಪುರುಷನ ಜೊತೆಗಿನ ಸಂಬಂಧವು ಹದಗೆಟ್ಟ ನಂತರ ಮಹಿಳೆ ಠಾಣೆ ದೂರು ನೀಡಿದ್ದಾಳೆ ಎಂದು ನ್ಯಾಯಾಲಯ ಹೇಳಿದೆ.

## ಟ್ರಾಕ್ಟರ್‌ನಲ್ಲಿ ಕ್ವಿಂಟಾಲ್‌ಗಟ್ಟಲೆ ಡ್ರಗ್ ಸಾಗಾಟ: ಅಮೆರಿಕದಲ್ಲಿ ಇಬ್ಬರು ಭಾರತೀಯರ ಬಂಧನ



**ವಾಷಿಂಗ್ಟನ್ (ಅಮೆರಿಕ):** ಸುಮಾರು 10 ಮಿಲಿಯನ್ ಅಮೆರಿಕನ್ ಡಾಲರ್ ಮೌಲ್ಯದ ಮಾದಕ ವಸ್ತುಗಳನ್ನು ಸಾಗಣೆ ಮಾಡುತ್ತಿದ್ದ ಇಬ್ಬರು ಭಾರತೀಯ ಪ್ರಜೆಗಳನ್ನು ಅಮೆರಿಕದಲ್ಲಿ ಬಂಧಿಸಲಾಗಿದೆ. ಅಮೆರಿಕದ ನ್ಯಾಯ ಇಲಾಖೆ ನಡೆಸಿದ ಕಾರ್ಯಾಚರಣೆಯಲ್ಲಿ 28 ವರ್ಷ ವಯಸ್ಸಿನ ಸಿಮ್ರನ್‌ಜಿತ್ ಸಿಂಗ್ ಹಾಗೂ 19 ವರ್ಷ ವಯಸ್ಸಿನ ಗುಸಿಮ್ರತ್ ಸಿಂಗ್ ಬಂಧನಕ್ಕೆ ಒಳಗಾಗಿದ್ದಾರೆ. ಈ ಆರೋಪಿಗಳು ಮಾದಕ ವಸ್ತುಗಳನ್ನು ಹಂಚಿಕೆ ಮಾಡಲು ಕ್ಯಾಲಿಫೋರ್ನಿಯಾ ರಾಜ್ಯದ ಫ್ರೆಸ್ನೋಗೆ ತೆಗೆದಕೊಂಡು ಬಂದಿದ್ದರು. ಇಬ್ಬರೂ ಆರೋಪಿಗಳನ್ನೂ ಬಂಧನ ಮಾಡಿದ ಬಳಿಕ ಬೋಸ್ಟನ್ ರಾಜ್ಯದ ಫೆಡರಲ್ ನ್ಯಾಯಾಲಯಕ್ಕೆ ಹಾಜರು ಪಡಿಸಲಾಗಿತ್ತು. ಆರೋಪಿಗಳು 400 ಕೆಜಿ ತೂಕದ 10.5 ಮಿಲಿಯನ್ ಡಾಲರ್ ಬೆಲೆಯ ಮಾದಕ ವಸ್ತು ಕೊಕೇನ್ ಅನ್ನು ಇಟ್ಟಿಗೆಗಳ ರೂಪದಲ್ಲಿ ಟ್ರಾಕ್ಟರ್‌ನ ಟ್ರೇಲರ್ ಒಳಗೆ ಅಡಗಿಸಿಟ್ಟಿದ್ದರು.

## ಕೋರ್ಟ್‌ನಲ್ಲಿ ತಂದೆ ಪಾಲಾದ ಮಗು ಕಿಡ್ನ್ಯಾಪ್ ಮಾಡಿದ ತಾಯಿ



**ಬೆಂಗಳೂರು:** ಕೌಟುಂಬಿಕ ಕಲಹದ ಹಿನ್ನೆಲೆ ತಾಯಿಯೊಬ್ಬಳು ತನ್ನ ಮಗುವನ್ನು ಸ್ನೇಹಿತನ ಜೊತೆಗೆ ಬಂದು ಕಿಡ್ನಾಪ್ ಮಾಡಿದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಮಗುವನ್ನು ಕಿಡ್ನ್ಯಾಪ್ ಮಾಡುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಬೆಂಗಳೂರು ಹೊರವಲಯದ ಕೆ.ಆರ್ ಪುರಂನಲ್ಲಿ ಘಟನೆ ನಡೆದಿದ್ದು, ಮಗುವಿನ ತಾಯಿ ಅನುಪಮ ಮತ್ತು ಆತನ ಸ್ನೇಹಿತ ಸೇರಿ ಈ ಕೃತ್ಯ ನಡೆಸಿದ್ದಾರೆ.

ಪತಿ ಸಿದ್ದಾರ್ಥ ಮತ್ತು ಪತ್ನಿ ಅನುಪಮ ನಡುವೆ ಕೌಟುಂಬಿಕ ಕಲಹ ಹಿನ್ನೆಲೆಯಲ್ಲಿ ದೂರಾವಾಗಿದ್ದರು. 2014 ರಲ್ಲಿ ವಿವಾಹವಾಗಿದ್ದ ಅನುಪಮ ಹಾಗೂ ಸಿದ್ಧಾರ್ಥ್ ಅವರ ಕೌಟುಂಬಿಕ ಕಲಹ ಪ್ರಕರಣ ಕೋರ್ಟ್‌ನಲ್ಲಿದೆ. ಮಗುವಿಗೆ ಆರೂವರೆ ವರ್ಷವಾಗಿದ್ದು, ಮಗುವನ್ನು ಪತಿ ಸಿದ್ದಾರ್ಥಗೆ ನೀಡಿ ಕೋರ್ಟ್ ಆದೇಶಿಸಿತ್ತು. ಅಪಾರ್ಟ್‌ಮೆಂಟ್ ಮುಂಭಾಗ ಸ್ಕೂಲ್‌ಗೆ ಹೋಗಲು ಮಗು ನಿಂತಿದ್ದಾಗ ಅನುಪಮ ಕಿಡ್ನ್ಯಾಪ್ ಮಾಡಿದ್ದಾಳೆ.

ಇಂದು ಬೆಳಗ್ಗೆ ಮಗುವಿನ ತಾತ ಶಾಲೆಗೆ ಬಿಡಲು ಬಂದಾಗ ಖಾಸಗಿ ಅಪಾರ್ಟ್ ಮೆಂಟ್ ಮುಂಭಾಗ ಮೊಮ್ಮಗನನ್ನು ಕಿಡ್ನಾಪ್ ಮಾಡಲಾಗಿದೆ.


ಒಂದೇ ನಾಡು ಒಂದೇ ಕುಲ ಒಂದೇ ದೈವ
ಜಯ ಕರ್ನಾಟಕ
ಕಟ್ಟೋಣ ನಾವು ಹೊಸ ನಾಡೊಂದನು
JAYAKARNATAKA
ಮೈಸೂರು ಜಿಲ್ಲೆ
ಶ್ರೀಯುತ ಎನ್. ಮುತ್ತಪ್ಪ ರೈ
ಸಂಸ್ಥಾಪಕರು
ಬಿ.ಎನ್. ಜಗದೀಶ್
ರಾಜ್ಯಾಧ್ಯಕ್ಷರು
ಗುರು ಪ್ರಸಾದ್
ಮೈಸೂರು ಜಿಲ್ಲಾ ಗೌರವಾಧ್ಯಕ್ಷರು
ವಿಜಯಗೌಡ
ರಾಜ್ಯ ಸಂಘಟನಾ ಕಾರ್ಯದರ್ಶಿಗಳು
ಶ್ರೀ ಹರ್ಷಗೌಡ್ರು
ಮೈಸೂರು ನಗರ ಅಧ್ಯಕ್ಷರು
ಜಯ ಕರ್ನಾಟಕ ಸಂಘಟನೆಯ
ನೂತನ ಮೈಸೂರು ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆಯಾಗಿರುವಂತಹ
ಶ್ರೀಧರ್
ಮೈಸೂರು ಜಿಲ್ಲಾ ಸಲಹೆಗಾರರು
ಕಾಂತರಾಜು ಹೆಚ್.ಎಸ್
ಮೈಸೂರು ಜಿಲ್ಲಾ ಉಪಾಧ್ಯಕ್ಷರು
ಶ್ರೀಯುತ ಲಾರಿ ಶ್ರೀನಿವಾಸ್ ರವರಿಗೆ
ಅಭಿನಂದನೆಗಳು
ಸಂದೇಶ್ ಕುಮಾರ್ ಸಿ.ಕೆ
ಮೈಸೂರು ನಗರ ಉಪಾಧ್ಯಕ್ಷರು
ಉಮೇಶ್ ಕುಮಾರ್
ಮೈಸೂರು ಜಿಲ್ಲೆ ಸಲಹೆಗಾರರು
ಲಿಂಗರಾಜು
ಮೈಸೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು
ಜೇತನ್ ಹೆಚ್.ಪಿ
ಮೈಸೂರು ನಗರ ಪ್ರಧಾನ ಕಾರ್ಯದರ್ಶಿಗಳು
ಸುರೇಶ್
ಮೈಸೂರು ತಾಲ್ಲೂಕು ಅಧ್ಯಕ್ಷರು
ಮಂಜುನಾಥ್
ಮೈಸೂರು ಜಿಲ್ಲಾ ಕಾರ್ಯದರ್ಶಿಗಳು
ಸಂಜಯ್ ಸಿಂಗ್
ಮಂಜುನಾಥ್
ಮೈಸೂರು ಜಿಲ್ಲಾ ಕಾರ್ಯದರ್ಶಿಗಳು
ಸತೀಶ್
ಮೈಸೂರು ಜಿಲ್ಲಾ ಕಾರ್ಯದರ್ಶಿಗಳು
ಪಣೀಶ್
ಮೈಸೂರು ನಗರ ಸಲಹೆಗಾರರು
ಪ್ರಕಟಣೆ : ವಿಜಯಗೌಡ ರಾಜ್ಯ ಸಂಘಟನಾ ಕಾರ್ಯದರ್ಶಿಗಳು
ಸಂಪರ್ಕಿಸಿ : ಲಾರಿ ಶ್ರೀನಿವಾಸ್ 9538959959


Happy @ 300
ಕಲ್ಯಾಣ್ ಜ್ಯುವೆಲ್ಲರ್ಸ್
CELEBRATING 300 SHOWROOMS
Get ₹300 OFF PER GRAM ON MAKING CHARGES ON GOLD JEWELLERY*
Get ₹300 OFF PER CARAT ON PRECIOUS JEWELLERY*
Get ₹600 OFF PER CARAT ON UNCUT JEWELLERY*
Get ₹9000 OFF PER CARAT ON DIAMOND JEWELLERY*
*T&C apply. Limited period offer. Offer not applicable on special priced items, package invoices & 0% schemes.
OPEN ON ALL DAYS
FOR MORE DETAILS CONTACT US ON TOLL FREE NUMBER: 1800 425 7333 | WWW.KALYANJEWELLERS.NET | FOLLOW US ON
BUY ONLINE @ WWW.CANDERE.COM | FOR INSTITUTIONAL REQUIREMENTS, WRITE TO B2BINDIA@KALYANJEWELLERS.NET




NISSAN
ಕೈಗೆಟುಕುವ ಬೆಲೆಯಲ್ಲಿ ಉತ್ತಮ ಸ್ವಯಂಚಾಲಿತ (AMT) ಕಾರು
GLOBAL NCAP
MAGNITE
NO EXTRA COSTS NO STRESS
3 YEAR PRE-PAID MAINTENANCE PROGRAMME
ಸ್ವಯಂಚಾಲಿತ AMT ಈಗ ರೂ.6.59 ಲಕ್ಷ
ನಿಸ್ಸಾನ್ ಮ್ಯಾಗ್ನೈಟ್ ಭಾರತದಲ್ಲಿ 1 ಲಕ್ಷಕ್ಕೂ ಹೆಚ್ಚು ಯುನಿಟ್‌ಗಳನ್ನು ಮಾರಾಟ ಮಾಡಿ, 3 ವರ್ಷಗಳ ಕಾಲ ತನ್ನ ಯಶಸ್ವಿ ಓಟವನ್ನು ಮುಂದುವರೆಸಿದೆ.
ಮ್ಯಾಗ್ನೈಟ್‌ನ ಈ ಜನಪ್ರಿಯ ಆಟೋಮ್ಯಾಟಿಕ್ ಟ್ರಾನ್ಸ್‌ಮಿಷನ್ (AMT) ಮಾಡೆಲ್ ಈಗ ರೂ. 6.59 ಲಕ್ಷಗಳಲ್ಲಿ ನಿಮ್ಮದಾಗಿಸಿಕೊಳ್ಳಿ.
ನಿಸ್ಸಾನ್ ಮ್ಯಾಗ್ನೈಟ್ CSDಗಳಲ್ಲೂ ಲಭ್ಯ.
ಆಕರ್ಷಕ ಕಾರ್ಪೊರೇಟ್ ಆಫರ್ಸ್ ಸೌಲಭ್ಯ.
ಇಂದೇ ನಿಮ್ಮ ಮ್ಯಾಗ್ನೈಟ್ ಬುಕ್ ಮಾಡಿ, 3 ವರ್ಷಗಳ ಪ್ರೀ-ಪೇಯ್ಡ್ ಮೇಂಟೆನೆನ್ಸ್ ಪ್ಯಾಕೇಜ್ ಮತ್ತು 1.02 ಲಕ್ಷ* ರೂ. ಗಳಷ್ಟು ಗ್ರಾಹಕರ ಆಫರ್ ಪಡೆಯಿರಿ.
ನಿಮ್ಮ ಹಳೆ ಕಾರುಗಳಿಗೆ ಆಕರ್ಷಕ ಎಕ್ಸ್‌ಚೇಂಜ್ ಲಾಭ ಪಡೆಯಿರಿ.
6.99% ಬಡ್ಡಿದರದ ಸಾಲ ಸೌಲಭ್ಯವಿದೆ.
ನೀವು ಆಯ್ಕೆ ಮಾಡುವ SUV, ಮ್ಯಾಗ್ನೈಟ್ ಆಗಿರಲಿ.
MAGNITE CLASS-LEADING FEATURES
First-in-segment Around View Monitor
Wireless Connectivity to Android Auto & Apple CarPlay
First-in-segment Turbo X-Tronic CVT
First-in-segment 17.78 cm TFT Advanced Drive Assist Display
HONNASSIRI NISSAN
Hunsur Main Road, Hinkal, Mysore | 7669061132


ನಾಲ್ಕನೇ ವರ್ಷದ ಪುಣ್ಯಸ್ಮರಣೆ
ಶ್ರೀ ಎನ್. ರಾಜೇಂದ್ರ
(ಲೇಟ್ ನಿಂಗಯ್ಯನವರ ಮಗ)
ನೀವು ನಮ್ಮನ್ನಗಲಿ ಇಂದಿಗೆ 4 ವರ್ಷ ಕಳೆದರೂ ನೀವು ತೋರಿಸಿಕೊಟ್ಟ ದಾರಿಯಲ್ಲಿ ನಡೆಯುತ್ತಿರುವ ಹಾಗೂ ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು:
ಧರ್ಮಪತ್ನಿ ಜಯಶ್ರೀ ಮತ್ತು ಮಕ್ಕಳು ಮತ್ತು ಅಳಿಯಂದಿರು
ಎನ್. ರವಿಗೌಡರು ಮತ್ತು ಸಹೋದರರು ಹಾಗೂ
ಲೇಟ್ ಯಜಮಾನ್ ಮರವೇಗೌಡರು ಮತ್ತು ನಿಂಗಯ್ಯ
ಕುಟುಂಬವರ್ಗದವರು, ಕೆ.ಜಿ.ಕೊಪ್ಪಲು, ಮೈಸೂರು